Volume : 9 | Issue : 187 | October : 13 : 2026 : Tuesday
ಸಂಪುಟ : 9 | ಸಂಚಿಕೆ : 187 | ಅಕ್ಟೋಬರ್ : 13 : 2026 : ಮಂಗಳವಾರ
www.VIKRAMAVAHINI.com
ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ

# ವಿಕ್ರಮ ವಾಹಿನಿ

ಪುಟ 4 ₹2 || ಕನ್ನಡ ದಿನಪತ್ರಿಕೆ ||
VIKRAMA VAHINI
PRGI NO: KARKAN/2018/78481



ನಟಿ ತಪಸ್ವಿನಿ ಪೂಣಚ್ಚ ಅವರಿಗೆ ಕರೆ ಮಾಡಿ 'ಪ್ರೇಮದ ಊರಲಿ' ಚಿತ್ರದ ಯಶಸ್ಸಿಗೆ ಅಭಿನಂದನೆ ಸಲ್ಲಿಸಿದ ನಟಿ ರಶ್ಮಿಕಾ ಮಂದಣ್ಣ. ಕೊಡಗಿನ ಯುವ ನಟಿಯ ಸಾಧನೆಗೆ ಮೆಚ್ಚುಗೆ ವ್ಯಕ್ತಪಡಿಸಿದ ರಶ್ಮಿಕಾ, ಅವರ ಮುಂದಿನ ಸಿನಿಪಯಣಕ್ಕೆ ಶುಭ ಹಾರೈಸಿದರು.

ಡಲ್ಲಾಸ್‌ನಲ್ಲಿ ಪುತ್ತಿಗೆ ಶ್ರೀಗಳಿಗೆ ಭವ್ಯ ಗುರುವಂದನೆ ಪುಟ 3

'ಕಾಲ ಉತ್ತರಿಸುತ್ತದೆ' ಎನ್ನುವುದು ತನಿಖೆಗೆ ಪರ್ಯಾಯವಲ್ಲ ಪುಟ 4



## ■ ಸುದ್ದಿ ಚುಟುಕು

## ಜ್ಞಾನೇಶ್ ರಾಜೀನಾಮೆಗೆ ಆಗ್ರಹ: 2ನೇ ದಿನವೂ 200ಕ್ಕೂ ಹೆಚ್ಚು ಮಂದಿ ವಶ

● ವಿಕ್ರಮ ವಾಹಿನಿ । ನವದೆಹಲಿ

ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರ ರಾಜೀನಾಮೆಗೆ ಆಗ್ರಹಿಸಿ ದೆಹಲಿಯಲ್ಲಿ ನಡೆಯುತ್ತಿರುವ ಪ್ರತಿಭಟನೆ ಎರಡನೇ ದಿನವೂ ತೀವ್ರಗೊಂಡಿದೆ. ಭಾನುವಾರ ಜಂತರ್ ಮಂತರ್ ಕಡೆಗೆ ಮೆರವಣಿಗೆ ನಡೆಸಲು ಯತ್ನಿಸಿದ 200ಕ್ಕೂ ಹೆಚ್ಚು ಪ್ರತಿಭಟನಾಕಾರರನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ.

ಪ್ರತಿಭಟನಾಕಾರರನ್ನು ತಡೆಯಲು ರಾಜಧಾನಿಯ ಪ್ರಮುಖ ಸ್ಥಳಗಳಲ್ಲಿ ಬಿಗಿ ಭದ್ರತೆ ಕೈಗೊಳ್ಳಲಾಗಿದೆ.

**ಹಲವು ಕಡೆ ಮೆರವಣಿಗೆಗೆ ತಡೆ:** ಕನ್ನಾಟ್ ಪ್ಲೇಸ್, ರಾಜೀವ್ ಚೌಕ್, ಆರ್‌ಕೆ ಆಶ್ರಮ ಮಾರ್ಗ್ ಮೆಟ್ರೋ ನಿಲ್ದಾಣ, ವಿಜಯ್ ಚೌಕ್ ಹಾಗೂ ಗುರುದ್ವಾರ ಬಾಂಗ್ಲಾ ಸಾಹಿಬ್ ಸೇರಿದಂತೆ ವಿವಿಧೆಡೆ ಪ್ರತಿಭಟನಾಕಾರರು ಜಮಾಯಿಸಿ ಘೋಷಣೆಗಳನ್ನು ಕೂಗಿದರು. ಜ್ಞಾನೇಶ್ ಕುಮಾರ್ ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿದ ಪ್ರತಿಭಟನಾಕಾರರು ಜಂತರ್ ಮಂತರ್ ತಲುಪಲು ಯತ್ನಿಸಿದಾಗ ಪೊಲೀಸರು ಅವರನ್ನು ತಡೆದು ವಶಕ್ಕೆ ಪಡೆದರು.

ಕಾಕ್ರೋಚ್ ಜನತಾ ಪಾರ್ಟಿ (ಸಿಜೆಪಿ) ಬೆಂಬಲಿಗರ ಜತೆಗೆ ಸ್ಟೂಡೆಂಟ್ಸ್ ಫೆಡರೇಶನ್ ಆಫ್ ಇಂಡಿಯಾ (ಎಸ್‌ಎಫ್‌ಐ), ಆಲ್ ಇಂಡಿಯಾ ಸ್ಟೂಡೆಂಟ್ಸ್ ಅಸೋಸಿಯೇಷನ್ (ಎಐಎಸ್‌ಎ) ಮತ್ತು ಕ್ರಾಂತಿಕಾರಿ ಯುವ ಸಂಘಟನೆ (ಕೆವೈಎಸ್) ಕಾರ್ಯಕರ್ತರೂ ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು. ವಶಕ್ಕೆ ಪಡೆದವರಲ್ಲಿ ಸಿಪಿಐ(ಎಂ) ರಾಜ್ಯಸಭಾ ಸಂಸದ ಜಾನ್ ಬ್ರಿಟ್ಟಾಸ್ ಕೂಡ ಸೇರಿದ್ದಾರೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ.

**ಪೊಲೀಸರ ವಿರುದ್ಧ ಹಲ್ಲೆ ಆರೋಪ:** ವಶಕ್ಕೆ ಪಡೆಯುವ ವೇಳೆ ಪೊಲೀಸರು ತಮ್ಮ ನಾಯಕರ ಮೇಲೆ ಹಲ್ಲೆ ನಡೆಸಿದ್ದಾರೆ ಎಂದು ಎಸ್‌ಎಫ್‌ಐ ಆರೋಪಿಸಿದೆ. ಸಂಸದ ಜಾನ್ ಬ್ರಿಟ್ಟಾಸ್ ಅವರನ್ನು ಪೊಲೀಸರು ಹಲ್ಲೆಗೊಳಪಡಿಸಿ, ಗಾಯಗೊಂಡ ಸ್ಥಿತಿಯಲ್ಲಿ ರಸ್ತೆ ಬದಿ ಬಿಟ್ಟಿದ್ದಾರೆ ಎಂದೂ ಸಂಘಟನೆ ದೂರಿದೆ. 2ನೇ ಪುಟಕ್ಕೆ...

# ಎಸ್‌ಐಆರ್: ದಿಲ್ಲಿಯಲ್ಲಿ ಹೈಕಮಾಂಡ್ ಚಕ್ಕಾ ಜಾಮ್!

**ಸಿಇಸಿ ಜ್ಞಾನೇಶ್ ಕುಮಾರ್ ರಾಜೀನಾಮೆ ನೀಡಿ ಮಾಫಿ ಸಾಕ್ಷಿಯಾಗಬೇಕು ಎಂದು ರಾಹುಲ್ ಗಾಂಧಿ ಆಗ್ರಹಿಸಿದ್ದಾರೆ. ಚುನಾವಣಾ ಪ್ರಕ್ರಿಯೆಯಲ್ಲಿನ ಅಕ್ರಮಗಳ ಆರೋಪ ಹಾಗೂ ದೆಹಲಿಯ ಬಿಗಿ ಭದ್ರತಾ ಕ್ರಮಗಳನ್ನು ಖಂಡಿಸಿದ ಅವರು, ನ್ಯಾಯ ದೊರೆಯುವವರೆಗೆ ಹೋರಾಟ ಮುಂದುವರಿಸುವುದಾಗಿ ಎಚ್ಚರಿಸಿದ್ದಾರೆ. ಕೇಂದ್ರ ಸರ್ಕಾರ ಚುನಾವಣಾ ಆಯುಕ್ತರನ್ನು ರಕ್ಷಿಸುತ್ತಿದೆ ಎಂದು ಆರೋಪಿಸಿದ ಅವರು, ಪ್ರಜಾಪ್ರಭುತ್ವ ಮತ್ತು ಸಂವಿಧಾನದ ರಕ್ಷಣೆಗಾಗಿ ಇಂಡಿಯಾ ಮೈತ್ರಿಕೂಟ ಒಗ್ಗಟ್ಟಿನಿಂದ ಹೋರಾಡಲಿದೆ ಎಂದರು.**

● ವಿಕ್ರಮ ವಾಹಿನಿ । ನವದೆಹಲಿ

ಮುಖ್ಯ ಚುನಾವಣಾ ಆಯುಕ್ತ (ಸಿಇಸಿ) ಜ್ಞಾನೇಶ್ ಕುಮಾರ್ ಅವರು ತಮ್ಮ ಹುದ್ದೆಗೆ ರಾಜೀನಾಮೆ ನೀಡಿ, ಪ್ರಕರಣದಲ್ಲಿ ಮಾಫಿ ಸಾಕ್ಷಿಯಾಗಬೇಕು ಎಂದು ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಆಗ್ರಹಿಸಿದ್ದಾರೆ. ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಸೇರಿದಂತೆ ಚುನಾವಣಾ ಪ್ರಕ್ರಿಯೆಯಲ್ಲಿನ ಅಕ್ರಮಗಳ ಕುರಿತು ವಿರೋಧ ಪಕ್ಷಗಳು ಎತ್ತಿರುವ ಪ್ರಶ್ನೆಗಳಿಗೆ ಉತ್ತರ ಸಿಗುವವರೆಗೆ ಹೋರಾಟ ಮುಂದುವರಿಯಲಿದೆ ಎಂದು ಅವರು ಎಚ್ಚರಿಸಿದ್ದಾರೆ.

ವಿರೋಧ ಪಕ್ಷಗಳ ಇಂಡಿಯಾ ಮೈತ್ರಿಕೂಟವು ಸುಪ್ರೀಂ ಕೋರ್ಟ್‌ಗೆ ಮೆರವಣಿಗೆ ನಡೆಸಲು ಉದ್ದೇಶಿಸಿರುವ ಹಿನ್ನೆಲೆಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ರಾಹುಲ್ ಗಾಂಧಿ, "ಜ್ಞಾನೇಶ್ ಕುಮಾರ್ ಅವರೇ, ನೀವು ತಪ್ಪು ಮಾಡಿದ್ದೀರಿ. ಆದರೆ, ಈ ತಪ್ಪಿನ ಹಿಂದಿನ ಪ್ರಮುಖ ಸೂತ್ರಧಾರ ನೀವಲ್ಲ; ಒತ್ತಡಕ್ಕೆ ಒಳಗಾಗಿ ಕೆಲಸ ಮಾಡುತ್ತಿದ್ದೀರಿ ಎಂಬುದು ನಮಗೆ ತಿಳಿದಿದೆ. ನಡೆದಿರುವ ತಪ್ಪುಗಳನ್ನು ಒಪ್ಪಿಕೊಂಡು ಹುದ್ದೆಗೆ ರಾಜೀನಾಮೆ ನೀಡಿ, ಮಾಫಿ ಸಾಕ್ಷಿಯಾಗಿ" ಎಂದು ಹೇಳಿದರು.

"ಜ್ಞಾನೇಶ್ ಕುಮಾರ್ ಏಕೆ ರಾಜೀನಾಮೆ ನೀಡುತ್ತಿಲ್ಲ ಎಂಬುದನ್ನು ನಾವು ಪ್ರಶ್ನಿಸುತ್ತಿದ್ದೇವೆ. ಸಂವಿಧಾನದ ಆಶಯಗಳು ಗೆಲ್ಲುವವರೆಗೆ ಮತ್ತು ಅವರು ರಾಜೀನಾಮೆ ನೀಡುವವರೆಗೆ ನಮ್ಮ ಹೋರಾಟ ನಿಲ್ಲುವುದಿಲ್ಲ" ಎಂದು ಅವರು ಸ್ಪಷ್ಟಪಡಿಸಿದರು. ಚುನಾವಣಾ ಪ್ರಕ್ರಿಯೆಯ ಪಾರದರ್ಶಕತೆ ಮತ್ತು ಪ್ರಜಾಪ್ರಭುತ್ವದ ರಕ್ಷಣೆಗಾಗಿ ವಿರೋಧ ಪಕ್ಷಗಳು ಒಗ್ಗಟ್ಟಿನಿಂದ ಹೋರಾಡಲಿವೆ ಎಂದರು.

**ದೆಹಲಿಯನ್ನು ಜೈಲಿನಂತೆ ಮಾಡಲಾಗಿದೆ:** ಇಂಡಿಯಾ ಮೈತ್ರಿಕೂಟದ ಮೆರವಣಿಗೆಯ ಹಿನ್ನೆಲೆಯಲ್ಲಿ ದೆಹಲಿಯಲ್ಲಿ ಕೈಗೊಂಡಿರುವ ಬಿಗಿ ಭದ್ರತಾ ಕ್ರಮಗಳನ್ನೂ ರಾಹುಲ್ ಗಾಂಧಿ ಟೀಕಿಸಿದರು. "ಮುಖ್ಯ ಚುನಾವಣಾ ಆಯುಕ್ತರನ್ನು ರಕ್ಷಿಸುವ ಸಲುವಾಗಿ ಕೇಂದ್ರ ಸರ್ಕಾರ ದೆಹಲಿಯನ್ನು ದಿಗ್ಬಂಧನಕ್ಕೆ ಒಳಪಡಿಸಿದೆ. ರಸ್ತೆಗಳ ಮೇಲೆ 30 ಸಾವಿರ ಭದ್ರತಾ ಸಿಬ್ಬಂದಿಯನ್ನು ನಿಯೋಜಿಸುವ ಅಗತ್ಯವೇನಿತ್ತು? ದೇಶದ ರಾಜಧಾನಿ ಜೈಲಿನಂತಾಗಿರುವುದೇಕೆ?" ಎಂದು ಪ್ರಶ್ನಿಸಿದರು.

ಬಿಜೆಪಿ ಮತ್ತು ಆರ್‌ಎಸ್‌ಎಸ್ ಬೆಂಬಲಿಗರಿಗೆ ಮುಕ್ತವಾಗಿ ಓಡಾಡಲು ಅವಕಾಶ ನೀಡಲಾಗುತ್ತಿದೆ. ಆದರೆ, ಪ್ರತಿಭಟನೆ ನಡೆಸುವ ಯುವಕರ ಮೇಲೆ ಹಲ್ಲೆ ನಡೆಯುತ್ತಿದೆ ಎಂದು ಆರೋಪಿಸಿದ ಅವರು, ಪೊಲೀಸರು ಕಾನೂನು ಸುವ್ಯವಸ್ಥೆ ಕಾಪಾಡುವತ್ತ ಗಮನಹರಿಸಬೇಕು ಎಂದರು. ದೆಹಲಿಯಲ್ಲಿ ಕೈಗೊಂಡಿರುವ ಭದ್ರತಾ ಕ್ರಮಗಳ ಮೂಲಕ ಪ್ರಧಾನಿ ನರೇಂದ್ರ ಮೋದಿ ಅವರು ಜ್ಞಾನೇಶ್ ಕುಮಾರ್ ಅವರನ್ನು ರಕ್ಷಿಸುತ್ತಿದ್ದಾರೆ ಎಂಬುದು ಸ್ಪಷ್ಟವಾಗುತ್ತದೆ ಎಂದು ದೂರಿದರು.

**ಮೋದಿ, ಶಾ ವಿರುದ್ಧ ವಾಗ್ದಾಳಿ:** ಮುಖ್ಯ ಚುನಾವಣಾ ಆಯುಕ್ತರನ್ನು ರಕ್ಷಿಸುವ ಮೂಲಕ ಕೇಂದ್ರ ಸರ್ಕಾರ ದೊಡ್ಡ ತಪ್ಪು ಮಾಡುತ್ತಿದೆ ಎಂದು ರಾಹುಲ್ ಗಾಂಧಿ ಹೇಳಿದರು. "ಇದು ಜನರು ಒಂದು ಕಡೆ, ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ ಮತ್ತು ಜ್ಞಾನೇಶ್ ಕುಮಾರ್ ಮತ್ತೊಂದು ಕಡೆ ಇರುವ ಹೋರಾಟವಾಗಿದೆ. ದೇಶದ ಆಡಳಿತ ವ್ಯವಸ್ಥೆಯನ್ನು ತಮ್ಮ ಹಿಡಿತಕ್ಕೆ ತೆಗೆದುಕೊಂಡಿರುವ ಮೋದಿ, ಶಾ, ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಮತ್ತು ಜ್ಞಾನೇಶ್ ಕುಮಾರ್ ವಿರುದ್ಧ ನಮ್ಮ ಹೋರಾಟ ಮುಂದುವರಿಯಲಿದೆ" ಎಂದು ಹೇಳಿದರು. ಕೇಂದ್ರ ಸರ್ಕಾರದ ಆಡಳಿತ ವ್ಯವಸ್ಥೆಯಲ್ಲಿರುವ ಸುಮಾರು 200 ಅಧಿಕಾರಿಗಳು ವಿರೋಧ ಪಕ್ಷಗಳ ಸಂಪರ್ಕದಲ್ಲಿದ್ದಾರೆ ಎಂದು ರಾಹುಲ್ ಗಾಂಧಿ ಹೇಳಿಕೊಂಡರು. ಜಾರಿ ನಿರ್ದೇಶನಾಲಯ (ಇಡಿ), ಕೇಂದ್ರೀಯ ತನಿಖಾ ದಳ (ಸಿಬಿಐ) ಮತ್ತು ವಿದೇಶಾಂಗ ಸಚಿವಾಲಯದ ಅಧಿಕಾರಿಗಳು ತಮ್ಮ ಸಂಪರ್ಕದಲ್ಲಿದ್ದು, ವಿವಿಧ ಬೆಳವಣಿಗೆಗಳ ಕುರಿತು ಮಾಹಿತಿ ನೀಡುತ್ತಿದ್ದಾರೆ ಎಂದರು.



ಕೇಂದ್ರ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ರಾಜೀನಾಮೆಗೆ ಒತ್ತಾಯಿಸಿ ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರ ನೇತೃತ್ವದಲ್ಲಿ ಇಂಡಿಯಾ ಮೈತ್ರಿಕೂಟದ ವತಿಯಿಂದ ಸೋಮವಾರ ಹಮ್ಮಿಕೊಂಡಿದ್ದ 'ದೆಹಲಿ ಚಲೋ' ಪ್ರತಿಭಟನೆಯಲ್ಲಿ ಸಿಎಂ ಡಿ ಕೆ ಶಿವಕುಮಾರ್ ಅವರು ಭಾಗಿಯಾದ ಕ್ಷಣಗಳು. ಎಐಸಿಸಿ ಪ್ರಧಾನ ಕಾರ್ಯದರ್ಶಿ ಹಾಗೂ ಸಂಸದೆ ಪ್ರಿಯಾಂಕಾ ಗಾಂಧಿ, ಉತ್ತರ ಪ್ರದೇಶ ಮಾಜಿ ಸಿಎಂ ಅಖಿಲೇಶ್ ಯಾದವ್, ಆರ್ ಜೆಡಿ ನಾಯಕ ತೇಜಸ್ವಿ ಯಾದವ್ ಮತ್ತಿತರ ನಾಯಕರು ಭಾಗವಹಿಸಿದ್ದರು.

## ಮತದಾರರ ಪಟ್ಟಿಯಲ್ಲಿ ಭಗತ್ ಸಿಂಗ್ ಫೋಟೋ: ವಿವಾದ ತೀವ್ರ

● ವಿಕ್ರಮ ವಾಹಿನಿ । ಲುಧಿಯಾನ

ಪಂಜಾಬ್‌ನ ಲುಧಿಯಾನ ಪೂರ್ವ ವಿಧಾನಸಭಾ ಕ್ಷೇತ್ರದ ಮತದಾರರ ಪಟ್ಟಿಯಲ್ಲಿ ಸ್ವಾತಂತ್ರ್ಯ ಹೋರಾಟಗಾರ ಭಗತ್ ಸಿಂಗ್ ಅವರನ್ನು ಹೋಲುವ ಫೋಟೋ ಕಾಣಿಸಿಕೊಂಡಿರುವುದು ವಿವಾದಕ್ಕೆ ಕಾರಣವಾಗಿದೆ. ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆಯ ನಿಖರತೆಯನ್ನು ಪ್ರಶ್ನಿಸಿರುವ ಕಾಂಗ್ರೆಸ್, ಈ ಕುರಿತು ಸಮಗ್ರ ತನಿಖೆ ನಡೆಸುವಂತೆ ಒತ್ತಾಯಿಸಿದೆ.

**ಕಾಂಗ್ರೆಸ್‌ನಿಂದ ಪ್ರಶ್ನೆ:** ಲುಧಿಯಾನ ಪೂರ್ವ ಕ್ಷೇತ್ರದ ಭಾಗ ಸಂಖ್ಯೆ 38ರಲ್ಲಿ ಮತದಾರರ ಸಂಖ್ಯೆ 422ರ ಎದುರು ಭಗತ್ ಸಿಂಗ್ ಅವರನ್ನು ಹೋಲುವ ಫೋಟೋ ಕಾಣಿಸಿಕೊಂಡಿದೆ. ಈ ಚಿತ್ರ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡಿದ ಬೆನ್ನಲ್ಲೇ ಪಂಜಾಬ್ ಕಾಂಗ್ರೆಸ್ ಅಧ್ಯಕ್ಷ ಅಮರಿಂದರ್ ಸಿಂಗ್ ರಾಜಾ ವಾರಿಂಗ್ ಅವರು ಚುನಾವಣಾ ಆಯೋಗದ ಕಾರ್ಯವೈಖರಿಯನ್ನು ಪ್ರಶ್ನಿಸಿದ್ದಾರೆ.

ಇದೇ ಮತಗಟ್ಟೆಯ ಮತದಾರರ ಪಟ್ಟಿಯಲ್ಲಿನ ಇತರ ಎಂಟು ನಮೂದುಗಳಲ್ಲೂ ತಪ್ಪಾದ ಫೋಟೋಗಳಿವೆ ಎಂದು ಲುಧಿಯಾನ ನಗರ ಕಾಂಗ್ರೆಸ್ ಅಧ್ಯಕ್ಷ ಸಂಜಯ್ ತಲ್ವಾರ್ ಈ ಹಿಂದೆ ಆರೋಪಿಸಿದ್ದರು. ಕ್ಷೇತ್ರದ ಎಲ್ಲ 235 ಮತಗಟ್ಟೆಗಳ ಮತದಾರರ ಪಟ್ಟಿಯನ್ನು ಪರಿಶೀಲಿಸಿ, ನಿಷ್ಪಕ್ಷಪಾತ ತನಿಖೆ ನಡೆಸಬೇಕು ಎಂದು ಅವರು ಆಗ್ರಹಿಸಿದ್ದಾರೆ.

**ದೋಷ ಸರಿಪಡಿಸಲಾಗಿದೆ ಎಂದ ಜಿಲ್ಲಾಡಳಿತ**

ಈ ವಿವಾದಕ್ಕೆ ಪ್ರತಿಕ್ರಿಯಿಸಿರುವ ಲುಧಿಯಾನ ಜಿಲ್ಲಾಡಳಿತ, ಫೋಟೋಗೆ ಸಂಬಂಧಿಸಿದ ತಪ್ಪನ್ನು ಈಗಾಗಲೇ ಸರಿಪಡಿಸಲಾಗಿದೆ ಎಂದು ತಿಳಿಸಿದೆ. ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಕಚೇರಿಯ ಪ್ರಕಾರ, ಹಿಂದಿನ ಮತದಾರರ ಪಟ್ಟಿಯಲ್ಲಿದ್ದ ತಪ್ಪಾದ ಫೋಟೋ ಆಗಸ್ಟ್ 13, 2026ರಂದು ಪ್ರಕಟಿಸಲಾದ ಕರಡು ಪಟ್ಟಿಯಲ್ಲೂ ಕಾಣಿಸಿಕೊಂಡಿತ್ತು.

ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ವೇಳೆ ಪರಿಶೀಲನೆ ನಡೆಸಿದಾಗ ದೋಷ ಪತ್ತೆಯಾಗಿದ್ದು, ಬಳಿಕ ಸರಿಪಡಿಸಲಾಗಿದೆ ಎಂದು ಆಡಳಿತ ಸ್ಪಷ್ಟಪಡಿಸಿದೆ.

ಸರಿಯಾದ ಫೋಟೋ ಹೊಂದಿರುವ ಅಂತಿಮ ಮತದಾರರ ಪಟ್ಟಿಯನ್ನು ಅಕ್ಟೋಬರ್ 12ರಂದು ಪ್ರಕಟಿಸಲು ನಿರ್ಧರಿಸಲಾಗಿತ್ತು ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಹೀಗಾಗಿ, ದೋಷವನ್ನು ಸರಿಪಡಿಸಿರುವುದನ್ನು ಪರಿಗಣಿಸದೆ ವಿವಾದವನ್ನು ಮುಂದುವರಿಸುವುದು ದಾರಿ ತಪ್ಪಿಸುವಂತಿದೆ ಎಂಬುದು ಜಿಲ್ಲಾಡಳಿತದ ವಾದವಾಗಿದೆ.

ಮತದಾರರ ಪಟ್ಟಿಯಲ್ಲಿನ ಇಂತಹ ಲೋಪಗಳು ಚುನಾವಣಾ ಪ್ರಕ್ರಿಯೆಯ ವಿಶ್ವಾಸಾರ್ಹತೆಯ ಕುರಿತು ಪ್ರಶ್ನೆಗಳನ್ನು ಹುಟ್ಟುಹಾಕಿವೆ. ಅರ್ಹ ಮತದಾರರ ಹಕ್ಕುಗಳನ್ನು ರಕ್ಷಿಸಲು ಮತ್ತು ಮತದಾರರ ದಾಖಲೆಗಳ ನಿಖರತೆಯನ್ನು ಖಚಿತಪಡಿಸಿಕೊಳ್ಳಲು ಸಮಗ್ರ ಪರಿಶೀಲನೆ ಅಗತ್ಯ ಎಂದು ಕಾಂಗ್ರೆಸ್ ಒತ್ತಾಯಿಸಿದೆ.

## ಪರಿಷ್ಕೃತ ಫಾರಂ 6 ಕುರಿತು ಸುಪ್ರೀಂ ಕೋರ್ಟ್ ಸ್ಪಷ್ಟನೆ

● ವಿಕ್ರಮ ವಾಹಿನಿ । ನವದೆಹಲಿ

ಹೊಸ ಮತದಾರರ ನೋಂದಣಿಗೆ ಸಂಬಂಧಿಸಿದಂತೆ ಚುನಾವಣಾ ಆಯೋಗ ಪರಿಷ್ಕರಿಸಿರುವ ಫಾರಂ 6 ಅನ್ನು ಸುಪ್ರೀಂ ಕೋರ್ಟ್ ಅನುಮೋದಿಸಿಲ್ಲ ಅಥವಾ ತಿರಸ್ಕರಿಸಿಲ್ಲ ಎಂದು ನ್ಯಾಯಾಲಯ ಸೋಮವಾರ ಸ್ಪಷ್ಟಪಡಿಸಿದೆ.

ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ಹಾಗೂ ನ್ಯಾಯಮೂರ್ತಿಗಳಾದ ಜೋಯ್ಮಲ್ಯ ಬಾಗ್ಚಿ ಮತ್ತು ವಿ. ಮೋಹನಾ ಅವರಿದ್ದ ಪೀಠವು, ಪರಿಷ್ಕೃತ ಫಾರಂ 6ಕ್ಕೆ ನ್ಯಾಯಾಲಯದ ಅನುಮೋದನೆ ಇದೆಯೇ ಎಂಬ ಸ್ಪಷ್ಟನೆ ಕೋರಿ ಸಲ್ಲಿಸಲಾದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯ ವಿಚಾರಣೆ ನಡೆಸಿತು.

ಬಿಹಾರದ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕರಣದ ವಿಚಾರಣೆ ನಡೆದಾಗ ಪರಿಷ್ಕೃತ ಫಾರಂ 6 ನ್ಯಾಯಾಲಯದ ಮುಂದಿರಲಿಲ್ಲ. ಅಂದು ನೀಡಿದ ಅವಲೋಕನವನ್ನು ಫಾರಂಗೆ ಅನುಮೋದನೆ ಅಥವಾ ತಿರಸ್ಕಾರ ಎಂದು ಅರ್ಥೈಸಬಾರದು ಎಂದು ಪೀಠ ತಿಳಿಸಿತು.

ಪರಿಷ್ಕೃತ ಫಾರಂ 6ಕ್ಕೆ ಸುಪ್ರೀಂ ಕೋರ್ಟ್ ಅನುಮೋದನೆ ನೀಡಿದೆ ಎಂಬಂತೆ ಚುನಾವಣಾ ಆಯೋಗ ಬಿಂಬಿಸಿದೆ ಎಂದು ಅರ್ಜಿದಾರರ ಪರ ವಕೀಲರು ಆರೋಪಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ನ್ಯಾಯಪೀಠ, ಫಾರಂ ಅನ್ನು ಯಾರು ಮಾರ್ಪಡಿಸಿದ್ದಾರೆ ಎಂಬುದನ್ನು ತಿಳಿಯಲು ಬಯಸಿದ್ದೇವೆ. ಆದರೆ ಅದನ್ನು ಅನುಮೋದಿಸುವ ಅಥವಾ ತಿರಸ್ಕರಿಸುವ ಪ್ರಶ್ನೆ ನ್ಯಾಯಾಲಯದ ಮುಂದಿರಲಿಲ್ಲ ಎಂದು ಸ್ಪಷ್ಟಪಡಿಸಿತು.

ನ್ಯಾಯಾಲಯದ ಅಭಿಪ್ರಾಯಗಳನ್ನು ತಮ್ಮ ಅನುಕೂಲಕ್ಕೆ ತಕ್ಕಂತೆ ಅರ್ಥೈಸಿಕೊಳ್ಳಬಾರದು ಎಂದು ಪೀಠ ಎಚ್ಚರಿಸಿತು.

**ಫಾರಂ 6ರ ಬಳಕೆ:** ಮೊದಲ ಬಾರಿಗೆ ಮತದಾರರಾಗಿ ನೋಂದಾಯಿಸಿಕೊಳ್ಳಲು ಬಯಸುವ ಅರ್ಹ ಭಾರತೀಯ ನಾಗರಿಕರು ಫಾರಂ 6 ಸಲ್ಲಿಸಬೇಕು. ಮತದಾರರ ಪಟ್ಟಿಗೆ ಹೊಸ ಹೆಸರುಗಳನ್ನು ಸೇರ್ಪಡೆಗೊಳಿಸುವ ಪ್ರಕ್ರಿಯೆಯಲ್ಲಿ ಚುನಾವಣಾ ಆಯೋಗ ಈ ಅರ್ಜಿಯನ್ನು ಬಳಸುತ್ತದೆ.

# 'ಓಟ್ ಚೋರಿ- ಎಸ್‌ಐಆರ್ ವಿರುದ್ಧ ಪ್ರತಿಭಟನೆ'

**ಎಸ್‌ಐಆರ್ ಮೂಲಕ ಮತದಾರರ ಹೆಸರುಗಳನ್ನು ಅಳಿಸುವ ಪ್ರಯತ್ನ ನಡೆಯುತ್ತಿದೆ ಎಂದು ಆರೋಪಿಸಿದ ಡಿ.ಕೆ. ಶಿವಕುಮಾರ್, ಮತಗಳ್ಳತನ ತಡೆಯಲು ಕರ್ನಾಟಕದಲ್ಲೂ ತನಿಖೆ ನಡೆಸುವುದಾಗಿ ತಿಳಿಸಿದರು. ಸಂವಿಧಾನ ಮತ್ತು ಪ್ರಜಾಪ್ರಭುತ್ವದ ರಕ್ಷಣೆಗಾಗಿ ಹೋರಾಟ ಮುಂದುವರಿಸುವುದಾಗಿ ಹೇಳಿದರು.**

● ವಿಕ್ರಮ ವಾಹಿನಿ । ನವದೆಹಲಿ

ದೇಶದ ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿರುವ ನಾವುಗಳು ಓಟ್ ಚೋರಿಗೊಳಿಸುವ ಎಸ್ ಐ ಆರ್ ಪ್ರಕ್ರಿಯೆ ವಿರುದ್ಧ ನಿಲ್ಲುತ್ತೇವೆ. ಈ ಹೋರಾಟದಲ್ಲಿ ಎಷ್ಟು ಲಕ್ಷ ಜನರು ಇದ್ದಾರೆನ್ನುವುದನ್ನು ನಿಮ್ಮ ಕ್ಯಾಮೆರಾ ಮತ್ತು ನಿಮ್ಮ ಕಣ್ಣುಗಳೇ ಸಾಕ್ಷಿಯಾಗಿವೆ. ನವರಾತ್ರಿ ಇದ್ದರೂ ನಾವು ಸಂವಿಧಾನ ಕಾಪಾಡಲು 30 ಜನ ಶಾಸಕರು, ಸಚಿವರು ಮತ್ತು 300ಕ್ಕೂ ಹೆಚ್ಚು ಧುರೀಣರು ಈ ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದೇವೆ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಮಾಧ್ಯಮದವರಿಗೆ ಹೇಳಿದರು.

ತಮ್ಮನ್ನು ಭೇಟಿಯಾದ ಸುದ್ದಿಗಾರರನ್ನುದ್ದೇಶಿಸಿ ಮಾತನಾಡಿದ ಅವರು, ಲೋಕಸಭೆ ವಿಪಕ್ಷ ನಾಯಕರಾದ ರಾಹುಲ್ ಗಾಂಧಿ ಅವರು ಎಸ್ ಐ ಆರ್ ಸಂಬಂಧಿತವಾಗಿ ನ್ಯಾಯಾಲಯಕ್ಕೆ ಚುನಾವಣಾ ಆಯೋಗ ಮತ್ತು ಕೇಂದ್ರ ಸರ್ಕಾರದ ವಿರುದ್ಧ ವರದಿ ಸಲ್ಲಿಸಿದ್ದಾರೆ. ಪಿಟಿಷನ್ ಫೈಲ್ ಅನ್ನು ನಾಳೆ ನ್ಯಾಯಾಲಯ ಕೈಗೆತ್ತಿಕೊಳ್ಳಲಿದೆ. ಕಾಂಗ್ರೆಸ್ ಪಕ್ಷದೊಂದಿಗೆ ಎಲ್ಲ ಸ್ನೇಹಿತ ಪಕ್ಷದವರು ಸೇರಿ ಭಾರತದ ಸಂವಿಧಾನ, ಪ್ರಜಾಪ್ರಭುತ್ವ ಉಳಿಸಲು ಹೋರಾಟ ಮಾಡುತ್ತಿದ್ದೇವೆ. ಅಮಾಯಕ ಕಾರ್ಯಕರ್ತರಿಂದ ಸಹಿ ಹಾಕಿಸಿಕೊಂಡು ಎಸ್ ಐ ಆರ್ ಪ್ರಕ್ರಿಯೆ ನಡೆಯುತ್ತಿದೆ. ಇದೆಲ್ಲದರ ಕುರಿತು ಕರ್ನಾಟಕದಲ್ಲಿಯೂ ನಾನು ತನಿಖೆ ನಡೆಸುತ್ತೇನೆ. ಅಲ್ಪ ಸಂಖ್ಯಾತರಿಗೆ, ಬಡವರಿಗೆ ಯಾವ ರೀತಿ ತೊಂದರೆ ಆಗುತ್ತಿದೆ ಎನ್ನುವುದು ನಮ್ಮ ಗಮನಕ್ಕೆ ಬಂದಿದೆ. ಒಟ್ಟಿನಲ್ಲಿ ಓಟ್ ಚೋರಿ ಆಗದಂತೆ ತಡೆಯುವುದು ನಮ್ಮ ಹೊಣೆಗಾರಿಕೆಯಾಗಿದೆ.

ಬಿ.ಎಲ್.ಓ.ಗಳು ಲಕ್ಷಾಂತರ ಸಂಖ್ಯೆಯ ಫಾರಂ–7ನ್ನು ಕೊಟ್ಟಿದ್ದಾರೆ. ಕೈ ಕಾರ್ಯಕರ್ತರು ಓಟುಗಳನ್ನು ನ್ಯಾಯಬದ್ಧವಾಗಿ ಉಳಿಸಿಕೊಳ್ಳಲು ಸೂಚಿಸಿದ್ದೇನೆ. ಅನುಮಾನ ಬಂದ ಕಡೆ ಬಿ.ಎಲ್.ಓ.ಗಳೇ ಕೆಲವೆಡೆ ಪ್ರಕರಣ ದಾಖಲಿಸಿದ್ದಾರೆ. ಮುಂದೆ ಏನು ಕ್ರಮ ಕೈಗೊಳ್ಳಬೇಕೆನ್ನುವುದರ ಬಗ್ಗೆ ಕಾನೂನು ತಜ್ಞರ ಜೊತೆ ಸಮಾಲೋಚನೆ ಮಾಡುತ್ತೇನೆ. ನಮ್ಮ ಕಾರ್ಯಕರ್ತರಿಂದ ಸಹಿ ಮಾಡಿಸಿಕೊಂಡು ಮಾಡಬಾರದ್ದನ್ನೆಲ್ಲ ಮಾಡುತ್ತಿದ್ದಾರೆ. ಕ್ರಿಮಿನಲ್ ಚಟುವಟಿಕೆ ನಡೆಸಿ ಮತದಾರರನ್ನು ಕಿತ್ತು ಹಾಕುವ ತಂತ್ರ ನಡೆಸಿದ್ದಾರೆ ಎಂದು ಸಿಎಂ ಹೇಳಿದರು.

**ತಡಮಾಡೋದು ಬೇಡ:** ಕೈ ಶಾಸಕರು ಎನ್.ಡಿ.ಎ.ಮೈತ್ರಿ ಕೂಟ ಸೇರಲಿದ್ದಾರೆ ಎನ್ನುವ ಪ್ರಶ್ನೆಗೆ ಉತ್ತರಿಸಿದ ಸಿಎಂ, ತಡಮಾಡುವುದು ಬೇಡ. ಬಿಜೆಪಿ–ಜೆಡಿಎಸ್ ನವರು ಮೊದಲು ಅಂತಹ ಶಾಸಕರನ್ನು ತಮ್ಮ ಪಕ್ಷಕ್ಕೆ ಸೇರಿಸಿಕೊಳ್ಳಲಿ. ಸಮಯ ವ್ಯರ್ಥ ಮಾಡುವುದು ಬೇಡ. ಹೆಚ್ ಡಿಕೆ ಮತ್ತು ವಿಜಯೇಂದ್ರ ಅವರು ಇಂದಿಗೂ ಕೂಡ 12 ಜನ ಶಾಸಕರು ಅಡ್ಡ ಮತದಾನ ಮಾಡಿದ್ದರ ಬಗ್ಗೆ ಸ್ಪಷ್ಟವಾಗಿ ಹೇಳಲು ಆಗುತ್ತಿಲ್ಲ. ಎನ್.ಡಿ.ಎ. ಮೈತ್ರಿಕೂಟ ಸರಿ ಇಲ್ಲ ಎನ್ನುವ ಕಾರಣಕ್ಕೆ ಆ 12 ಜನ ಶಾಸಕರು ಕೈ ಗೆ ಮತ ಹಾಕಿದ್ದಾರೆ. ಅದು ಗುಪ್ತ ಮತದಾನ. ಇಲ್ಲಿ ಹೇಳುವುದು ಬೇಡವೆಂದು ಎಚ್ ಡಿ ಕೆ ಮತ್ತು ವಿಜಯೇಂದ್ರ ಅವರಿಗೆ ಟಾಂಗ್ ನೀಡಿದರು.

## ಮತಗಳ್ಳತನದ ವಿರುದ್ಧ ತನಿಖೆ ಮುಂದುವರಿಕೆ: ಡಿಕೆಶಿ



ಸಿಎಂ ಡಿ ಕೆ ಶಿವಕುಮಾರ್ ದೆಹಲಿಯ ಕರ್ನಾಟಕ ಭವನದಲ್ಲಿ ಸಚಿವರು, ಸಂಸದರು, ಶಾಸಕರು, ಮುಖಂಡರ ಜತೆ ಸೋಮವಾರ ರಾತ್ರಿ ಸಮಾಲೋಚನೆ ನಡೆಸಿದರು.

● ವಿಕ್ರಮ ವಾಹಿನಿ । ನವದೆಹಲಿ

ಮತದಾರರ ಪಟ್ಟಿಯಲ್ಲಿನ ಅಕ್ರಮಗಳ ವಿರುದ್ಧ ಕರ್ನಾಟಕದಲ್ಲಿ ತನಿಖೆ ಮುಂದುವರಿಸಲಾಗುವುದು. ಸಂವಿಧಾನ ಮತ್ತು ಪ್ರಜಾಪ್ರಭುತ್ವದ ರಕ್ಷಣೆಗಾಗಿ ಹೋರಾಟ ನಡೆಸುತ್ತೇವೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದರು.

ದೆಹಲಿಯ ಕರ್ನಾಟಕ ಭವನದ ಬಳಿ ಸೋಮವಾರ ಮಾತನಾಡಿದ ಅವರು, ಮತದಾರರ ಪಟ್ಟಿಯಿಂದ ಅರ್ಹರ ಹೆಸರುಗಳನ್ನು ತೆಗೆದುಹಾಕಲು ಫಾರಂ–7 ದುರ್ಬಳಕೆ ಮಾಡಲಾಗಿದೆ ಎಂದು ಬಿಜೆಪಿ ವಿರುದ್ಧ ಆರೋಪಿಸಿದರು. ಹಲವು ಕಡೆ ತಪ್ಪಾಗಿ ಅರ್ಜಿ ಸಲ್ಲಿಸಿರುವುದಾಗಿ ಹೇಳಿ ಅರ್ಜಿಗಳನ್ನು ಹಿಂಪಡೆಯಲಾಗಿದೆ. ಕೆಲವು ಪ್ರಕರಣಗಳಲ್ಲಿ ಬೂತ್ ಮಟ್ಟದ ಅಧಿಕಾರಿಗಳೇ ದೂರು ನೀಡಿದ್ದಾರೆ ಎಂದರು. ಮತದಾನದ ಹಕ್ಕು ಕಳೆದುಕೊಳ್ಳುವ ಆತಂಕವಿರುವವರು ಬೂತ್ ಮಟ್ಟದ ಏಜೆಂಟ್‌ಗಳು ಹಾಗೂ ಅಧಿಕಾರಿಗಳಿಗೆ ಮಾಹಿತಿ ನೀಡಬೇಕು ಎಂದು ಮನವಿ ಮಾಡಿದರು.

ಇಂಡಿಯಾ ಒಕ್ಕೂಟದ ನಾಯಕರು ಕೇಂದ್ರ ಸರ್ಕಾರದ ಧೋರಣೆ ಪ್ರಶ್ನಿಸಿ ಸುಪ್ರೀಂ ಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದು, ನ್ಯಾಯ ದೊರೆಯುವ ವಿಶ್ವಾಸವಿದೆ ಎಂದು ತಿಳಿಸಿದರು.

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರ ಶಾಸಕರು ಕಾಂಗ್ರೆಸ್ ಸೇರಲು ಉತ್ಸುಕರಾಗಿದ್ದಾರೆ ಎಂಬ ಹೇಳಿಕೆಗೆ ಪ್ರತಿಕ್ರಿಯಿಸಿದ ಡಿಕೆಶಿ, "ಮೊದಲು ಅವರನ್ನು ಆದಷ್ಟು ಬೇಗ ಕರೆಸಿಕೊಳ್ಳಲಿ" ಎಂದು ವ್ಯಂಗ್ಯವಾಡಿದರು. ಅಡ್ಡ ಮತದಾನ ಮಾಡಿದ 12 ಶಾಸಕರ ಹೆಸರು ಬಹಿರಂಗಪಡಿಸುವಂತೆ ವಿಜಯೇಂದ್ರ ಮತ್ತು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರಿಗೆ ಸವಾಲು ಹಾಕಿದರು.

# ಟ್ಯಾಂಕರ್ ಮೇಲೆ ಡ್ರೋನ್ ದಾಳಿ: ಇಬ್ಬರು ಭಾರತೀಯರು ನಾಪತ್ತೆ

● ವಿಕ್ರಮ ವಾಹಿನಿ । ನವದೆಹಲಿ

ಓಮನ್‌ನ ಸೊಹಾರ್ ಆಂಕೊರೇಜ್‌ನಲ್ಲಿ 11 ಭಾರತೀಯ ನಾವಿಕರಿದ್ದ ಎಂಟಿ ಪೆಟ್ರೋ ಡಾಲ್ಫಿನ್ ತೈಲ ಟ್ಯಾಂಕರ್ ಮೇಲೆ ಡ್ರೋನ್ ದಾಳಿ ನಡೆದಿದ್ದು, ಇಬ್ಬರು ನಾವಿಕರು ನಾಪತ್ತೆಯಾಗಿದ್ದಾರೆ. ಉಳಿದ ಒಂಬತ್ತು ಮಂದಿ ಸುರಕ್ಷಿತವಾಗಿದ್ದಾರೆ ಎಂದು ಕೇಂದ್ರ ಬಂದರು, ಹಡಗುಸಾರಿಗೆ ಮತ್ತು ಜಲಮಾರ್ಗಗಳ ಸಚಿವ ಸರ್ಬಾನಂದ ಸೋನೊವಾಲ್ ತಿಳಿಸಿದ್ದಾರೆ.

ನಾಪತ್ತೆಯಾದವರ ಪತ್ತೆಗಾಗಿ ಶೋಧ ಮತ್ತು ರಕ್ಷಣಾ ಕಾರ್ಯಾಚರಣೆ ಮುಂದುವರಿದಿದೆ. ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಲಾಗುತ್ತಿದ್ದು, ಅಗತ್ಯ ನೆರವು ಒದಗಿಸಲಾಗುತ್ತಿದೆ ಎಂದು ಸಚಿವರು ತಿಳಿಸಿದ್ದಾರೆ. ಓಮನ್‌ನಲ್ಲಿರುವ ಭಾರತೀಯ ರಾಯಭಾರ ಕಚೇರಿಯೂ ಸ್ಥಳೀಯ ಅಧಿಕಾರಿಗಳೊಂದಿಗೆ ಸಂಪರ್ಕದಲ್ಲಿದೆ.

ಇತ್ತೀಚೆಗೆ ಗಲ್ಫ್ ಪ್ರದೇಶದಲ್ಲಿ ವಾಣಿಜ್ಯ ಹಡಗುಗಳ ಮೇಲೆ ದಾಳಿಗಳು ಹೆಚ್ಚುತ್ತಿರುವುದು ನಾವಿಕರ ಸುರಕ್ಷತೆ ಕುರಿತು ಆತಂಕ ಮೂಡಿಸಿದೆ. ಅ.9ರಂದು ಶಾರ್ಜಾ ಆಂಕೊರೇಜ್‌ನಲ್ಲಿ 22 ಭಾರತೀಯ ನಾವಿಕರಿದ್ದ ಎಂಟಿ ಜೆಮ್ ನಂ. 2 ತೈಲ ಟ್ಯಾಂಕರ್ ಮೇಲೂ ಡ್ರೋನ್ ದಾಳಿ ನಡೆದಿತ್ತು. ಆ ಘಟನೆಯಲ್ಲಿ ಎಲ್ಲರೂ ಸುರಕ್ಷಿತವಾಗಿದ್ದರು.

ಗಲ್ಫ್ ಪ್ರದೇಶದಲ್ಲಿ ಹಡಗುಗಳ ಮೇಲಿನ ದಾಳಿಗಳು ಮುಂದುವರಿಯುತ್ತಿರುವ ಹಿನ್ನೆಲೆಯಲ್ಲಿ, ಸಮುದ್ರ ಮಾರ್ಗಗಳ ಸುರಕ್ಷತೆ ಮತ್ತು ನಾವಿಕರ ರಕ್ಷಣೆಗೆ ಹೆಚ್ಚಿನ ಆದ್ಯತೆ ನೀಡುವ ಅಗತ್ಯ ಹೆಚ್ಚಾಗಿದೆ.

www.VIKRAMAVAHINI.com
|| ಕನ್ನಡ ದಿನಪತ್ರಿಕೆ ||
PRGI NO: KARKAN/2018/78481
ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ
ವಿಕ್ರಮ ವಾಹಿನಿ

### ಸವಿ ವಾಹಿನಿ

ಕನ್ನಡಿಯ ಎದುರು ಕಾಣುವ ಪ್ರತಿಬಿಂಬ ಕೊನೆತನಕ ನಮ್ಮೊಂದಿಗೆ ಇರದು. ಆದರೆ ಸ್ವಾರ್ಥವಿಲ್ಲದ ಕಾಯಕ ನಮ್ಮೊಂದಿಗಿದ್ದರೆ ನಮ್ಮ ಪ್ರತಿಬಿಂಬ ಜನಮನದಲ್ಲಿ ನೆಲೆಸುತ್ತದೆ ಅಷ್ಟೇ ಅಲ್ಲ! ನಾವು ಕೊನೆಯಾದರೂ ಆ ಪ್ರತಿಬಿಂಬ ಶಾಶ್ವತವಾಗಿ ಉಳಿಯುತ್ತದೆ.

### ದಿನ ಪಂಚಾಂಗ

ಅಕ್ಟೋಬರ್, 13-2026, ಮಂಗಳವಾರ ಶರದ್ ಋತು,
ಆಶ್ವಯುಜ ಮಾಸ, ಶುಧ್ಧ ಪಕ್ಷ
ತದಿಗೆ ತಿಥಿ ರಾ.9:56
ವಿಶಾಖ ನಕ್ಷತ್ರ ರಾ.1:24
ರಾಹುಕಾಲ ಮ 3:03-4:32
ಅಂತರರಾಷ್ಟ್ರೀಯ ನೈಸರ್ಗಿಕ ವಿಪತ್ತು ಕಡಿತ ದಿನ, ಪಂಢರಪುರ ಜಾತ್ರೆ, ಗುಂಡೇ ಮಹಾರಾಜ ಪುಣ್ಯದಿನ, ಕೊಪ್ಪಳ । ಯಲಬುರ್ಗಾ ಧರಮುಡಿಮಠ ಬಸವಲಿಂಗಸ್ವಾಮಿ ಪುಣ್ಯದಿನ, ಚೆನ್ನಗಿರಿ । ವಡ್ನಾಳು ಕಾಶೀಮಠ ವಿಶ್ವಕರ್ಮ ವ್ರತ

### ಆರೋಗ್ಯ

## ಫುಡ್ ಪಾಯ್ಸನಿಂಗ್: ಹೊಟ್ಟೆ ನೋವಿಗೆ ಸರಳ ಪರಿಹಾರ

ಕಲುಷಿತ ಅಥವಾ ಹಾಳಾದ ಆಹಾರ ಸೇವನೆಯಿಂದ ಉಂಟಾಗುವ ಫುಡ್ ಪಾಯ್ಸನಿಂಗ್‌ನಿಂದ ಹೊಟ್ಟೆ ನೋವು, ಸೆಳೆತ, ವಾಂತಿ, ಅತಿಸಾರ, ದೌರ್ಬಲ್ಯ ಹಾಗೂ ಕೆಲವೊಮ್ಮೆ ಜ್ವರ ಕಾಣಿಸಿಕೊಳ್ಳಬಹುದು. ಇಂತಹ ಸಂದರ್ಭದಲ್ಲಿ ದೇಹದಲ್ಲಿ ನೀರು ಮತ್ತು ಎಲೆಕ್ಟ್ರೋಲೈಟ್‌ಗಳ ಕೊರತೆಯಾಗದಂತೆ ಎಚ್ಚರಿಕೆ ವಹಿಸುವುದು ಅತ್ಯಂತ ಮುಖ್ಯ.

**ORS ಸೇವನೆ:** ವಾಂತಿ ಅಥವಾ ಅತಿಸಾರ ಹೆಚ್ಚಿದ್ದರೆ ಓಆರ್‌ಎಸ್ ದ್ರಾವಣವನ್ನು ಆಗಾಗ್ಗೆ ಸ್ವಲ್ಪ ಪ್ರಮಾಣದಲ್ಲಿ ಸೇವಿಸುವುದು ಸಹಕಾರಿ. ಒಂದೇ ಬಾರಿಗೆ ಹೆಚ್ಚಿನ ಪ್ರಮಾಣದ ದ್ರವ ಸೇವಿಸುವ ಬದಲು 10-15 ನಿಮಿಷಕ್ಕೊಮ್ಮೆ ಕೆಲವು ಗುಟುಕುಗಳಂತೆ ಕುಡಿಯುವುದು ಉತ್ತಮ. ಎಳನೀರನ್ನೂ ಸೇವಿಸಬಹುದು. ಆದರೆ ತೀವ್ರ ನಿರ್ಜಲೀಕರಣದ ಲಕ್ಷಣಗಳು ಕಂಡುಬಂದರೆ ವೈದ್ಯಕೀಯ ಚಿಕಿತ್ಸೆ ಪಡೆಯಬೇಕು.

**ಹಗುರ ಆಹಾರಕ್ಕೆ ಆದ್ಯತೆ:** ಹೊಟ್ಟೆಯ ಮೇಲೆ ಹೆಚ್ಚಿನ ಒತ್ತಡ ಬೀಳದಂತೆ ಸುಲಭವಾಗಿ ಜೀರ್ಣವಾಗುವ ಆಹಾರ ಸೇವಿಸುವುದು ಸೂಕ್ತ. ಅನ್ನ, ತೆಳುವಾದ ಖಿಚಡಿ, ಗಂಜಿ, ಬಾಳೆಹಣ್ಣು ಹಾಗೂ ಟೋಸ್ಟ್‌ನಂತಹ ಹಗುರ ಆಹಾರಗಳನ್ನು ಸೇವಿಸಬಹುದು. ಎಣ್ಣೆಯುಕ್ತ ಹಾಗೂ ಮಸಾಲೆಯುಕ್ತ ಆಹಾರ, ಕೆಫೀನ್ ಮತ್ತು ಆಲ್ಕೋಹಾಲ್‌ನ್ನು ಕೆಲವು ದಿನಗಳ ಕಾಲ ದೂರವಿಡುವುದು ಉತ್ತಮ.

**ಶಾಖ ನೀಡುವುದರಿಂದ ತಾತ್ಕಾಲಿಕ ಆರಾಮ:** ಹೊಟ್ಟೆ ಸೆಳೆತ ಹೆಚ್ಚಾದರೆ ಬಿಸಿ ನೀರಿನ ಬ್ಯಾಗ್ ಅಥವಾ ಹೀಟಿಂಗ್ ಪ್ಯಾಡ್‌ನಿಂದ ಮೃದುವಾಗಿ ಶಾಖ ನೀಡುವುದರಿಂದ ತಾತ್ಕಾಲಿಕ ಆರಾಮ ದೊರೆಯಬಹುದು. ಆದರೆ ಇದು ಫುಡ್ ಪಾಯ್ಸನಿಂಗ್‌ಗೆ ಕಾರಣವಾಗಿರುವ ಸೋಂಕಿಗೆ ಚಿಕಿತ್ಸೆಯಲ್ಲ ಎಂಬುದನ್ನು ಗಮನಿಸಬೇಕು.

**ಔಷಧಿ ಸೇವನೆಯಲ್ಲಿ ಎಚ್ಚರಿಕೆ:** ಅತಿಸಾರವನ್ನು ತಕ್ಷಣ ನಿಲ್ಲಿಸಲು ಲೋಪೆರಮೈಡ್‌ನಂತಹ ಔಷಧಿಗಳನ್ನು ವೈದ್ಯರ ಸಲಹೆಯಿಲ್ಲದೆ ಸೇವಿಸಬಾರದು. ವಿಶೇಷವಾಗಿ ಜ್ವರ ಅಥವಾ ಮಲದಲ್ಲಿ ರಕ್ತ ಕಂಡುಬಂದರೆ ಸ್ವಯಂ ಔಷಧಿ ತೆಗೆದುಕೊಳ್ಳದೆ ವೈದ್ಯರನ್ನು ಸಂಪರ್ಕಿಸುವುದು ಅಗತ್ಯ. ಮಕ್ಕಳಿಗೆ ಇಂತಹ ಔಷಧಿಗಳನ್ನು ವೈದ್ಯರ ಸಲಹೆಯಿಲ್ಲದೆ ನೀಡಬಾರದು.

**ಈ ಲಕ್ಷಣಗಳಿದ್ದರೆ ತಕ್ಷಣ ವೈದ್ಯರನ್ನು ಸಂಪರ್ಕಿಸಿ:** ತೀವ್ರ ಅಥವಾ ನಿರಂತರ ಹೊಟ್ಟೆ ನೋವು, ಹೆಚ್ಚಿನ ಜ್ವರ, ಮಲದಲ್ಲಿ ರಕ್ತ, ನಿರಂತರ ವಾಂತಿ, ಮೂತ್ರದ ಪ್ರಮಾಣ ಕಡಿಮೆಯಾಗುವುದು, ತಲೆಸುತ್ತುವಿಕೆ ಅಥವಾ ತೀವ್ರ ದೌರ್ಬಲ್ಯ ಕಂಡುಬಂದರೆ ಮನೆಮದ್ದುಗಳನ್ನೇ ಅವಲಂಬಿಸದೆ ತಕ್ಷಣ ವೈದ್ಯಕೀಯ ನೆರವು ಪಡೆಯಬೇಕು. ಸಮಯಕ್ಕೆ ಸರಿಯಾದ ಚಿಕಿತ್ಸೆ ಪಡೆಯುವುದರಿಂದ ನಿರ್ಜಲೀಕರಣ ಸೇರಿದಂತೆ ಗಂಭೀರ ಸಮಸ್ಯೆಗಳನ್ನು ತಪ್ಪಿಸಬಹುದು.

**ವಿಶ್ರಾಂತಿಗೂ ಆದ್ಯತೆ:** ಫುಡ್ ಪಾಯ್ಸನಿಂಗ್‌ನಿಂದ ದೇಹದಲ್ಲಿ ದೌರ್ಬಲ್ಯ ಕಾಣಿಸಿಕೊಳ್ಳುವುದರಿಂದ ಸಾಕಷ್ಟು ವಿಶ್ರಾಂತಿ ಪಡೆಯುವುದು ಅಗತ್ಯ. ದೇಹಕ್ಕೆ ಅಗತ್ಯವಾದ ದ್ರವ ಮತ್ತು ಪೋಷಕಾಂಶಗಳು ದೊರೆಯುವಂತೆ ನೋಡಿಕೊಳ್ಳಬೇಕು. ಲಕ್ಷಣಗಳು ಕಡಿಮೆಯಾಗುವವರೆಗೆ ಅತಿಯಾದ ದೈಹಿಕ ಶ್ರಮವನ್ನು ತಪ್ಪಿಸುವುದು ಉತ್ತಮ.

**ಸ್ವಚ್ಛತೆಗೆ ಹೆಚ್ಚಿನ ಗಮನ:** ಫುಡ್ ಪಾಯ್ಸನಿಂಗ್ ಇತರರಿಗೂ ಹರಡುವ ಸಾಧ್ಯತೆ ಇರುವುದರಿಂದ ಕೈಗಳನ್ನು ಸಾಬೂನಿನಿಂದ ಪದೇಪದೆ ತೊಳೆಯುವುದು, ಶೌಚಾಲಯ ಬಳಕೆಯ ಬಳಿಕ ಸ್ವಚ್ಛತೆ ಕಾಪಾಡುವುದು ಹಾಗೂ ಆಹಾರ ತಯಾರಿಸುವ ಮುನ್ನ ಕೈ ತೊಳೆಯುವುದು ಮುಖ್ಯ. ಮನೆಯಲ್ಲಿರುವ ಇತರರಿಗೆ ಸೋಂಕು ಹರಡದಂತೆ ಪಾತ್ರೆ, ಟವೆಲ್ ಸೇರಿದಂತೆ ವೈಯಕ್ತಿಕ ವಸ್ತುಗಳನ್ನು ಪ್ರತ್ಯೇಕವಾಗಿ ಬಳಸುವುದು ಸೂಕ್ತ.

**ಮುನ್ನೆಚ್ಚರಿಕೆಯೇ ಉತ್ತಮ:** ಆಹಾರ ಸೇವಿಸುವ ಮುನ್ನ ಅದರ ತಾಜಾತನ ಮತ್ತು ಸ್ವಚ್ಛತೆಯನ್ನು ಖಚಿತಪಡಿಸಿಕೊಳ್ಳಬೇಕು. ದೀರ್ಘಕಾಲ ಹೊರಗಡೆ ಇಟ್ಟಿರುವ ಆಹಾರ, ಸರಿಯಾಗಿ ಬೇಯಿಸದ ಪದಾರ್ಥಗಳು ಹಾಗೂ ಕಲುಷಿತ ನೀರನ್ನು ಸೇವಿಸುವುದನ್ನು ತಪ್ಪಿಸಬೇಕು. ಆಹಾರವನ್ನು ಸೂಕ್ತ ತಾಪಮಾನದಲ್ಲಿ ಸಂಗ್ರಹಿಸಿ, ಸ್ವಚ್ಛ ಪಾತ್ರೆಗಳಲ್ಲಿ ಬಡಿಸುವ ಮೂಲಕ ಫುಡ್ ಪಾಯ್ಸನಿಂಗ್ ಅಪಾಯವನ್ನು ಬಹುತೇಕ ಕಡಿಮೆ ಮಾಡಬಹುದು. ಆಹಾರ ಸೇವಿಸಿದ ಬಳಿಕ ಅಸ್ವಸ್ಥತೆ ಕಾಣಿಸಿಕೊಂಡರೆ ನಿರ್ಲಕ್ಷ್ಯ ಮಾಡದೆ ಆರಂಭದಲ್ಲೇ ದೇಹಕ್ಕೆ ಅಗತ್ಯವಾದ ದ್ರವಾಂಶ ಒದಗಿಸುವುದು ಮುಖ್ಯ.

# ತಿರುಮಲದಲ್ಲಿ ಶ್ರೀವಾರಿ ನವರಾತ್ರಿ ಬ್ರಹ್ಮೋತ್ಸವದ ದಿವ್ಯ ವೈಭವ: ಅಪೂರ್ವ ಉತ್ಸವ ಸಂಭ್ರಮದಲ್ಲಿ ಭಕ್ತಿಭಾವದ ಅನಾವರಣ

ಏಳು ಬೆಟ್ಟಗಳ ಒಡೆಯ, ಕಲಿಯುಗದ ಪ್ರತ್ಯಕ್ಷ ದೈವ, ಭಕ್ತರ ಪಾಲಿನ ಕರುಣಾಮಯಿ ಶ್ರೀನಿವಾಸನ ಸನ್ನಿಧಿಯೇ ತಿರುಮಲ. ಇಲ್ಲಿ ನಡೆಯುವ ಪ್ರತಿಯೊಂದು ಉತ್ಸವವೂ ತನ್ನದೇ ಆದ ವೈಶಿಷ್ಟ್ಯ ಹೊಂದಿದ್ದರೂ, ಶ್ರೀವಾರಿ ಬ್ರಹ್ಮೋತ್ಸವಕ್ಕೆ ಇರುವ ಮಹತ್ವ, ವೈಭವ ಮತ್ತು ಜಾಗತಿಕ ಆಕರ್ಷಣೆ ಅನನ್ಯ. ಲಕ್ಷಾಂತರ ಭಕ್ತರ ಭಕ್ತಿ-ಭಾವನೆಗಳನ್ನು ಒಂದೆಡೆ ಸಂಗಮಗೊಳಿಸುವ ಈ ಮಹೋತ್ಸವದ ಅಂಗವಾಗಿ 2026ರ ನವರಾತ್ರಿ ಬ್ರಹ್ಮೋತ್ಸವ ಅಕ್ಟೋಬರ್ 12ರಿಂದ 20ರವರೆಗೆ ನಡೆಯಲಿದೆ.

ನವರಾತ್ರಿ ಸಂಭ್ರಮದೊಂದಿಗೆ ತಿರುಮಲದಲ್ಲಿ ನಡೆಯುವ ಈ ಉತ್ಸವವು ಭಕ್ತಿ, ಪರಂಪರೆ, ಕಲೆ, ಸಂಗೀತ, ಸಂಸ್ಕೃತಿ ಹಾಗೂ ಆಧ್ಯಾತ್ಮಿಕತೆಯ ಅಪೂರ್ವ ಸಂಗಮವಾಗಲಿದೆ. ಶ್ರೀಮಲಯಪ್ಪಸ್ವಾಮಿ ಶ್ರೀದೇವಿ-ಭೂದೇವಿಯರ ಸಮೇತ ವಿವಿಧ ವಾಹನಗಳಲ್ಲಿ ಭಕ್ತರಿಗೆ ದರ್ಶನ ನೀಡುವುದು ಈ ಉತ್ಸವದ ಪ್ರಮುಖ ಆಕರ್ಷಣೆ.

**ಬ್ರಹ್ಮೋತ್ಸವದ ಹಿನ್ನೆಲೆ:** 'ಬ್ರಹ್ಮೋತ್ಸವ' ಎಂದರೆ ಬ್ರಹ್ಮದೇವರಿಂದ ನೆರವೇರಿಸಲ್ಪಟ್ಟ ಉತ್ಸವ ಎಂಬುದು ಪುರಾಣ ಪರಂಪರೆಯ ನಂಬಿಕೆ. ಶ್ರೀನಿವಾಸನು ಲೋಕಕಲ್ಯಾಣಕ್ಕಾಗಿ ಬ್ರಹ್ಮದೇವನಿಗೆ ಉತ್ಸವ ನಡೆಸುವಂತೆ ಸೂಚಿಸಿದನು; ಬ್ರಹ್ಮದೇವನೇ ಸ್ವಾಮಿಯನ್ನು ಆರಾಧಿಸಿ ಉತ್ಸವವನ್ನು ನೆರವೇರಿಸಿದನು ಎಂಬ ನಂಬಿಕೆಯ ಹಿನ್ನೆಲೆಯಲ್ಲಿ ಈ ಮಹೋತ್ಸವಕ್ಕೆ 'ಬ್ರಹ್ಮೋತ್ಸವ' ಎಂಬ ಹೆಸರು ಬಂದಿದೆ.

ತಿರುಮಲದ ಇತಿಹಾಸದಲ್ಲಿ ಬ್ರಹ್ಮೋತ್ಸವಕ್ಕೆ ಶತಮಾನಗಳಷ್ಟು ಪ್ರಾಚೀನ ಪರಂಪರೆ ಇದೆ. ದೇವಾಲಯದ ಶಾಸನಗಳು ಈ ಉತ್ಸವದ ಪ್ರಾಚೀನತೆ ಮತ್ತು ನಿರಂತರತೆಯನ್ನು ದಾಖಲಿಸುತ್ತವೆ. ವಿವಿಧ ರಾಜರು, ರಾಣಿಯರು ಮತ್ತು ಆಡಳಿತಗಾರರು ವಿವಿಧ ಕಾಲಘಟ್ಟಗಳಲ್ಲಿ ಶ್ರೀವಾರಿಯ ಸೇವೆ ಹಾಗೂ ಉತ್ಸವಗಳಿಗೆ ಕೊಡುಗೆ ನೀಡಿದ ವಿವರಗಳು ಶಾಸನಗಳಲ್ಲಿ ಕಂಡುಬರುತ್ತವೆ.

ಹೀಗಾಗಿ ಬ್ರಹ್ಮೋತ್ಸವ ಕೇವಲ ಧಾರ್ಮಿಕ ಆಚರಣೆಯಲ್ಲ. ಇದು ದಕ್ಷಿಣ ಭಾರತದ ಧಾರ್ಮಿಕ, ಸಾಂಸ್ಕೃತಿಕ, ಕಲಾತ್ಮಕ ಹಾಗೂ ಸಾಮಾಜಿಕ ಇತಿಹಾಸದ ಜೀವಂತ ಪರಂಪರೆಯೂ ಹೌದು.

**ದಾಸರು-ಆಳ್ವಾರರ ಭಕ್ತಿಯಲ್ಲಿ ಶ್ರೀನಿವಾಸ:** ತಿರುಮಲದ ಮಹಿಮೆಯನ್ನು ಆಳ್ವಾರರು, ಹರಿದಾಸರು, ಸಂತರು, ಕವಿಗಳು ಹಾಗೂ ಅನುಭಾವಿಗಳು ತಮ್ಮ ತಮ್ಮ ಭಾಷೆಗಳಲ್ಲಿ ಹಾಡಿ ಕೊಂಡಾಡಿದ್ದಾರೆ. 'ತಿರುವೇಂಗಡಮುಡೈಯಾನ್' ಎಂಬ ಹೆಸರಿನಿಂದ ತಮಿಳು ಭಕ್ತಿಪರಂಪರೆಯಲ್ಲಿ ಪ್ರಸಿದ್ಧನಾದ ವೆಂಕಟೇಶ್ವರನು, ಕನ್ನಡದ ದಾಸರ ಪದಗಳಲ್ಲಿ, ತೆಲುಗಿನ ಅನ್ನಮಯ್ಯನ ಸಂಕೀರ್ತನೆಗಳಲ್ಲಿ ಹಾಗೂ ಸಂಸ್ಕೃತದ ಸ್ತೋತ್ರಗಳಲ್ಲಿ ಭಕ್ತರ ಆರಾಧ್ಯದೈವವಾಗಿ ವಿರಾಜಮಾನನಾಗಿದ್ದಾನೆ.

ಶ್ರೀ ವೆಂಕಟೇಶ್ವರ ಸುಪ್ರಭಾತದಿಂದ ಹಿಡಿದು ಇಂದಿನವರೆಗಿನ ಅಸಂಖ್ಯಾತ ಕೀರ್ತನೆ, ಸ್ತೋತ್ರ, ಭಜನೆ ಹಾಗೂ ಸಂಗೀತ ಕೃತಿಗಳಲ್ಲಿ ಶ್ರೀನಿವಾಸನ ನಾಮಮಹಿಮೆ ನಿರಂತರವಾಗಿ ಮೊಳಗುತ್ತಿದೆ.

ಭಾಷೆ ಬದಲಾಗಬಹುದು; ಭಾವ ಬದಲಾಗುವುದಿಲ್ಲ. ಪ್ರದೇಶ ಬದಲಾಗಬಹುದು; ಆದರೆ ಶ್ರೀನಿವಾಸನ ಮೇಲಿನ ಭಕ್ತಿ ಮಾತ್ರ ಎಲ್ಲರನ್ನೂ ಒಂದಾಗಿಸುತ್ತದೆ.

**ವಾಹನಸೇವೆಯಲ್ಲಿ ದಿವ್ಯ ದರ್ಶನ:** ಬ್ರಹ್ಮೋತ್ಸವದ ಪ್ರಮುಖ ಆಕರ್ಷಣೆ ಎಂದರೆ ಶ್ರೀ ಮಲಯಪ್ಪಸ್ವಾಮಿ, ಶ್ರೀದೇವಿ ಮತ್ತು ಭೂದೇವಿಯರ ಸಮೇತ ನಡೆಯುವ ವಿವಿಧ ವಾಹನಸೇವೆಗಳು. ಪ್ರತಿಯೊಂದು ವಾಹನಕ್ಕೂ ಭಕ್ತಿಪರಂಪರೆಯಲ್ಲಿ ವಿಶಿಷ್ಟವಾದ ಸ್ಥಾನವಿದೆ.

ಶೇಷವಾಹನವು ಸೇವಾಭಾವವನ್ನು, ಹಂಸವಾಹನವು ವಿವೇಕವನ್ನು, ಸಿಂಹವಾಹನವು ಶೌರ್ಯವನ್ನು, ಕಲ್ಪವೃಕ್ಷವು ಅಭೀಷ್ಟಪ್ರದತ್ವವನ್ನು, ಗರುಡವಾಹನವು ಪರಮಭಕ್ತಿಯನ್ನು, ಹನುಮಂತವಾಹನವು ದಾಸ್ಯಭಕ್ತಿಯನ್ನು





ಹಾಗೂ ಸೂರ್ಯ-ಚಂದ್ರಪ್ರಭೆಗಳು ವಿಶ್ವವ್ಯಾಪಕತೆಯನ್ನು ಸಂಕೇತಿಸುತ್ತವೆ ಎಂಬ ಭಾವನೆ ಇದೆ. ಈ ವಾಹನಸೇವೆಗಳು ಕೇವಲ ಉತ್ಸವದ ಬಾಹ್ಯ ವೈಭವವಲ್ಲ. ಅವುಗಳ ಹಿಂದೆ ಭಾರತೀಯ ದರ್ಶನ ಮತ್ತು ಭಕ್ತಿಪರಂಪರೆಯ ಆಳವಾದ ಸಂದೇಶ ಅಡಗಿದೆ.

**ನವರಾತ್ರಿ ಬ್ರಹ್ಮೋತ್ಸವದ ವಿಶೇಷತೆ:** 2026ರ ತಿರುಮಲ ನವರಾತ್ರಿ ಬ್ರಹ್ಮೋತ್ಸವವು ಮತ್ತಷ್ಟು ವಿಶೇಷವಾಗಿದೆ. ಅಧಿಕಮಾಸದ ಹಿನ್ನೆಲೆಯಲ್ಲಿ ಈ ವರ್ಷ ತಿರುಮಲೆಯಲ್ಲಿ ಎರಡು ಬ್ರಹ್ಮೋತ್ಸವಗಳು ನಡೆಯುತ್ತಿವೆ. ಮೊದಲನೆಯದು ಸೆಪ್ಟೆಂಬರ್‌ನಲ್ಲಿ ನಡೆದ ಸಾಲಕಟ್ಲ ವಾರ್ಷಿಕ ಬ್ರಹ್ಮೋತ್ಸವವಾದರೆ, ಎರಡನೆಯದು ನವರಾತ್ರಿ ಸಂದರ್ಭದಲ್ಲಿ ನಡೆಯುತ್ತಿರುವ ಈ ವಿಶೇಷ ಬ್ರಹ್ಮೋತ್ಸವ.

ಅಕ್ಟೋಬರ್ 12ರಿಂದ 20ರವರೆಗೆ ನಡೆಯುವ ಈ ಒಂಬತ್ತು ದಿನಗಳ ಉತ್ಸವದಲ್ಲಿ ಶ್ರೀಮಲಯಪ್ಪಸ್ವಾಮಿ ವಿವಿಧ ವಾಹನಗಳಲ್ಲಿ ಭಕ್ತರಿಗೆ ದರ್ಶನ ನೀಡಲಿದ್ದಾರೆ. ಈ ನವರಾತ್ರಿ ಬ್ರಹ್ಮೋತ್ಸವದ ವಿಶೇಷವೆಂದರೆ ಸಾಮಾನ್ಯ ವಾರ್ಷಿಕ ಬ್ರಹ್ಮೋತ್ಸವದ ಕೆಲವು ಪ್ರಮುಖ ಆಚರಣೆಗಳ ಕ್ರಮದಲ್ಲಿ ವ್ಯತ್ಯಾಸವಿರುವುದು. ಆದರೂ ವಾಹನಸೇವೆಗಳು, ಗರುಡಸೇವೆ, ಸ್ವರ್ಣರಥ ಹಾಗೂ ಚಕ್ರಸ್ನಾನ ಸೇರಿದಂತೆ ಪ್ರಮುಖ ಧಾರ್ಮಿಕ ಕಾರ್ಯಕ್ರಮಗಳು ಭಕ್ತರ ಗಮನ ಸೆಳೆಯಲಿವೆ.

**ಗರುಡಸೇವೆ-ಭಕ್ತಿಯ ಪರಾಕಾಷ್ಠೆ:** ಬ್ರಹ್ಮೋತ್ಸವದ ಎಲ್ಲ ವಾಹನಸೇವೆಗಳಲ್ಲಿ ಗರುಡಸೇವೆಗೆ ವಿಶೇಷ ಮಹತ್ವವಿದೆ. ಶ್ರೀಮನ್ನಾರಾಯಣನ ಪರಮವಾಹನನಾದ ಗರುಡನ ಮೇಲೆ ಶ್ರೀನಿವಾಸನು ದಿವ್ಯಾಲಂಕಾರದಲ್ಲಿ ವಿರಾಜಮಾನನಾಗಿ ಭಕ್ತರಿಗೆ ದರ್ಶನ ನೀಡುವ ಕ್ಷಣವನ್ನು ಕಣ್ತುಂಬಿಕೊಳ್ಳಲು ದೇಶದ ವಿವಿಧ ಭಾಗಗಳಿಂದ ಭಕ್ತರು ತಿರುಮಲೆಗೆ ಆಗಮಿಸುತ್ತಾರೆ.

ಅಕ್ಟೋಬರ್ 16ರಂದು ನಡೆಯುವ ಗರುಡಸೇವೆ ನವರಾತ್ರಿ ಬ್ರಹ್ಮೋತ್ಸವದ ಪ್ರಮುಖ ಆಕರ್ಷಣೆ. 'ಗೋವಿಂದಾ ಗೋವಿಂದಾ' ಎಂಬ ನಾಮಘೋಷದ ನಡುವೆ ಸ್ವಾಮಿಯ ದಿವ್ಯರೂಪವನ್ನು ಕಣ್ತುಂಬಿಕೊಳ್ಳುವುದು ಭಕ್ತರಿಗೆ ಅಪೂರ್ವ ಆಧ್ಯಾತ್ಮಿಕ ಅನುಭವ.

**ಸ್ವರ್ಣರಥ-ವೈಭವದ ಮತ್ತೊಂದು ಮಜಲು:** ಅಕ್ಟೋಬರ್ 19ರಂದು ನಡೆಯುವ ಸ್ವರ್ಣರಥೋತ್ಸವವೂ ವಿಶೇಷ ಆಕರ್ಷಣೆಯಾಗಿದೆ. ಚಿನ್ನದ ಕಿರಣಗಳಂತೆ ಹೊಳೆಯುವ ರಥದಲ್ಲಿ ಶ್ರೀವಾರಿಯ ಉತ್ಸವಮೂರ್ತಿ ಭಕ್ತರಿಗೆ ದರ್ಶನ ನೀಡುವ ದೃಶ್ಯವು ಕಣ್ಮನ ಸೆಳೆಯುತ್ತದೆ.

ರಥವೆಂದರೆ ಕೇವಲ ಸಾಗುವ ವಾಹನ ಮಾತ್ರವಲ್ಲ; ಅದು ಜೀವಿತದ ಪಯಣದ ಸಂಕೇತವೂ ಹೌದು. ಭಗವಂತನನ್ನು ಜೀವನದ ರಥಸಾರಥಿಯನ್ನಾಗಿ ಮಾಡಿಕೊಂಡಾಗ ಬದುಕಿನ ಪಯಣ ಸಾರ್ಥಕವಾಗುತ್ತದೆ ಎಂಬ ಸಂದೇಶವನ್ನು ಈ ಉತ್ಸವ ನೆನಪಿಸುತ್ತದೆ.

**ಚಕ್ರಸ್ನಾನ - ಭಕ್ತಿಯ ಪರಾಕಾಷ್ಠೆ:** ಬ್ರಹ್ಮೋತ್ಸವದ ಸಮಾಪ್ತಿಯ ಪ್ರಮುಖ ಧಾರ್ಮಿಕ ಆಚರಣೆ ಚಕ್ರಸ್ನಾನ. ಶ್ರೀ ಸುದರ್ಶನ ಚಕ್ರಕ್ಕೆ ಪುಷ್ಕರಣಿಯಲ್ಲಿ ನಡೆಯುವ ಈ ಪವಿತ್ರ ಸ್ನಾನವು ಉತ್ಸವದ ಅಂತಿಮ ಧಾರ್ಮಿಕ ಘಟ್ಟ.

ಸುದರ್ಶನ ಚಕ್ರವು ಶ್ರೀಮನ್ನಾರಾಯಣನ ಶಕ್ತಿ ಮತ್ತು ಧರ್ಮರಕ್ಷಣೆಯ ಸಂಕೇತ. ಚಕ್ರಸ್ನಾನದ ಸಂದರ್ಭದಲ್ಲಿ ಪುಷ್ಕರಣಿಯಲ್ಲಿ ಪವಿತ್ರ ಸ್ನಾನ ಮಾಡುವುದನ್ನು ಭಕ್ತರು ಅತ್ಯಂತ ಪುಣ್ಯಕರವೆಂದು ಭಾವಿಸುತ್ತಾರೆ.

ಒಂಬತ್ತು ದಿನಗಳ ಉತ್ಸವದ ಬಾಹ್ಯ ಸಂಭ್ರಮಕ್ಕೆ ಚಕ್ರಸ್ನಾನವು ಒಂದು ರೀತಿಯ ಆಧ್ಯಾತ್ಮಿಕ ಸಮಾಪ್ತಿಯನ್ನು ನೀಡುತ್ತದೆ. ದೇಹ-ಮನಸ್ಸಿನ ಪಾವಿತ್ರ್ಯ, ಭಕ್ತಿ ಮತ್ತು ಶರಣಾಗತಿಯ ಸಂದೇಶವನ್ನು ಇದು ಸಾರುತ್ತದೆ.

**ಉತ್ಸವದಾಚೆಗೂ ಒಂದು ಆಧ್ಯಾತ್ಮಿಕ ಸಂದೇಶ:** ಬ್ರಹ್ಮೋತ್ಸವವೆಂದರೆ ಕೇವಲ ಕಣ್ಣುಗಳಿಗೆ ಕಾಣುವ ವೈಭವವಲ್ಲ. ಅದು ಮನಸ್ಸನ್ನು ಒಳಮುಖಗೊಳಿಸುವ ಆಧ್ಯಾತ್ಮಿಕ ಪಯಣವೂ ಹೌದು. ಶೇಷನಿಂದ ಗರುಡನವರೆಗೆ, ಹನುಮಂತನಿಂದ ಸೂರ್ಯ-ಚಂದ್ರಪ್ರಭೆಯವರೆಗೆ ಪ್ರತಿಯೊಂದು ವಾಹನವು ಭಕ್ತಿಗೆ ಒಂದೊಂದು ಸಂದೇಶ ನೀಡುತ್ತದೆ. ಅಹಂಕಾರವನ್ನು ತೊರೆದು ಶರಣಾಗತಿ ಬೆಳೆಸಿಕೊಳ್ಳುವುದು, ಧರ್ಮದ ಹಾದಿಯಲ್ಲಿ ನಡೆಯುವುದು, ಸೇವಾಭಾವವನ್ನು ಅಳವಡಿಸಿಕೊಳ್ಳುವುದು ಮತ್ತು ಭಗವಂತನ ಸ್ಮರಣೆಯಲ್ಲಿ ಬದುಕುವುದು-ಇವುಗಳೇ ಉತ್ಸವದ ಆಂತರಿಕ ಸಂದೇಶಗಳು.

**ತಿರುಮಲೆ ಎಂದರೆ ಭಕ್ತಿಯ ಸಂಗಮ:** ತಿರುಮಲೆಗೆ ಬರುವ ಭಕ್ತರ ಹಿನ್ನೆಲೆ ಬೇರೆ ಬೇರೆ. ಭಾಷೆ, ಪ್ರದೇಶ, ವಯಸ್ಸು, ಸಾಮಾಜಿಕ ಸ್ಥಿತಿ ಎಲ್ಲವೂ ವಿಭಿನ್ನ. ಆದರೆ ಶ್ರೀನಿವಾಸನ ಸನ್ನಿಧಿಯಲ್ಲಿ ಎಲ್ಲರೂ ಒಂದೇ ಭಾವದಲ್ಲಿ ಒಂದಾಗುತ್ತಾರೆ. ಒಂದೇ ನಾಮ ಮೊಳಗುತ್ತದೆ.

**"ಗೋವಿಂದಾ ಗೋವಿಂದಾ-ಶ್ರೀನಿವಾಸಾ ಗೋವಿಂದಾ!"**

ಈ ನಾಮಸ್ಮರಣೆಯಲ್ಲೇ ತಿರುಮಲೆಯ ನಿಜವಾದ ಶಕ್ತಿ ಅಡಗಿದೆ.

ಶ್ರೀನಿವಾಸನ ದರ್ಶನವೆಂದರೆ ಕೇವಲ ದೇವರ ಮೂರ್ತಿಯನ್ನು ನೋಡುವುದಲ್ಲ. ನಮ್ಮೊಳಗಿನ ಅಹಂಕಾರವನ್ನು ಇಳಿಸಿ, ಶರಣಾಗತಿಯ ಭಾವವನ್ನು ಬೆಳೆಸಿಕೊಳ್ಳುವುದೂ ಹೌದು. ಉತ್ಸವದ ಬಾಹ್ಯ ವೈಭವದ ಹಿಂದೆ ಅಡಗಿರುವ ಆಂತರಿಕ ಸಂದೇಶವೂ ಇದೇ.

ತಿರುಮಲೆಯ ಶ್ರೀವೆಂಕಟೇಶ್ವರನು ಭಕ್ತರ ಪಾಲಿಗೆ ಕೇವಲ ಒಂದು ಕ್ಷೇತ್ರದ ದೇವರಲ್ಲ. ಆತನು ಕಲಿಯುಗದ ಪ್ರತ್ಯಕ್ಷ ದೈವ. ಆದ್ದರಿಂದಲೇ ತಿರುಮಲೆಯತ್ತ ಹರಿದುಬರುವ ಭಕ್ತರ ಪ್ರವಾಹಕ್ಕೆ ಅಂತ್ಯವಿಲ್ಲ. ಏಳು ಬೆಟ್ಟಗಳ ನಡುವೆ ಮೊಳಗುವ 'ಗೋವಿಂದ' ನಾಮ, ಭಕ್ತರ ಹೃದಯದಲ್ಲಿ ಮೂಡುವ ಶರಣಾಗತಿ ಮತ್ತು ಶ್ರೀವಾರಿಯ ದಿವ್ಯ ದರ್ಶನ-ಇವೆಲ್ಲವೂ ಸೇರಿ ಬ್ರಹ್ಮೋತ್ಸವವನ್ನು ಒಂದು ಅಪೂರ್ವ ಆಧ್ಯಾತ್ಮಿಕ ಅನುಭವವನ್ನಾಗಿಸುತ್ತವೆ.

ನವರಾತ್ರಿಯ ಪಾವನ ಸಂದರ್ಭದಲ್ಲಿ ತಿರುಮಲೆಯ ಶ್ರೀವಾರಿ ಬ್ರಹ್ಮೋತ್ಸವವು ಲೋಕಕಲ್ಯಾಣದ ಸಂಕಲ್ಪದೊಂದಿಗೆ ಸಾಗಲಿ. ಶ್ರೀನಿವಾಸನ ಕೃಪಾಕಟಾಕ್ಷ ಎಲ್ಲ ಭಕ್ತರ ಮೇಲಿರಲಿ.

ಗೋವಿಂದಾ ಗೋವಿಂದಾ ಶ್ರೀನಿವಾಸಾ ಗೋವಿಂದಾ!

● **ಡಾ. ಗುರುರಾಜ ಪೋಶೆಟ್ಟಿಹಳ್ಳಿ**
**ಸಂಸ್ಕೃತಿ ಚಿಂತಕರು, ಬೆಂಗಳೂರು**

## ಪ್ರಾಣಿಗಳ ತ್ಯಾಜ್ಯ ಅಕ್ರಮ ಸಾಗಣೆ: ವಾಹನ ಮಾಲೀಕರಿಗೆ ರೂ 30 ಸಾವಿರ ದಂಡ

● ವಿಕ್ರಮ ವಾಹಿನಿ । ಬೆಂಗಳೂರು

ಬಾಣಸವಾಡಿ ಚಿಕನ್ ರಸ್ತೆಯಲ್ಲಿ ಪ್ರಾಣಿಗಳ ತ್ಯಾಜ್ಯವನ್ನು ಒಂದು ವಾಹನದಿಂದ ಮತ್ತೊಂದು ದೊಡ್ಡ ವಾಹನಕ್ಕೆ ಅಕ್ರಮವಾಗಿ ವರ್ಗಾಯಿಸಿದ ಪ್ರಕರಣಕ್ಕೆ ಸಂಬಂಧಿಸಿದಂತೆ ವಾಹನ ಮಾಲೀಕರಿಗೆ ಬೆಂಗಳೂರು ಉತ್ತರ ನಗರ ಪಾಲಿಕೆ 30 ಸಾವಿರ ದಂಡ ವಿಧಿಸಿದೆ.

ಅಕ್ಟೋಬರ್ 7ರಂದು ವಾರ್ಡ್ ಸಂಖ್ಯೆ 27ರ ವ್ಯಾಪ್ತಿಯಲ್ಲಿ ತ್ಯಾಜ್ಯ ವರ್ಗಾವಣೆ ನಡೆಯುತ್ತಿದ್ದ ಕುರಿತು ಸಾರ್ವಜನಿಕರು ಫೋಟೊ ಹಾಗೂ ವಿಡಿಯೊ ಸಹಿತ ಪಾಲಿಕೆಗೆ ದೂರು ನೀಡಿದ್ದರು. ಕೂಡಲೇ ಸ್ಥಳಕ್ಕೆ ಮಾರ್ಷಲ್‌ಗಳನ್ನು ಕಳುಹಿಸಲಾಯಿತಾದರೂ, ಅವರು ತಲುಪುವಷ್ಟರಲ್ಲಿ ವಾಹನಗಳು ಅಲ್ಲಿಂದ ತೆರಳಿದ್ದವು.

ಬಳಿಕ ಸಾರ್ವಜನಿಕರು ನೀಡಿದ ಚಿತ್ರಗಳಲ್ಲಿದ್ದ ವಾಹನಗಳ ನೋಂದಣಿ ಸಂಖ್ಯೆ ಆಧರಿಸಿ ವಾಹನಗಳು ಹಾಗೂ ಅವುಗಳ ಮಾಲೀಕರನ್ನು ಪತ್ತೆಹಚ್ಚಲಾಯಿತು. ವಾಹನಗಳು ಮತ್ತು ತ್ಯಾಜ್ಯ ಪಾಲಿಕೆಯ ವ್ಯಾಪ್ತಿಗೆ ಸೇರದಿದ್ದರೂ, ಘಟನೆ ಕುರಿತು ಎಚ್ಚರಿಕೆ ನೀಡಿ ದಂಡ ವಿಧಿಸಲಾಗಿದೆ ಎಂದು ಪಾಲಿಕೆ ತಿಳಿಸಿದೆ.

ಸಾರ್ವಜನಿಕರು ಇಂತಹ ಘಟನೆಗಳನ್ನು ಗಮನಿಸಿದಾಗ ಫೋಟೊ ಅಥವಾ ವಿಡಿಯೊ ಸಹಿತ ಪಾಲಿಕೆಯ ಗಮನಕ್ಕೆ ತಂದು ನಗರದ ಸ್ವಚ್ಛತೆ ಕಾಪಾಡಲು ಸಹಕರಿಸುವಂತೆ ಮನವಿ ಮಾಡಲಾಗಿದೆ.

ಇಂತಹ ಅಕ್ರಮ ಚಟುವಟಿಕೆಗಳಿಂದ ಸಾರ್ವಜನಿಕ ಆರೋಗ್ಯಕ್ಕೆ ಧಕ್ಕೆಯಾಗುವುದರ ಜತೆಗೆ, ಪರಿಸರ ಮಾಲಿನ್ಯ ಹಾಗೂ ದುರ್ವಾಸನೆಯ ಸಮಸ್ಯೆಯೂ ಉಂಟಾಗುವ ಸಾಧ್ಯತೆಯಿದೆ. ಹೀಗಾಗಿ, ಪ್ರಾಣಿಗಳ ತ್ಯಾಜ್ಯವನ್ನು ನಿಯಮಬಾಹಿರವಾಗಿ ಸಾಗಿಸುವುದು ಅಥವಾ ಸಾರ್ವಜನಿಕ ಸ್ಥಳಗಳಲ್ಲಿ ವರ್ಗಾವಣೆ ಮಾಡುವುದನ್ನು ತಡೆಯಲು ಸಂಬಂಧಪಟ್ಟ ಅಧಿಕಾರಿಗಳು ನಿಗಾ ವಹಿಸಿದ್ದಾರೆ.

## ರಾಮೋಹಳ್ಳಿ ಶ್ರೀರಾಮಕೃಷ್ಣ ಯೋಗಾಶ್ರಮದಲ್ಲಿ ಶ್ರೀಮಹಾ ಚಂಡಿಕಾಹೋಮ



● ವಿಕ್ರಮ ವಾಹಿನಿ । ಬೆಂಗಳೂರು

ನಗರ ಹೊರವಲಯದ ದೊಡ್ಡ ಆಲದಮರ ರಸ್ತೆ ರಾಮೋಹಳ್ಳಿಯ ಶ್ರೀರಾಮಕೃಷ್ಣ ಯೋಗಾಶ್ರಮದಲ್ಲಿ ನವರಾತ್ರಿಯ ಮೊದಲ ದಿನದ ಅಂಗವಾಗಿ ಶ್ರೀಮಹಾ ಚಂಡಿಕಾಹೋಮ ನಡೆಯಿತು.

ವೇದಬ್ರಹ್ಮ ಕೃಷ್ಣಮೂರ್ತಿ ಬಾಯರಿ ಅವರ ನೇತೃತ್ವದಲ್ಲಿ ಶ್ರೀಮಹಾ ಚಂಡಿಕಾ ಹೋಮ ನಡೆಯಿತು. ಶ್ರೀ ಯೋಗೇಶ್ವರಾನಂದ ಸ್ವಾಮಿಯವರ ಅಧ್ಯಕ್ಷತೆಯಲ್ಲಿ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಪಾಲೋಹಳ್ಳಿ ಭವತಾರಣಿ ಆಶ್ರಮದ ಮಾತಾ ವಿವೇಕಮಯೀ, ಯಲಹಂಕದ ರಾಮಕೃಷ್ಣ-ವಿವೇಕಾನಂದ ವೇದಾಂತಾಶ್ರಮದ ಸ್ವಾಮಿ ಅಭಯಾನಂದಜೀ ಸಾನಿಧ್ಯ ವಹಿಸಿದ್ದರು.

ಕಾರ್ಯಕ್ರಮದಲ್ಲಿ ಸುವರ್ಣಮುಖಿ ಸಂಸ್ಕೃತಿಧಾಮದ ಸಂಸ್ಥಾಪಕರಾದ ಆಚಾರ್ಯ ಡಾ. ನಾಗರಾಜ್, ಉದ್ಯಮಿ ಹಾಗೂ ಸಮಾಜ ಸೇವಕರಾದ ಉಷಾರಾಣಿ ಮತ್ತಿತರರು ಉಪಸ್ಥಿತರಿದ್ದರು.

## ಜ್ಞಾನೇಶ್ ರಾಜೀನಾಮೆಗೆ ಆಗ್ರಹ: 2ನೇ ದಿನವೂ 200ಕ್ಕೂ ಹೆಚ್ಚು ಮಂದಿ ವಶ

1ನೇ ಪುಟದಿಂದ

ಎಐಎಸ್‌ಎ ಅಧ್ಯಕ್ಷೆ ನೇಹಾ ಬೋರಾ ಸೇರಿದಂತೆ ಸಂಘಟನೆಯ ಸದಸ್ಯರನ್ನು ವಿಜಯ್ ಚೌಕ್ ಬಳಿ ವಶಕ್ಕೆ ಪಡೆಯಲಾಗಿದೆ. ಕನ್ನಾಟ್ ಪ್ಲೇಸ್ ಮೆಟ್ರೋ ನಿಲ್ದಾಣ ಹಾಗೂ ಗುರುದ್ವಾರ ಬಾಂಗ್ಲಾ ಸಾಹಿಬ್ ಬಳಿ ಶಾಂತಿಯುತವಾಗಿ ಪ್ರತಿಭಟಿಸುತ್ತಿದ್ದ ವೈದ್ಯರು ಮತ್ತು ಇತರ ಪ್ರತಿಭಟನಾಕಾರರನ್ನೂ ಪೊಲೀಸರು ವಶಕ್ಕೆ ಪಡೆದಿದ್ದಾರೆ ಎಂದು ಸಿಜೆಪಿ ಆರೋಪಿಸಿದೆ. ಪ್ರತಿಭಟನಾಕಾರರು ಮಾನವ ಸರಪಳಿ ರಚಿಸಿ ಪೊಲೀಸರ ಕ್ರಮವನ್ನು ವಿರೋಧಿಸಿದ ದೃಶ್ಯಗಳು ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡಿವೆ.

ಕೆವೈಎಸ್ ಕಾರ್ಯಕರ್ತರು ನಿಗಂಬೋಧ್ ಘಾಟ್ ಸೇರಿದಂತೆ ವಿವಿಧೆಡೆ ಪ್ರತಿಭಟನೆ ನಡೆಸಿ ಮುಖ್ಯ ಚುನಾವಣಾ ಆಯುಕ್ತರ ರಾಜೀನಾಮೆಗೆ ಆಗ್ರಹಿಸಿದ್ದಾರೆ. ಪ್ರತಿಭಟನಾಕಾರರು ಜಂತರ್ ಮಂತರ್ ತಲುಪುವುದನ್ನು ತಡೆಯಲು ನಗರದಾದ್ಯಂತ ಪೊಲೀಸರು ಹಲವು ಕಡೆಗಳಲ್ಲಿ ನಿಯೋಜನೆಗೊಂಡಿದ್ದಾರೆ. ಭದ್ರತಾ ವ್ಯವಸ್ಥೆಯ ಭಾಗವಾಗಿ 30 ಸಾವಿರಕ್ಕೂ ಹೆಚ್ಚು ಪೊಲೀಸ್ ಮತ್ತು ಅರೆಸೇನಾ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ ಎಂದು ವರದಿಯಾಗಿದೆ.

## ಇಂದು ಶ್ರೀನಿಧಿ ಆಚಾರ್ಯರಿಂದ ಉಂಜಲ್ ಸಂಗೀತ ಕಾರ್ಯಕ್ರಮ

● ವಿಕ್ರಮ ವಾಹಿನಿ । ಬೆಂಗಳೂರು

ನವರಾತ್ರಿ ಉತ್ಸವದ ಅಂಗವಾಗಿ ಬೆಂಗಳೂರಿನ ವೈಯಾಲಿಕಾವಲ್‌ನಲ್ಲಿರುವ ತಿರುಮಲ ತಿರುಪತಿ ದೇವಸ್ಥಾನದ ಶ್ರೀ ವೆಂಕಟೇಶ್ವರ ಸ್ವಾಮಿ ದೇವಸ್ಥಾನದಲ್ಲಿ ಹಿಂದೂ ಧರ್ಮ ಪ್ರಚಾರ ಪರಿಷತ್ ವತಿಯಿಂದ ಅಕ್ಟೋಬರ್ 13ರಂದು ಮಂಗಳವಾರ ಸಂಜೆ 6 ಗಂಟೆಗೆ ಉಂಜಲ್ ಸಂಗೀತ ಕಾರ್ಯಕ್ರಮ ಆಯೋಜಿಸಲಾಗಿದೆ.



ಕುಮಾರಿ ಶ್ರೀನಿಧಿ ಆಚಾರ್ಯ ಅವರು ಸಂಗೀತ ಕಾರ್ಯಕ್ರಮವನ್ನು ನಡೆಸಿಕೊಡಲಿದ್ದು, ಶ್ರೀನಿವಾಸ ಕಾಖಂಡಕಿ ತಬಲಾ ಹಾಗೂ ಪ್ರಕಾಶ್ ಕೀಬೋರ್ಡ್‌ನಲ್ಲಿ ಸಹಕರಿಸಲಿದ್ದಾರೆ ಎಂದು ಹಿಂದೂ ಧರ್ಮ ಪ್ರಚಾರ ಪರಿಷತ್‌ನ ಸಂಚಾಲಕ ಡಾ .ಪಿ. ಭುಜಂಗ ರಾವ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಕಾರ್ಯಕ್ರಮದಲ್ಲಿ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಶ್ರೀ ವೆಂಕಟೇಶ್ವರ ಸ್ವಾಮಿಯ ಕೃಪೆಗೆ ಪಾತ್ರರಾಗುವಂತೆ ಆಯೋಜಕರು ಮನವಿ ಮಾಡಿದ್ದಾರೆ.



ಯಶವಂತಪುರ ವಿಧಾನಸಭಾ ಕ್ಷೇತ್ರದ ಕೆಂಗೇರಿ ಉಪನಗರದ ಗಣೇಶ ಮೈದಾನದಲ್ಲಿ ನಡೆಯುತ್ತಿರುವ 'ಯಶವಂತಪುರ ದಸರಾ' ಮಹೋತ್ಸವದ ಎರಡನೇ ದಿನ ಶಾಸಕ ಎಸ್.ಟಿ. ಸೋಮಶೇಖರ್ ಅವರು ಚಾಮುಂಡೇಶ್ವರಿ ಅಮ್ಮನವರ ದೇವಾಲಯದಲ್ಲಿ ವಿಶೇಷ ಪೂಜೆಯಲ್ಲಿ ಪಾಲ್ಗೊಂಡು, ನಾಡಿನ ಸಮೃದ್ಧಿಗಾಗಿ ಪ್ರಾರ್ಥಿಸಿದರು. ಬಳಿಕ ರೈತರ ಸಂತೆಗೆ ಭೇಟಿ ನೀಡಿ, ಪ್ರಗತಿಪರ ರೈತರು ಬೆಳೆದ ತಾಜಾ ಕೃಷಿ ಉತ್ಪನ್ನಗಳು ಹಾಗೂ ತರಕಾರಿಗಳನ್ನು ಖರೀದಿಸುವ ಮೂಲಕ ರೈತರನ್ನು ಪ್ರೋತ್ಸಾಹಿಸಿದರು.

## ಕರ್ನಾಟಕ ಸೇರಿ ಐದು ರಾಜ್ಯಗಳಲ್ಲಿ ಭಾರಿ ಮಳೆ ಮುನ್ಸೂಚನೆ

● ವಿಕ್ರಮ ವಾಹಿನಿ । ಬೆಂಗಳೂರು

ದೇಶದ ಹಲವು ಭಾಗಗಳಲ್ಲಿ ಹವಾಮಾನದಲ್ಲಿ ಬದಲಾವಣೆಯಾಗಲಿದ್ದು, ಕರ್ನಾಟಕ ಸೇರಿದಂತೆ ದಕ್ಷಿಣ ಭಾರತದ ಹಲವು ರಾಜ್ಯಗಳಲ್ಲಿ ಮುಂದಿನ ದಿನಗಳಲ್ಲಿ ಭಾರಿ ಮಳೆಯಾಗುವ ಸಾಧ್ಯತೆಯಿದೆ ಎಂದು ಭಾರತೀಯ ಹವಾಮಾನ ಇಲಾಖೆ (ಐಎಂಡಿ) ಮುನ್ಸೂಚನೆ ನೀಡಿದೆ. ದಕ್ಷಿಣ ಭಾರತದಲ್ಲಿ ಈಶಾನ್ಯ ಮಾನ್ಸೂನ್ ಮಳೆ ಆರಂಭವಾಗುವ ನಿರೀಕ್ಷೆಯಿದ್ದು, ಅ.15ರಿಂದ 18ರವರೆಗೆ ಮಳೆಯ ಪ್ರಮಾಣ ಹೆಚ್ಚಾಗಬಹುದು.

ಕರ್ನಾಟಕದ ಕರಾವಳಿ ಮತ್ತು ದಕ್ಷಿಣ ಒಳನಾಡು, ಕೇರಳ, ತಮಿಳುನಾಡು, ಪುದುಚೇರಿ ಹಾಗೂ ಕಾರೈಕಲ್ ಮತ್ತು ಆಂಧ್ರಪ್ರದೇಶದ ಕರಾವಳಿ ಪ್ರದೇಶಗಳಲ್ಲಿ ಭಾರಿ ಮಳೆಯಾಗುವ ಸಾಧ್ಯತೆಯಿದೆ. ಉತ್ತರ ಒಳನಾಡಿನ ಕೆಲವು ಭಾಗಗಳು ಹಾಗೂ ರಾಯಲಸೀಮಾದಲ್ಲಿಯೂ ಮಳೆಯಾಗುವ ಮುನ್ಸೂಚನೆ ನೀಡಲಾಗಿದೆ. ಇನ್ನೊಂದೆಡೆ, ದೆಹಲಿ-ಎನ್‌ಸಿಆರ್, ಪಂಜಾಬ್ ಮತ್ತು ಹರಿಯಾಣದಲ್ಲಿ ಅ.12ರಿಂದ 15ರವರೆಗೆ ಬಲವಾದ ಗಾಳಿಯೊಂದಿಗೆ ಮಳೆಯಾಗುವ ನಿರೀಕ್ಷೆಯಿದೆ. ಗಾಳಿಯ ವೇಗ ಗಂಟೆಗೆ 40ರಿಂದ 50 ಕಿ.ಮೀ. ತಲುಪಲಿದ್ದು, ಕೆಲವೆಡೆ 60 ಕಿ.ಮೀ. ವೇಗದಲ್ಲಿ ಬೀಸುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

ಮಳೆಯ ಹಿನ್ನೆಲೆಯಲ್ಲಿ ಕರಾವಳಿ ಮತ್ತು ದಕ್ಷಿಣ ಒಳನಾಡಿನ ಜಿಲ್ಲೆಗಳಲ್ಲಿ ಹವಾಮಾನ ಪರಿಸ್ಥಿತಿಯ ಮೇಲೆ ನಿಗಾ ಇರಿಸುವ ಅಗತ್ಯವಿದೆ. ಗುಡುಗು, ಮಿಂಚು ಹಾಗೂ ಬಲವಾದ ಗಾಳಿ ಬೀಸುವ ಸಂದರ್ಭದಲ್ಲಿ ಸಾರ್ವಜನಿಕರು ಮುನ್ನೆಚ್ಚರಿಕೆ ವಹಿಸಬೇಕು. ಹವಾಮಾನ ಇಲಾಖೆಯ ಸ್ಥಳೀಯ ಮುನ್ಸೂಚನೆಗಳನ್ನು ಗಮನಿಸುವಂತೆ ಸೂಚಿಸಲಾಗಿದೆ.

ಈಶಾನ್ಯ ಮಾನ್ಸೂನ್ ಆರಂಭದಿಂದ ದಕ್ಷಿಣ ಭಾರತದ ಹಲವು ಭಾಗಗಳಲ್ಲಿ ಮಳೆಯ ಚಟುವಟಿಕೆ ಹೆಚ್ಚಾಗುವ ನಿರೀಕ್ಷೆಯಿದೆ. ನಿರಂತರ ಮಳೆಯಿಂದ ತಗ್ಗು ಪ್ರದೇಶಗಳಲ್ಲಿ ನೀರು ನಿಲ್ಲುವ ಸಾಧ್ಯತೆಯಿದ್ದು, ರೈತರು ಹಾಗೂ ಪ್ರಯಾಣಿಕರು ಹವಾಮಾನ ಬದಲಾವಣೆಗಳನ್ನು ಗಮನದಲ್ಲಿಟ್ಟುಕೊಂಡು ಅಗತ್ಯ ಮುನ್ನೆಚ್ಚರಿಕೆ ವಹಿಸಬೇಕು.

# ಡಲ್ಲಾಸ್‌ನಲ್ಲಿ ಪುತ್ತಿಗೆ ಶ್ರೀಗಳಿಗೆ ಭವ್ಯ ಗುರುವಂದನೆ

## ವಿಶ್ವದ ಕಲ್ಯಾಣಕ್ಕಾಗಿ ಭಗವದ್ಗೀತೆ; ಶ್ರೀಕೃಷ್ಣನ ಮೂಲಕ ಸಂಬಂಧಗಳ ಬೆಸುಗೆ ಸಾರ್ಥಕ: ಪುತ್ತಿಗೆ ಶ್ರೀ

● ವಿಕ್ರಮ ವಾಹಿನಿ । ಡಲ್ಲಾಸ್ (ಅಮೆರಿಕ)

ಉಡುಪಿ ಶ್ರೀಕೃಷ್ಣ ಮಠದ ಚತುರ್ಥ ವಿಶ್ವ ಗೀತಾ ಪರ್ಯಾಯವನ್ನು ಯಶಸ್ವಿಯಾಗಿ ಪೂರೈಸಿ ವಿಶ್ವಸಂಚಾರ ಕೈಗೊಂಡಿರುವ ಪುತ್ತಿಗೆ ಮಠದ ಶ್ರೀ ಸುಗುಣೇಂದ್ರ ತೀರ್ಥ ಶ್ರೀಪಾದರಿಗೆ ಡಲ್ಲಾಸ್‌ನಲ್ಲಿ ಭಕ್ತರು ಹಾಗೂ ವಿವಿಧ ಸಂಘಟನೆಗಳ ವತಿಯಿಂದ ಭವ್ಯ ಗುರುವಂದನೆ ಸಲ್ಲಿಸಲಾಯಿತು.



ಅನುಗ್ರಹ ಸಂದೇಶ ನೀಡಿದ ಶ್ರೀಗಳು, ಭಗವದ್ಗೀತೆ ಹಿಂದೂಗಳಿಗೆ ಮಾತ್ರ ಸೀಮಿತವಾದ ಗ್ರಂಥವಲ್ಲ; ಅದು ಸಮಸ್ತ ವಿಶ್ವದ ಕಲ್ಯಾಣಕ್ಕಾಗಿ ಶ್ರೀಕೃಷ್ಣ ನೀಡಿದ ದಿವ್ಯಜ್ಞಾನ. ಜೀವನದ ಸಮಸ್ಯೆಗಳನ್ನು ಧೈರ್ಯ ಮತ್ತು ವಿವೇಕದಿಂದ ಎದುರಿಸಲು ಗೀತೆ ಮಾರ್ಗದರ್ಶನ ನೀಡುತ್ತದೆ. ಕುಟುಂಬದ ಪ್ರತಿಯೊಂದು ಸಂಬಂಧವನ್ನೂ ಶ್ರೀಕೃಷ್ಣನ ಅನುಗ್ರಹವೆಂದು ಭಾವಿಸಿದಾಗ ಬದುಕು ಸಾರ್ಥಕವಾಗುತ್ತದೆ ಎಂದು ಹೇಳಿದರು.

ಚತುರ್ಥ ವಿಶ್ವ ಗೀತಾ ಪರ್ಯಾಯದಲ್ಲಿ ವಿವಿಧ ದೇಶಗಳ ಭಕ್ತರು ಪಾಲ್ಗೊಂಡಿದ್ದು, ಕೋಟಿ ಗೀತಾ ಲೇಖನ ಯಜ್ಞದಲ್ಲಿ ಅನೇಕರು ಹತ್ತು, ಇಪ್ಪತ್ತು ಹಾಗೂ ನೂರು ಬಾರಿ ಭಗವದ್ಗೀತೆಯನ್ನು ಬರೆದು ಆನಂದ ಅನುಭವಿಸಿದ್ದಾರೆ. ಇದು ಗೀತೆಯ ಮಹಿಮೆಗೆ ಸಾಕ್ಷಿಯಾಗಿದೆ ಎಂದು ತಿಳಿಸಿದರು.

ವೇಗವಾಗಿ ಬೆಳೆಯುತ್ತಿರುವ ಡಲ್ಲಾಸ್‌ನಲ್ಲಿ ಶ್ರೀಕೃಷ್ಣ ವೃಂದಾವನವನ್ನು ವಿಶಾಲ ಧಾರ್ಮಿಕ ಮತ್ತು ಸಾಂಸ್ಕೃತಿಕ ಕೇಂದ್ರವಾಗಿ ಅಭಿವೃದ್ಧಿಪಡಿಸುವ ಉದ್ದೇಶವಿದೆ. ಇದಕ್ಕಾಗಿ ವಿಶಾಲ ಜಾಗದ ಹುಡುಕಾಟ ನಡೆಯುತ್ತಿದ್ದು, ಮುಂದಿನ ಪೀಳಿಗೆಯ ಕಲ್ಯಾಣಕ್ಕಾಗಿ ಈ ಕಾರ್ಯಕ್ಕೆ ಎಲ್ಲರೂ ಕೈಜೋಡಿಸಬೇಕು ಎಂದು ಶ್ರೀಗಳು ಕರೆ ನೀಡಿದರು. ಭಕ್ತರು ಸಲ್ಲಿಸಿದ ಗೌರವವನ್ನು ಶ್ರೀಕೃಷ್ಣನ ಚರಣಗಳಿಗೆ ಸಮರ್ಪಿಸುವುದಾಗಿ ತಿಳಿಸಿದರು.

ಸಮಾರಂಭದಲ್ಲಿ ಗಣ್ಯರು ಮಾತನಾಡಿ, ಸತತ ಎರಡು ವರ್ಷಗಳ ಕಾಲ ಶ್ರೀಕೃಷ್ಣ ಪೂಜೆ ನೆರವೇರಿಸಿದ ಶ್ರೀಗಳ ತಪಸ್ಸು, ಸರಳತೆ, ಕರುಣೆ ಹಾಗೂ ಜಾಗತಿಕ ಧಾರ್ಮಿಕ ಸೇವೆಯನ್ನು ಶ್ಲಾಘಿಸಿದರು. ಗುರುಗಳು ಸ್ಥಾಪಿಸಿದ ಸಂಸ್ಥೆಗಳನ್ನು ಉಳಿಸಿ ಬೆಳೆಸುವುದೇ ನಿಜವಾದ ಗುರುಸೇವೆ ಎಂದು ಅಭಿಪ್ರಾಯಪಟ್ಟರು.

ಶ್ರೀ ಪುತ್ತಿಗೆ ಮಠದ ಅಂತರರಾಷ್ಟ್ರೀಯ ಕಾರ್ಯದರ್ಶಿ ಪ್ರಸನ್ನ ಆಚಾರ್ಯ ಅವರು ಚತುರ್ಥ ವಿಶ್ವ ಗೀತಾ ಪರ್ಯಾಯದ ಮಹತ್ವ ಹಾಗೂ ಅದರ ಪ್ರಮುಖ ಸಾಧನೆಗಳನ್ನು ವಿವರಿಸಿದರು.

# ಅಂತರ್‌ರಾಜ್ಯ ದ್ವಿಚಕ್ರ ವಾಹನ ಕಳ್ಳರ ಬಂಧನ: ರೂ 18 ಲಕ್ಷ ಮೌಲ್ಯದ 29 ಬೈಕ್‌ಗಳು ವಶಕ್ಕೆ

● ವಿಕ್ರಮ ವಾಹಿನಿ । ಬೆಂಗಳೂರು

ದ್ವಿಚಕ್ರ ವಾಹನಗಳನ್ನು ಕಳ್ಳತನ ಮಾಡಿ ಕಡಿಮೆ ಬೆಲೆಗೆ ಮಾರಾಟ ಮಾಡುತ್ತಿದ್ದ ತಮಿಳುನಾಡು ಮೂಲದ ಅಂತರ್‌ರಾಜ್ಯ ಕಳ್ಳರ ತಂಡವನ್ನು ಬಂಧಿಸುವಲ್ಲಿ ಆನೇಕಲ್ ತಾಲ್ಲೂಕಿನ ಜಿಗಣಿ ಪೊಲೀಸರು ಯಶಸ್ವಿಯಾಗಿದ್ದಾರೆ. ಬಂಧಿತರಿಂದ ಸುಮಾರು 18 ಲಕ್ಷ ಮೌಲ್ಯದ 29 ದ್ವಿಚಕ್ರ ವಾಹನಗಳನ್ನು ವಶಪಡಿಸಿಕೊಳ್ಳಲಾಗಿದೆ.

ತಮಿಳುನಾಡು ಮೂಲದ ರಾಜಶೇಖರ್ (28), ಚರಣ್ ಕುಮಾರ್ (19) ಮತ್ತು ಪವನ್ ಕುಮಾರ್ (21) ಬಂಧಿತ ಆರೋಪಿಗಳು. ಇವರು ವಿವಿಧೆಡೆ ದ್ವಿಚಕ್ರ ವಾಹನಗಳನ್ನು ಕಳ್ಳತನ ಮಾಡಿ, ಅವುಗಳನ್ನು ಕಡಿಮೆ ಬೆಲೆಗೆ ಮಾರಾಟ ಮಾಡುತ್ತಿದ್ದರು ಎನ್ನಲಾಗಿದೆ.

ಆರೋಪಿಗಳು ನಕಲಿ ಕೀಗಳನ್ನು ಬಳಸಿ ಹಾಗೂ ಬೈಕ್‌ಗಳ ಹ್ಯಾಂಡಲ್‌ಗಳ ಬೀಗಗಳನ್ನು ಮುರಿದು ವಾಹನಗಳನ್ನು ಕಳ್ಳತನ ಮಾಡುತ್ತಿದ್ದರು. ಬಳಿಕ ಕದ್ದ ಬೈಕ್‌ಗಳನ್ನು ಕಡಿಮೆ ಬೆಲೆಗೆ ಮಾರಾಟ ಮಾಡಿ, ಅದರಿಂದ ಬಂದ ಹಣವನ್ನು ಮೋಜು–ಮಸ್ತಿಗಾಗಿ ಖರ್ಚು ಮಾಡುತ್ತಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ.

ಈ ಕುರಿತು ಖಚಿತ ಮಾಹಿತಿ ಸಂಗ್ರಹಿಸಿದ ಜಿಗಣಿ ಪೊಲೀಸ್ ಠಾಣೆಯ ಇನ್‌ಸ್ಪೆಕ್ಟರ್ ನವೀನ್ ನೇತೃತ್ವದ ಪೊಲೀಸ್ ತಂಡ ಕಾರ್ಯಾಚರಣೆ ನಡೆಸಿ ಮೂವರು ಆರೋಪಿಗಳನ್ನು ಬಂಧಿಸಿದೆ. ಬಂಧಿತರಿಂದ ವಶಪಡಿಸಿಕೊಂಡಿರುವ 29 ದ್ವಿಚಕ್ರ ವಾಹನಗಳ ಮೌಲ್ಯ ಸುಮಾರು 18 ಲಕ್ಷ ಎಂದು ಅಂದಾಜಿಸಲಾಗಿದೆ.

ಈ ಕಾರ್ಯಾಚರಣೆಯಿಂದ ದ್ವಿಚಕ್ರ ವಾಹನ ಕಳ್ಳತನ ಪ್ರಕರಣಗಳ ತನಿಖೆಗೆ ಮಹತ್ವದ ಮುನ್ನಡೆ ದೊರೆತಿದೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಪೊಲೀಸರು ಮುಂದಿನ ತನಿಖೆ ಕೈಗೊಂಡಿದ್ದಾರೆ.

# ದಕ್ಷಿಣ ಕರ್ನಾಟಕ ಅಂಚೆ ವಲಯದ ಪ್ರಧಾನ ಕಚೇರಿ ಮೈಸೂರಿಗೆ

● ವಿಕ್ರಮ ವಾಹಿನಿ । ಮೈಸೂರು

ದಕ್ಷಿಣ ಕರ್ನಾಟಕ ಅಂಚೆ ವಲಯದ ಪ್ರಧಾನ ಕಚೇರಿಯನ್ನು ಬೆಂಗಳೂರಿನಿಂದ ಮೈಸೂರಿಗೆ ಸ್ಥಳಾಂತರಿಸುವ ಪ್ರಸ್ತಾವನೆಗೆ ಕೇಂದ್ರ ಸರ್ಕಾರ ತಾತ್ವಿಕ ಒಪ್ಪಿಗೆ ನೀಡಿದೆ. ಕಟ್ಟಡದ ವ್ಯವಸ್ಥೆ ಸೇರಿದಂತೆ ಅಗತ್ಯ ಪ್ರಕ್ರಿಯೆಗಳು ಪೂರ್ಣಗೊಂಡ ಬಳಿಕ ಕಚೇರಿ ಸ್ಥಳಾಂತರ ಕಾರ್ಯ ಕೈಗೊಳ್ಳಲಾಗುವುದು ಎಂದು ಮೈಸೂರು–ಕೊಡಗು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ತಿಳಿಸಿದ್ದಾರೆ.

ಕೇಂದ್ರ ಸಂವಹನ ಹಾಗೂ ಈಶಾನ್ಯ ಪ್ರದೇಶಾಭಿವೃದ್ಧಿ ಸಚಿವ ಜ್ಯೋತಿರಾದಿತ್ಯ ಎಂ. ಸಿಂಧಿಯಾ ಅವರು ಅ.7ರಂದು ಸಂಸದರಿಗೆ ಬರೆದ ಪತ್ರದಲ್ಲಿ ಈ ವಿಷಯವನ್ನು ದೃಢಪಡಿಸಿದ್ದಾರೆ. ಪ್ರಧಾನ ಕಚೇರಿಯನ್ನು ಮೈಸೂರಿಗೆ ಸ್ಥಳಾಂತರಿಸುವಂತೆ ಕೋರಿ ಯದುವೀರ್ ಅವರು ಆ.7ರಂದು ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಸಿದ್ದರು.

ಈ ಪ್ರಸ್ತಾವನೆಯನ್ನು ಪರಿಶೀಲಿಸಿರುವ ಅಂಚೆ ಇಲಾಖೆಯು ಆಡಳಿತಾತ್ಮಕ ವ್ಯವಸ್ಥೆಯನ್ನು ಪುನರ್‌ರಚಿಸುವ ಹಾಗೂ ಸಮತೋಲಿತ ಆಡಳಿತಕ್ಕೆ ಒತ್ತು ನೀಡುವ ಉದ್ದೇಶದಿಂದ ಸ್ಥಳಾಂತರಕ್ಕೆ ತಾತ್ವಿಕ ಒಪ್ಪಿಗೆ ನೀಡಿದೆ. ಅಗತ್ಯ ಪ್ರಕ್ರಿಯೆಗಳನ್ನು ಪೂರ್ಣಗೊಳಿಸಿ, ಪ್ರಾದೇಶಿಕ ಕಚೇರಿಗೆ ಸೂಕ್ತ ಕಟ್ಟಡ ವ್ಯವಸ್ಥೆ ಮಾಡಿದ ಬಳಿಕ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಸಚಿವರು ತಿಳಿಸಿದ್ದಾರೆ.

ಪ್ರಧಾನ ಕಚೇರಿ ಮೈಸೂರಿಗೆ ಸ್ಥಳಾಂತರಗೊಂಡರೆ ನಗರದ ಆಡಳಿತಾತ್ಮಕ ಮಹತ್ವ ಹೆಚ್ಚುವುದರ ಜತೆಗೆ, ಬೆಂಗಳೂರಿನಾಚೆಗೆ ಸರ್ಕಾರಿ ಕಚೇರಿಗಳನ್ನು ವಿಕೇಂದ್ರೀಕರಿಸುವ ಪ್ರಯತ್ನಕ್ಕೂ ಬಲ ಸಿಗಲಿದೆ. ಪ್ರಸ್ತಾವನೆಗೆ ಒಪ್ಪಿಗೆ ನೀಡಿದ ಕೇಂದ್ರ ಸಚಿವರು ಹಾಗೂ ಅಂಚೆ ಇಲಾಖೆಯ ಅಧಿಕಾರಿಗಳಿಗೆ ಯದುವೀರ್ ಒಡೆಯರ್ ಕೃತಜ್ಞತೆ ಸಲ್ಲಿಸಿದ್ದಾರೆ. ಸ್ಥಳಾಂತರ ಪ್ರಕ್ರಿಯೆ ಶೀಘ್ರ ಪೂರ್ಣಗೊಳಿಸಲು ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಲಾಗುವುದು ಎಂದು ಅವರ ಕಚೇರಿ ತಿಳಿಸಿದೆ.

# ಉದ್ಯೋಗಖಾತ್ರಿ ಹಣ ಪಾವತಿ ವಿಳಂಬ ಕ್ರಮಕ್ಕೆ ಖಂಡ್ರೆ ಸೂಚನೆ

● ವಿಕ್ರಮ ವಾಹಿನಿ । ಬೆಂಗಳೂರು



"ವಿಬಿಜಿ ರಾಮ್ ಜಿ ಯೋಜನೆಯಡಿ ಕೆಲಸ ಮಾಡಿದ ಕಾರ್ಮಿಕರಿಗೆ 15 ದಿನಗಳೊಳಗೆ ಕೂಲಿ ಪಾವತಿಸದಿರುವುದು ಗಂಭೀರ ವಿಚಾರ. 12 ಜಿಲ್ಲೆಗಳ 311 ಗ್ರಾಮ ಪಂಚಾಯತಿಗಳಲ್ಲಿ ವಿಳಂಬವಾಗಿರುವ ಹಿನ್ನೆಲೆಯಲ್ಲಿ 308 ಪಿಡಿಒಗಳು, 74 ತಾಲೂಕು ಕಾರ್ಯನಿರ್ವಹಣಾಧಿಕಾರಿಗಳು ಹಾಗೂ 12 ಉಪ ಕಾರ್ಯದರ್ಶಿಗಳಿಗೆ ಕಾರಣ ಕೇಳಿ ನೋಟಿಸ್ ನೀಡಲು ಸೂಚಿಸಲಾಗಿದೆ. ಅಧಿಕಾರಿಗಳ ನಿರ್ಲಕ್ಷ್ಯದಿಂದ ಗ್ರಾಮೀಣ ಕಾರ್ಮಿಕರು ಗುಳೆ ಹೋಗುವಂತಾಗಬಾರದು. ಇನ್ನು ಮುಂದೆ ಕೂಲಿ ಪಾವತಿಯಲ್ಲಿ ವಿಳಂಬವಾದರೆ ಸಂಬಂಧಪಟ್ಟ ಅಧಿಕಾರಿಗಳನ್ನೇ ಹೊಣೆ ಮಾಡಲಾಗುವುದು." – ಈಶ್ವರ ಬಿ. ಖಂಡ್ರೆ, ಸಚಿವರು

ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ –ವಿಬಿಜಿ ರಾಮ್ ಜಿಯಡಿ ಕಾರ್ಮಿಕರಿಗೆ ಕೂಲಿ ಹಣ ಪಾವತಿಸುವಲ್ಲಿ ವಿಳಂಬ ಹಾಗೂ ನಿರ್ಲಕ್ಷ್ಯ ತೋರಿದ 308 ಪಿಡಿಒ, 12 ಉಪ ಕಾರ್ಯದರ್ಶಿ ಮತ್ತು 74 ತಾಲೂಕು ಕಾರ್ಯನಿರ್ವಹಣಾಧಿಕಾರಿಗಳಿಗೆ ಕಾರಣ ಕೇಳಿ ನೋಟಿಸ್ ನೀಡುವಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ಸೂಚನೆ ನೀಡಿದ್ದಾರೆ.

ಇಲಾಖೆಯ ಕಾರ್ಯದರ್ಶಿ ಮತ್ತು 12 ಜಿಲ್ಲಾ ಪಂಚಾಯತಿ ಮುಖ್ಯಕಾರ್ಯನಿರ್ವಹಣಾಧಿಕಾರಿಗಳಿಗೆ ಈ ಸಂಬಂಧ ಲಿಖಿತ ಸೂಚನೆ ನೀಡಿರುವ ಸಚಿವರು, ವಿಬಿಜಿ ರಾಮ್ ಜಿ ಅಡಿ ಕೆಲಸ ಮಾಡುವ ಫಲಾನುಭವಿಗಳಿಗೆ 15 ದಿನಗಳ ಒಳಗಾಗಿ ಕೂಲಿ ಹಣ ಪಾವತಿ ಮಾಡದಿದ್ದರೆ ಸಂಬಂಧಿತ ಪಿಡಿಓಗಳನ್ನೇ ಹೊಣೆ ಮಾಡಲಾಗುವುದು ಎಂಬ ಸ್ಪಷ್ಟ ಸೂಚನೆ ನೀಡಿದ್ದರೂ 12 ಜಿಲ್ಲೆಗಳ 311 ಗ್ರಾಮ ಪಂಚಾಯತಿಗಳಲ್ಲಿ ವಿಳಂಬ ಆಗಿರುವ ಬಗ್ಗೆ ಸಚಿವರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಗ್ರಾಮ ಪಂಚಾಯತಿಗಳಿಗೆ ವಿಬಿಜಿ ರಾಮ್ ಜಿ ಕೂಲಿ ಹಣ ಬಿಡುಗಡೆ ಆಗಿದ್ದರೂ ಕೆಲಸ ಮಾಡಿದ ಅಕುಶಲ ಕಾರ್ಮಿಕರಿಗೆ ಕೂಲಿ ಹಣ ಪಾವತಿಸದಿರುವುದನ್ನು ಅತ್ಯಂತ ಗಂಭೀರವಾಗಿ ಪರಿಗಣಿಸಿರುವ ಸಚಿವರು, ಅಧಿಕಾರಿಗಳ ಇಂತಹ ನಿರ್ಲಕ್ಷ್ಯದಿಂದಾಗಿ, ಬರ ಪರಿಸ್ಥಿತಿಯಲ್ಲೂ ಜನ ವಿಬಿಜಿ ರಾಮ್ ಜಿ ಕೆಲಸಕ್ಕೆ ಬರಲು ಹಿಂದೇಟು ಹಾಕಿ, ಗುಳೆ ಹೋಗುತ್ತಿದ್ದಾರೆ ಎಂದು ಬೇಸರ ವ್ಯಕ್ತಪಡಿಸಿದ್ದಾರೆ.

ಬಾಗಲಕೋಟೆ ಜಿಲ್ಲೆಯಲ್ಲಿ 23, ಬೆಳಗಾವಿಯಲ್ಲಿ 52, ಚಾಮರಾಜನಗರದಲ್ಲಿ 13, ಚಿಕ್ಕಮಗಳೂರು ಜಿಲ್ಲೆಯಲ್ಲಿ 14, ದಕ್ಷಿಣ ಕನ್ನಡದಲ್ಲಿ 15, ಹಾಸನ ಜಿಲ್ಲೆಯಲ್ಲಿ 47, ಕೊಡಗು ಜಿಲ್ಲೆ 25, ಮಂಡ್ಯ ಜಿಲ್ಲೆ 13, ಮೈಸೂರು ಜಿಲ್ಲೆಯಲ್ಲಿ 53, ಶಿವಮೊಗ್ಗ ಜಿಲ್ಲೆ 14, ಉಡುಪಿ ಜಿಲ್ಲೆಯಲ್ಲಿ 23, ವಿಜಯಪುರ ಜಿಲ್ಲೆಯಲ್ಲಿ 16 ಸೇರಿ ಒಟ್ಟು 311 ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಕೆಲಸ ಮಾಡಿದ ಅಕುಶಲ ಕಾರ್ಮಿಕರಿಗೆ ಕೂಲಿ ಹಣ ಪಾವತಿ ಮಾಡುವಲ್ಲಿ ವಿಳಂಬ ಆಗಿರುವ ಹಿನ್ನೆಲೆಯಲ್ಲಿ ಈ ಎಲ್ಲ ಗ್ರಾ.ಪಂ.ಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಮೇಲ್ವಿಚಾರಣೆ ಮಾಡಬೇಕಾದ ಜವಾಬ್ದಾರಿ ಹೊತ್ತ ತಾಲೂಕು ಕಾರ್ಯನಿರ್ವಹಣಾಧಿಕಾರಿಗಳು ಹಾಗೂ 12 ಜಿಲ್ಲಾ ಪಂಚಾಯತಿಗಳ ಉಪ ಕಾರ್ಯದರ್ಶಿಗಳಿಗೆ ಕಾರಣ ಕೇಳಿ ನೋಟಿಸ್ ನೀಡಿ, ಸಮಜಾಯಿಷಿ ಪಡೆಯುವಂತೆ ಸೂಚಿಸಿದ್ದಾರೆ.

ಇನ್ನು ಮುಂದೆ ಈ ರೀತಿ ಯಾವುದೇ ಪಂಚಾಯತಿಯಲ್ಲಿ ಕೂಲಿ ಹಣ ಪಾವತಿಯಲ್ಲಿ ವಿಳಂಬ ಆಗದಂತೆ ಕ್ರಮ ವಹಿಸಲು ಇಲಾಖೆಯ ಕಾರ್ಯದರ್ಶಿ ಮತ್ತು 12 ಜಿಲ್ಲೆಗಳ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳಿಗೆ ಈಶ್ವರ ಖಂಡ್ರೆ ಸ್ಪಷ್ಟ ಸೂಚನೆ ನೀಡಿದ್ದಾರೆ.

ಕೇಂದ್ರ ಸರ್ಕಾರ ಮನ್ರೇಗಾದಲ್ಲಿದ್ದ 90:10ರ ಅನುಪಾತವನ್ನು ವಿಬಿಜಿ ರಾಮ್ ಜಿಯಲ್ಲಿ 60:40ಕ್ಕೆ ಬದಲಾಯಿಸಿದ ಪರಿಣಾಮ ರಾಜ್ಯ ಸರ್ಕಾರಕ್ಕೆ ಹೆಚ್ಚಿನ ಆರ್ಥಿಕ ಹೊರೆಯಾದರೂ, ಗ್ರಾಮೀಣ ಬಡವರು, ಹಿಂದುಳಿದವರು, ಪರಿಶಿಷ್ಟ ಜಾತಿ ಪಂಗಡದ ಬಡವರು, ಭೂರಹಿತ ಕೂಲಿ ಕಾರ್ಮಿಕರಿಗೆ ತೊಂದರೆಯಾಗಿ ಅವರು ಗುಳೆ ಹೋಗಬಾರದು ಹಾಗೂ ಗ್ರಾಮೀಣ ಬಡವರಿಗೆ ನೆರವಾಗಬೇಕು ಎಂಬ ಉದ್ದೇಶದಿಂದ ರಾಜ್ಯ ಸರ್ಕಾರ ಜುಲೈ 1ರಿಂದ ಯೋಜನೆಯನ್ನು ಜಾರಿಗೆ ತಂದಿದೆ. ಆದರೆ ಅಧಿಕಾರಿಗಳ ನಿರ್ಲಕ್ಷ್ಯ ಮತ್ತು ವಿಳಂಬ ಧೋರಣೆಯಿಂದ ಯೋಜನೆಯ ಉದ್ದೇಶವೇ ನಾಶವಾಗುತ್ತದೆ ಎಂದು ತಿಳಿಸಿದ್ದಾರೆ.

# 10 ಸಾವಿರಕ್ಕೂ ಹೆಚ್ಚು ಬೋಗಸ್ ಮತದಾರರು: ಅನಿಲ್ ಬೆನಕೆ

● ವಿಕ್ರಮ ವಾಹಿನಿ । ಬೆಂಗಳೂರು

ಬೆಳಗಾವಿ ಉತ್ತರದಲ್ಲಿ 10,000 ಕ್ಕಿಂತ ಜಾಸ್ತಿ ಬೋಗಸ್ ಮತದಾರರು ಇದ್ದಾರೆ ಎಂದು ಬಿಜೆಪಿ ರಾಜ್ಯ ಉಪಾಧ್ಯಕ್ಷ ಅನಿಲ್ ಬೆನಕೆ ಅವರು ಆರೋಪಿಸಿದ್ದಾರೆ.

ನಗರದ ರಾಜ್ಯ ಬಿಜೆಪಿ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಇಂದು ಮಾಧ್ಯಮ ಗೋಷ್ಠಿಯಲ್ಲಿ ಅವರು ಮಾತನಾಡಿದರು. ಫಾರ್ಮ್ ನಂಬರ್ 7 ಕೊಡಲು ಹೋದರೆ ಬೆದರಿಸುವ ಕೆಲಸ ನಡೆದಿದೆ. ಆದರೆ, ನಾವು ಇದಕ್ಕೆ ಅಂಜುವುದಿಲ್ಲ. ಪೊಲೀಸ್ರ ಹಿಡ್ಕೊಂಡು ಸರ್ಕಾರನೇ ಅವ್ರು ನಮ್ ಮೂರು ಮಂದಿ ಮ್ಯಾಲ, ಮತ್ತೆ ಇತರ ಇಪ್ಪತ್ತು ಮಂದಿ ಮ್ಯಾಲೂ ಕೇಸ್ ಹಾಕ್ತಾರೆ. ನೀವು ಫಾರ್ಮ್ ನಂಬರ್ 7 ತುಂಬೋಕೆ ಅವಕಾಶ ಇಲ್ಲ ಎಂದು ಕಸಿದುಕೊಂಡಿದ್ದಾರೆ. ಎಸ್‌ಐಆರ್ ದಾಖಲಿಸಿದ್ದು, ನಾವು ನಿರೀಕ್ಷಣಾ ಜಾಮೀನು ಪಡೆಯಲು ಮುಂದಾದೆವು ಎಂದು ವಿವರಿಸಿದರು.

ಬಿಜೆಪಿಯ ಬಿಎಲ್‌ಎ 2 ಅಂಜುವುದಿಲ್ಲ. ಬೇರೆ ಬೇರೆ ಕ್ಷೇತ್ರದ ಹಲವು ಬೂತ್‌ಗಳಲ್ಲಿ ನಾವು ಹತ್ತತ್ತು ಫಾರ್ಮ್ ಕೊಟ್ಟಿದ್ದೇವೆ ಎಂದು ತಿಳಿಸಿದರು. ಎಸ್‌ಐಆರ್ ಆಗುವ ಆತಂಕದಿಂದ ಇದೀಗ ಬಿಎಲ್‌ಒಗಳು ನಮ್ಮಿಂದ ಅರ್ಜಿ ಪಡೆಯಲು ಸಿದ್ಧರಿಲ್ಲ ಎಂದು ಆರೋಪಿಸಿದರು.

ರಾಜ್ಯದ ಮುಖ್ಯಮಂತ್ರಿಗಳು, ಕಾಂಗ್ರೆಸ್ ರಾಜ್ಯಾಧ್ಯಕ್ಷರು ದಿಲ್ಲಿಯೊಳಗೆ ಹೋರಾಟ ಮಾಡುತ್ತಾರೆ. ನಾವು ಬೋಗಸ್ ಮತದಾರರಿರುವ ಬೂತ್ ನಂಬರ್ 196, 197 ನಲ್ಲಿ ತಕರಾರು ಮಾಡಿದಾಗ ಅರ್ಜಿ ಪಡೆಯುತ್ತಿಲ್ಲ; ಕೆಲವೆಡೆ ಅರ್ಜಿ ಕೊಟ್ಟು ದುಡ್ಡು ತುಂಬಿದರೂ ಮಾಹಿತಿ ಕೊಡುತ್ತಿಲ್ಲ ಎಂದು ದೂರಿದರು.

ಕ್ಷೇತ್ರದಲ್ಲಿ ಒಂದು ಕಡೆ ಒಂದೇ ಮನೆಯಲ್ಲಿ 389 ಮತದಾರರ ಹೆಸರಿದೆ. ಇನ್ನೊಂದು ಮನೆಯಲ್ಲಿ 20, ಮತ್ತೊಂದು ಕಡೆ 15 ನಕಲಿ ಮತದಾರರ ಹೆಸರು ಸೇರಿಸಿದ್ದನ್ನು ಅವರು ವಾರ್ಡ್, ಬೂತ್ ಸಂಖ್ಯೆಗಳ ವಿವರ ನೀಡಿ ಗಮನಕ್ಕೆ ತಂದರು. ಈಗ ಫಾರ್ಮ್ 7 ಪಡೆದ ಬಿಎಲ್‌ಒಗಳಿಗೆ ಎಆರ್‌ಒಗಳು ಅಮಾನತು ಮಾಡುವ ಬೆದರಿಕೆ ಹಾಕುತ್ತಿದ್ದಾರೆ ಎಂದು ತಿಳಿಸಿದರು.

ಮೃತರು, ಸ್ಥಳದಲ್ಲಿ ಇಲ್ಲದವರು, ಎರಡೆರಡು ಕಡೆ ಹೆಸರು ಇದ್ದವರು– ಇಂಥ ಮತದಾರರ ಬಗ್ಗೆ ತನಿಖೆ ನಡೆಸಿ ಅವರ ಹೆಸರನ್ನು ರದ್ದು ಮಾಡಲು ನಾವು ವಿನಂತಿಸಿದ್ದೆವು. ಆದರೆ, ಮುಖ್ಯಮಂತ್ರಿಯವರು ಪೊಲೀಸರಿಗೆ ಎಫ್.ಐಆರ್ ದಾಖಲಿಸಲು ತಿಳಿಸಿದ ಬಳಿಕ ಪೊಲೀಸರು ನಮ್ಮ ಬೆನ್ನು ಹತ್ತಿದ್ದಾರೆ ಎಂದು ಹೇಳಿದರು. ಈಗ ತಕರಾರು ಅರ್ಜಿ ಪಡೆಯುತ್ತಿಲ್ಲ. ನಾಳೆ ಜಿಲ್ಲಾಧಿಕಾರಿಗಳನ್ನು ಭೇಟಿ ಮಾಡಿ ಇದರ ಕುರಿತು ಗಮನಕ್ಕೆ ತರುವುದಾಗಿ ತಿಳಿಸಿದರು. ರಾಜ್ಯ ಪ್ರಧಾನ ಕಾರ್ಯದರ್ಶಿ ಪಿ ರಾಜೀವ್, ರಾಜ್ಯ ವಕ್ತಾರರಾದ ಸುರಭಿ, ಬಿಜೆಪಿ ಮುಖಂಡರಾದ ಕಾಂತಿ ಶೆಟ್ಟಿ ಮತ್ತು ರಾಘವೇಂದ್ರ ಅವರು ಉಪಸ್ಥಿತರಿದ್ದರು.

# 'ಈಗ ಚುನಾವಣೆ ನಡೆದರೂ ಕಾಂಗ್ರೆಸ್‌ನ 25 ಶಾಸಕರು ಬಿಜೆಪಿ ಸೇರುತ್ತಾರೆ'

● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯದಲ್ಲಿ ಯಾವುದೇ ಕ್ಷಣ ವಿಧಾನಸಭೆ ಚುನಾವಣೆ ನಡೆದರೂ ಮುಖ್ಯಮಂತ್ರಿ ಸೇರಿದಂತೆ ಕಾಂಗ್ರೆಸ್‌ನ 25 ಶಾಸಕರು ಪಕ್ಷ ತೊರೆದು ಬಿಜೆಪಿಗೆ ಸೇರುವ ರಾಜಕೀಯ ವಾತಾವರಣ ನಿರ್ಮಾಣವಾಗಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ನಗರದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ದೇಶದಲ್ಲಿ ಅರಾಜಕತೆ ಸೃಷ್ಟಿಸಲು ಪ್ರಯತ್ನಿಸುತ್ತಿದೆ ಎಂದು ಆರೋಪಿಸಿದರು.

ಪ್ರಜಾಪ್ರಭುತ್ವದಲ್ಲಿ ಜನರ ವಿಶ್ವಾಸ ಗಳಿಸುವ ಬದಲು ಗೊಂದಲ ಸೃಷ್ಟಿಸಿ ರಾಜಕೀಯ ಲಾಭ ಪಡೆಯಲು ಮುಂದಾಗಿರುವ ಕಾಂಗ್ರೆಸ್‌ನ ಪ್ರಯತ್ನಗಳನ್ನು ಜನರು ಒಪ್ಪುವುದಿಲ್ಲ. ಪಕ್ಷಕ್ಕೆ ತಾಕತ್ತಿದ್ದರೆ ಜನರ ವಿಶ್ವಾಸ ಗಳಿಸಿ ಅಧಿಕಾರಕ್ಕೆ ಬರಲಿ ಎಂದು ಸವಾಲು ಹಾಕಿದರು.

**ರಾಜಕೀಯ ಕೀಳುಮಟ್ಟಕ್ಕೆ ಇಳಿದಿದೆ:** ರಾಜ್ಯ ರಾಜಕಾರಣ ಹಿಂದೆಂದೂ ಕಾಣದಷ್ಟು ಕೀಳುಮಟ್ಟಕ್ಕೆ ಇಳಿದಿದೆ. ಸ್ಟಿಂಗ್ ಆಪರೇಷನ್ ವಿಚಾರವಾಗಿ ಪ್ರತಿದಿನ ಶಾಸಕರು, ಸಚಿವರು ಹಾಗೂ ಮಾಜಿ ಮುಖ್ಯಮಂತ್ರಿಗಳು ಹೇಳಿಕೆ ನೀಡುತ್ತಿದ್ದಾರೆ. ಅಧಿಕಾರ ಮತ್ತು ಮುಖ್ಯಮಂತ್ರಿ ಸ್ಥಾನಕ್ಕಾಗಿ ಸ್ಟಿಂಗ್ ಆಪರೇಷನ್ ನಡೆಸಲಾಗಿದೆ ಎಂಬ ಚರ್ಚೆಗಳು ನಡೆಯುತ್ತಿವೆ. ಈ ಪ್ರಕರಣದ ಹಿಂದಿರುವ ವಿಚಾರಗಳು ಮುಂದಿನ ದಿನಗಳಲ್ಲಿ ಬಹಿರಂಗವಾಗಲಿವೆ ಎಂದು ಹೇಳಿದರು.

**ಸರ್ಕಾರ ಜವಾಬ್ದಾರಿಯಿಂದ ನುಣುಚಿಕೊಳ್ಳುತ್ತಿದೆ**

ರಾಜ್ಯದಲ್ಲಿ ಬರಗಾಲದಿಂದ ರೈತರು ಸಂಕಷ್ಟದಲ್ಲಿದ್ದರೂ ಘೋಷಿಸಿದ ಪರಿಹಾರ ಸಮರ್ಪಕವಾಗಿ ತಲುಪಿಲ್ಲ. ರೈತರಿಗೆ ಪರಿಹಾರ ನೀಡಲು ಸಾಧ್ಯವಾಗದ ಸರ್ಕಾರ ಸ್ಟಿಂಗ್ ಆಪರೇಷನ್ ವಿಚಾರವನ್ನು ಮುನ್ನೆಲೆಗೆ ತಂದು ತನ್ನ ಜವಾಬ್ದಾರಿಯಿಂದ ನುಣುಚಿಕೊಳ್ಳುತ್ತಿದೆ. ರಾಜ್ಯದ ಆರ್ಥಿಕ ಸ್ಥಿತಿ ಹದಗೆಟ್ಟಿದ್ದು, ಇದನ್ನು ಒಪ್ಪಿಕೊಳ್ಳುವ ಧೈರ್ಯ ಸರ್ಕಾರಕ್ಕಿಲ್ಲ. ಕೇಂದ್ರದ ಮೇಲೆ ಆರೋಪ ಮಾಡುವುದು ಸರ್ಕಾರದ ಕೆಲಸವಾಗಿದೆ ಎಂದು ಟೀಕಿಸಿದರು.



ತೈಲ ಕಂಪನಿಗಳಿಗೆ ಬಾಕಿ ಪಾವತಿಸದ ಕಾರಣ ಸಾರಿಗೆ ಬಸ್‌ಗಳು ಡಿಪೋಗಳಲ್ಲೇ ನಿಲ್ಲುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಆರೋಪಿಸಿದ ಅವರು, ಹಣಕಾಸಿನ ಸಂಕಷ್ಟದ ನಡುವೆಯೂ ತಾಲೂಕುಗಳಲ್ಲಿ ರಿಂಗ್ ರಸ್ತೆ ನಿರ್ಮಾಣಕ್ಕೆ ಮುಂದಾಗಿರುವ ಸರ್ಕಾರದ ಉದ್ದೇಶದ ಬಗ್ಗೆಯೂ ಪ್ರಶ್ನೆ ಎತ್ತಿದರು.

**ಕಾಂಗ್ರೆಸ್ ವಿರುದ್ಧ ವಾಗ್ದಾಳಿ:** ಸುಪ್ರೀಂ ಕೋರ್ಟ್ ಮುಖ್ಯ ನ್ಯಾಯಮೂರ್ತಿಗಳನ್ನು ಭೇಟಿಯಾಗಲು ಕಾಂಗ್ರೆಸ್ ನೇತೃತ್ವದ 'ಇಂಡಿಯಾ' ಮೈತ್ರಿಕೂಟ ಮನವಿ ಮಾಡಿರುವುದನ್ನೂ ವಿಜಯೇಂದ್ರ ಟೀಕಿಸಿದರು. ಎಸ್‌ಐಆರ್ ವಿಚಾರ ನ್ಯಾಯಾಲಯದಲ್ಲಿ ವಿಚಾರಣೆಯಲ್ಲಿರುವಾಗ ಇಂತಹ ಪ್ರಯತ್ನಗಳು ಸೂಕ್ತವಲ್ಲ ಎಂದರು. ದೇಶದಲ್ಲಿ ಅರಾಜಕತೆ ಸೃಷ್ಟಿಸುವ ಪ್ರಯತ್ನಗಳಿಗೆ ಜನರು ಬೆಂಬಲ ನೀಡುವುದಿಲ್ಲ. ಮುಂದಿನ ಚುನಾವಣೆಯಲ್ಲಿ ಕಾಂಗ್ರೆಸ್‌ಗೆ ಹಿನ್ನಡೆಯಾಗಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

# ಲೈಂಗಿಕ ಕಿರುಕುಳ ಆರೋಪ: ಸಂಸದ ರಾಜೀನಾಮೆಗೆ ಭಾರತಿ ಶೆಟ್ಟಿ ಆಗ್ರಹ

● ವಿಕ್ರಮ ವಾಹಿನಿ । ಬೆಂಗಳೂರು

ವಿದ್ಯಾರ್ಥಿನಿಯರಿಗೆ ಲೈಂಗಿಕ ಕಿರುಕುಳ ನೀಡಿದ ಆರೋಪ ಎದುರಿಸುತ್ತಿರುವ ಸಂಸದ ಪ್ರೊ. ಅಂಗೋಮ್ಚಾ ಬಿಮೋಲ್ ಅಕೋಯಿಜಮ್ ರಾಜೀನಾಮೆ ನೀಡಬೇಕು ಎಂದು ವಿಧಾನ ಪರಿಷತ್ ಸದಸ್ಯೆ ಭಾರತಿ ಶೆಟ್ಟಿ ಆಗ್ರಹಿಸಿದರು.

ಬಿಜೆಪಿ ಮಹಿಳಾ ಮೋರ್ಚಾ ವತಿಯಿಂದ ಕಾಂಗ್ರೆಸ್ ಕಚೇರಿಗೆ ಮುತ್ತಿಗೆ ಹಾಕಿ ನಡೆಸಿದ ಪ್ರತಿಭಟನೆ ವೇಳೆ ಮಾತನಾಡಿದ ಅವರು, ಜೆಎನ್‌ಯು ಸಮಿತಿಯು ಸಂಸದರನ್ನು ಅಮಾನತುಗೊಳಿಸಿರುವುದನ್ನು ಉಲ್ಲೇಖಿಸಿ, ಪ್ರಕರಣದಲ್ಲಿ ತಪ್ಪಿತಸ್ಥರಿಗೆ ಶಿಕ್ಷೆಯಾಗಬೇಕು ಎಂದು ಒತ್ತಾಯಿಸಿದರು. ಸಂಸದರ




ವಿರುದ್ಧದ ಆರೋಪಗಳ ಕುರಿತು ಕಾಂಗ್ರೆಸ್ ಬೆಂಬಲ ನೀಡುತ್ತಿರುವುದು ಖಂಡನೀಯ ಎಂದು ಟೀಕಿಸಿದರು.

ಮಹಿಳೆಯರಿಗೆ ಅನ್ಯಾಯವಾದಾಗ ಅವರ ಪರವಾಗಿ ನಿಲ್ಲಬೇಕಾದ ಕಾಂಗ್ರೆಸ್ ನಾಯಕರು ಆರೋಪಿತ ಸಂಸದರ ಬೆಂಬಲಕ್ಕೆ ನಿಂತಿದ್ದಾರೆ ಎಂದು ಆರೋಪಿಸಿದ ಅವರು, ಪ್ರಿಯಾಂಕಾ ಗಾಂಧಿ ಈ ವಿಚಾರದಲ್ಲಿ ತಮ್ಮ ನಿಲುವು ಸ್ಪಷ್ಟಪಡಿಸಬೇಕು ಎಂದು ಆಗ್ರಹಿಸಿದರು.

ಮಹಿಳೆಯರ ಮೇಲಿನ ದೌರ್ಜನ್ಯವನ್ನು ಬಿಜೆಪಿ ಬಲವಾಗಿ ಖಂಡಿಸುತ್ತದೆ. ಸಂತ್ರಸ್ತರಿಗೆ ನ್ಯಾಯ ದೊರಕಿಸಲು ಪಕ್ಷ ಹೋರಾಟ ನಡೆಸಲಿದೆ. ಆರೋಪ ಎದುರಿಸುತ್ತಿರುವ ಸಂಸದರಿಂದ ರಾಜೀನಾಮೆ ಪಡೆಯಬೇಕು ಎಂದು ಭಾರತಿ ಶೆಟ್ಟಿ ಒತ್ತಾಯಿಸಿದರು.





ಕೆಂಗೇರಿಯ ಗಣೇಶ ಮೈದಾನದಲ್ಲಿ ನಡೆದ 'ಯಶವಂತಪುರ ದಸರಾ' ಮಹೋತ್ಸವದ ಮೊದಲ ದಿನದ ರೈತ ದಸರಾ ಕಾರ್ಯಕ್ರಮಕ್ಕೆ ಶಾಸಕ ಎಸ್.ಟಿ. ಸೋಮಶೇಖರ್ ಅವರ ಉಪಸ್ಥಿತಿಯಲ್ಲಿ ವಿವಿಧ ಕ್ಷೇತ್ರಗಳ ಸಾಧಕರು ಚಾಲನೆ ನೀಡಿದರು. ಆಟೋ ಚಾಲಕರು, ಪೌರ ಕಾರ್ಮಿಕರು, ಪ್ರತಿಭಾವಂತ ವಿದ್ಯಾರ್ಥಿಗಳು, ಕ್ರೀಡಾಪಟುಗಳು ಹಾಗೂ ವಿವಿಧ ಸ್ಪರ್ಧೆಗಳ ವಿಜೇತರನ್ನು ಗೌರವಿಸುವ ಮೂಲಕ ರೈತರ ಶ್ರಮ ಮತ್ತು ಕೃಷಿ ಪರಂಪರೆಗೆ ಮನ್ನಣೆ ಸಲ್ಲಿಸಲಾಯಿತು.

# ಕೆಪಿಎಸ್‌ಸಿ ಹಗರಣ: ಬಸವರಾಜ್ ಕನ್ನಾಳೆಗೆ ಮಧ್ಯಂತರ ಜಾಮೀನು

● ವಿಕ್ರಮ ವಾಹಿನಿ । ಬೆಂಗಳೂರು

ಕೆಪಿಎಸ್‌ಸಿಯ ಪಶುವೈದ್ಯಾಧಿಕಾರಿಗಳ ನೇಮಕಾತಿ ಅಕ್ರಮ ಪ್ರಕರಣದ ಪ್ರಮುಖ ಆರೋಪಿ ಬಸವರಾಜ್ ಕನ್ನಾಳೆಗೆ ಮಗಳ ನಾಮಕರಣ ಕಾರ್ಯಕ್ರಮದಲ್ಲಿ ಭಾಗವಹಿಸಲು ಹೈಕೋರ್ಟ್ ಅ.15ರಿಂದ 20ರವರೆಗೆ ಮಧ್ಯಂತರ ಜಾಮೀನು ಮಂಜೂರು ಮಾಡಿದೆ. ಈ ಅವಧಿಯಲ್ಲಿ ಸರ್ಕಾರವೇ ಎಸ್ಕಾರ್ಟ್ ವ್ಯವಸ್ಥೆ ಮಾಡಿ, ಆರೋಪಿಯನ್ನು ಊರಿಗೆ ಕರೆದೊಯ್ದು ವಾಪಸ್ ಕರೆತರಬೇಕು ಹಾಗೂ ಅವರು ಮೊಬೈಲ್ ಫೋನ್ ಬಳಸುವಂತಿಲ್ಲ ಎಂದು ನ್ಯಾಯಾಲಯ ಷರತ್ತು ವಿಧಿಸಿದೆ.

ನ್ಯಾಯಮೂರ್ತಿ ಎಸ್. ವಿಶ್ವಜಿತ್ ಶೆಟ್ಟಿ ಅವರ ಏಕಸದಸ್ಯ ಪೀಠ ಕನ್ನಾಳೆ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿ ಈ ಆದೇಶ ನೀಡಿದೆ. ಆರೋಪಿ ನಾಪತ್ತೆಯಾಗುವ ಸಾಧ್ಯತೆಯಿದೆ ಎಂಬ ತನಿಖಾ ಸಂಸ್ಥೆಯ ಆತಂಕವನ್ನು ಪರಿಗಣಿಸಿದ ನ್ಯಾಯಪೀಠ, ಸರ್ಕಾರದ ವೆಚ್ಚದಲ್ಲಿ ಎಸ್ಕಾರ್ಟ್ ವ್ಯವಸ್ಥೆ ಮಾಡುವ ಮೂಲಕ ಆತನನ್ನು ಕರೆದೊಯ್ದು ವಾಪಸ್ ಕರೆತರಲು ಸಾಧ್ಯವಿರುವಾಗ ಅದಕ್ಕೆ ಅಡ್ಡಿಯೇನು ಎಂದು ಪ್ರಶ್ನಿಸಿತು.

ಕನ್ನಾಳೆ ಪರ ವಕೀಲರು, ಅವರ ಪತ್ನಿ ಹೆಣ್ಣು ಮಗುವಿಗೆ ಜನ್ಮ ನೀಡಿದ್ದು, ಮಗುವಿನ 12ನೇ ದಿನದ ನಾಮಕರಣ ಕಾರ್ಯಕ್ರಮದಲ್ಲಿ ಭಾಗವಹಿಸಲು ಮಾನವೀಯ ನೆಲೆಯಲ್ಲಿ ಒಂದು ವಾರದ ಮಧ್ಯಂತರ ಜಾಮೀನು ನೀಡುವಂತೆ ಮನವಿ ಮಾಡಿದ್ದರು. ಆದರೆ, ರಾಜ್ಯ ಸರ್ಕಾರದ ಪರ ವಕೀಲರು, ಅಭ್ಯರ್ಥಿಗಳಿಂದ ಹಣ ಸಂಗ್ರಹಿಸಿ ಕೋಟ್ಯಂತರ ರೂಪಾಯಿ ವಹಿವಾಟು ನಡೆಸಿರುವ ಆರೋಪವಿದ್ದು, ತನಿಖೆಯ ಹಿತದೃಷ್ಟಿಯಿಂದ ಆರೋಪಿಯನ್ನು ಸ್ವತಂತ್ರವಾಗಿ ಊರಿಗೆ ತೆರಳಲು ಬಿಡಬಾರದು ಎಂದು ಆಕ್ಷೇಪಿಸಿದ್ದರು.

ಪ್ರಕರಣದ ಹಿನ್ನೆಲೆ: ಪಶುವೈದ್ಯಾಧಿಕಾರಿಗಳ ನೇಮಕಾತಿ ಅಕ್ರಮದಲ್ಲಿ ಅಭ್ಯರ್ಥಿಗಳಿಂದ ಹಣ ಪಡೆದು ನೇಮಕಾತಿ ಮಾಡಿಸಿರುವ ಆರೋಪ ಕನ್ನಾಳೆ ಮೇಲಿದೆ. ಪ್ರಕರಣದ ತನಿಖೆ ನಡೆಸುತ್ತಿರುವ ಸಿಐಡಿ ಅಧಿಕಾರಿಗಳು ಅವರನ್ನು ನವದೆಹಲಿಯಲ್ಲಿ ವಶಕ್ಕೆ ಪಡೆದಿದ್ದರು. ಮಧ್ಯಂತರ ಜಾಮೀನು ಕೋರಿ ಅವರು ವಿಚಾರಣಾ ನ್ಯಾಯಾಲಯಕ್ಕೆ ಸಲ್ಲಿಸಿದ್ದ ಅರ್ಜಿ ತಿರಸ್ಕೃತಗೊಂಡ ಹಿನ್ನೆಲೆಯಲ್ಲಿ ಹೈಕೋರ್ಟ್ ಮೊರೆ ಹೋಗಿದ್ದರು.

ಎಸ್ಕಾರ್ಟ್ ಭದ್ರತೆಯ ಜವಾಬ್ದಾರಿಯನ್ನು ಸರ್ಕಾರವೇ ನಿರ್ವಹಿಸಲಿದ್ದು, ಮೊಬೈಲ್ ಬಳಕೆಯ ಮೇಲಿನ ನಿರ್ಬಂಧದ ಮೂಲಕ ಆರೋಪಿಯ ಚಲನವಲನದ ಮೇಲೆ ನಿಗಾ ಇರಿಸುವಂತೆ ನ್ಯಾಯಾಲಯ ಸೂಚಿಸಿದೆ.

www.VIKRAMAVAHINI.com
ಕನ್ನಡ ದಿನಪತ್ರಿಕೆ
PRGI NO: KARKAN/2018/78481
ವಿಕ್ರಮ ವಾಹಿನಿ

# ನ್ಯಾಯಾಧೀಶರನ್ನು ಭೇಟಿ ಮಾಡದೇ ಬೇರೆ ದಾರಿ ಇಲ್ಲ: ಡಿಕೆಶಿ

● ವಿಕ್ರಮ ವಾಹಿನಿ | ಚೆನ್ನೈ

"ಮುಖ್ಯ ನ್ಯಾಯಮೂರ್ತಿಗಳು ದೇಶದ ಜನರ ಧ್ವನಿಯನ್ನು ಆಲಿಸಬೇಕು. ಚುನಾವಣಾ ಆಯೋಗ ಭೇಟಿಯಾಗಿ ಸ್ಪಂದಿಸದೇ ಇದ್ದಾಗ, ಪ್ರಧಾನಮಂತ್ರಿಗಳು ಕರೆದು ಸಮಸ್ಯೆ ಏನು ಎಂದು ಕೇಳಬೇಕಿತ್ತು. ಇಂತಹ ಪರಿಸ್ಥಿತಿಯಲ್ಲಿ ಮುಖ್ಯ ನ್ಯಾಯಾಧೀಶರನ್ನು ಭೇಟಿ ಮಾಡದೇ ಬೇರೆ ದಾರಿ ಇಲ್ಲ" ಎಂದು ಸಿಎಂ ಡಿ ಕೆ ಶಿವಕುಮಾರ್ ಅವರು ಅಭಿಪ್ರಾಯಪಟ್ಟರು.

ಚೆನ್ನೈನಲ್ಲಿ ಸುದ್ದಿ ಸಂಸ್ಥೆಯ ಪ್ರಶ್ನೆಗೆ ಶಿವಕುಮಾರ್ ಅವರು ಸೋಮವಾರ ಪ್ರತಿಕ್ರಿಯೆ ನೀಡಿದರು.

ಇಂಡಿಯಾ ಮೈತ್ರಿಕೂಟ ಭೇಟಿಗೆ ಮುಖ್ಯನ್ಯಾಯ ಮೂರ್ತಿಗಳು ಅವಕಾಶ ನಿರಾಕರಿಸಿರುವುದರ ಬಗ್ಗೆ ಕೇಳಿದಾಗ, "ಸಾರ್ವಜನಿಕ ಜೀವನದಲ್ಲಿ ನಾವು ಎಲ್ಲಾ ಅವಕಾಶಗಳನ್ನು ಬಳಸಿಕೊಂಡು ದೇಶದ ಪ್ರಜಾಪ್ರಭುತ್ವ ಹಾಗೂ ದೇಶದ ಎಲ್ಲಾ ನಾಗರಿಕರ ಮತದಾನದ ಹಕ್ಕು ರಕ್ಷಣೆಗೆ ಪ್ರಯತ್ನಿಸುತ್ತೇವೆ" ಎಂದರು.

"ಮತದಾನದ ಹಕ್ಕು ನಮ್ಮ ಬದುಕಿನ ಹಕ್ಕಾಗಿದೆ. ಅದೇ ನಮ್ಮ ಬದುಕು. ವಿರೋಧ ಪಕ್ಷದ ನಾಯಕರು ದೇಶದ ಜನರ ಧ್ವನಿಯಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಪ್ರಜಾಪ್ರಭುತ್ವದಲ್ಲಿ ಏನು ಬೇಕಾದರೂ ಆಗಬಹುದು" ಎಂದು ತಿಳಿಸಿದರು.

# ಕರ್ನಾಟಕದ ನೂತನ ರಾಜ್ಯಪಾಲರಾಗಿ ಡಾ. ಸುಧಾ ಯಾದವ್ ನೇಮಕ

● ವಿಕ್ರಮ ವಾಹಿನಿ | ಬೆಂಗಳೂರು

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಕರ್ನಾಟಕ ಸೇರಿದಂತೆ ಆರು ರಾಜ್ಯಗಳಿಗೆ ನೂತನ ರಾಜ್ಯಪಾಲರನ್ನು ನೇಮಕ ಮಾಡಿ ಆದೇಶ ಹೊರಡಿಸಿದ್ದಾರೆ. ಮಾಜಿ ಸಂಸದೆ ಡಾ. ಸುಧಾ ಯಾದವ್ ಅವರು ಕರ್ನಾಟಕದ ನೂತನ ರಾಜ್ಯಪಾಲರಾಗಿ ನೇಮಕಗೊಂಡಿದ್ದು, ಹಾಲಿ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರ ಉತ್ತರಾಧಿಕಾರಿಯಾಗಲಿದ್ದಾರೆ. ಸುಧಾ ಯಾದವ್ ಕರ್ನಾಟಕದ ಎರಡನೇ ಮಹಿಳಾ ರಾಜ್ಯಪಾಲರಾಗಲಿದ್ದಾರೆ. ಈ ಹಿಂದೆ ವಿ.ಎಸ್. ರಮಾದೇವಿ ಅವರು ರಾಜ್ಯದ ಮೊದಲ ಮಹಿಳಾ ರಾಜ್ಯಪಾಲರಾಗಿದ್ದರು.



ಸಿಕ್ಕಿಂನ ರಾಜ್ಯಪಾಲರಾಗಿದ್ದ ಓಂ ಪ್ರಕಾಶ್ ಮಾಥುರ್ ಅವರನ್ನು ಕೇರಳಕ್ಕೆ, ಕೇರಳದ ರಾಜ್ಯಪಾಲ ರಾಜೇಂದ್ರ ವಿಶ್ವನಾಥ್ ಅರ್ಲೇಕರ್ ಅವರನ್ನು ತಮಿಳುನಾಡಿಗೆ ವರ್ಗಾಯಿಸಲಾಗಿದೆ. ಬ್ರಜ್ ಮೋಹನ್ ರಾಮ್ ಅವರನ್ನು ಒಡಿಶಾ ರಾಜ್ಯಪಾಲರನ್ನಾಗಿ, ಡಾ. ಧಲ್ ಸಿಂಗ್ ಬಿಸೇನ್ ಅವರನ್ನು ಉತ್ತರಾಖಂಡಕ್ಕೆ ಹಾಗೂ ದುಷ್ಯಂತ್ ಗೌತಮ್ ಅವರನ್ನು ಸಿಕ್ಕಿಂ ರಾಜ್ಯಪಾಲರನ್ನಾಗಿ ನೇಮಿಸಲಾಗಿದೆ. ಹೊಸ ರಾಜ್ಯಪಾಲರು ಅಧಿಕಾರ ವಹಿಸಿಕೊಳ್ಳುವ ದಿನದಿಂದ ನೇಮಕಾತಿಗಳು ಜಾರಿಗೆ ಬರಲಿವೆ.

# ಬೆಂಗಳೂರಿನಲ್ಲಿ 20ರಿಂದ ಮಹಿಳಾ ಬಾಸ್ಕೆಟ್‌ಬಾಲ್ ಲೀಗ್ ಏಷ್ಯಾ

● ವಿಕ್ರಮ ವಾಹಿನಿ | ಬೆಂಗಳೂರು

ಏಷ್ಯಾದ ಪ್ರಮುಖ ಮಹಿಳಾ ಬಾಸ್ಕೆಟ್‌ಬಾಲ್ ಕ್ಲಬ್‌ಗಳ ಸ್ಪರ್ಧೆಯಾದ ಎಫ್‌ಐಬಿಎ ಮಹಿಳಾ ಬಾಸ್ಕೆಟ್‌ಬಾಲ್ ಲೀಗ್ ಏಷ್ಯಾ–2026ಕ್ಕೆ ಬೆಂಗಳೂರು ಆತಿಥ್ಯ ವಹಿಸಲಿದೆ. ಅಕ್ಟೋಬರ್ 20ರಿಂದ 25ರವರೆಗೆ ನಡೆಯಲಿರುವ ಈ ಪಂದ್ಯಾವಳಿಯಲ್ಲಿ ಆರು ತಂಡಗಳು ಭೂಖಂಡದ ಪ್ರಶಸ್ತಿಗಾಗಿ ಸೆಣಸಲಿವೆ.

ಭಾರತದ ಬಾಸ್ಕೆಟ್‌ಬಾಲ್ ಫೆಡರೇಷನ್ ಆಶ್ರಯದಲ್ಲಿ ಕರ್ನಾಟಕ ರಾಜ್ಯ ಬಾಸ್ಕೆಟ್‌ಬಾಲ್ ಸಂಸ್ಥೆ ಆಯೋಜಿಸುತ್ತಿದ್ದು, ರಾಜ್ಯದ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಬೆಂಬಲವಿದೆ. ಭಾರತದ ರಾಷ್ಟ್ರೀಯ ಚಾಂಪಿಯನ್ ಇಂಡಿಯನ್ ರೈಲ್ವೇಸ್ ಸೇರಿದಂತೆ ಜಪಾನ್‌ನ ಡೆನ್ಸೊ ಐರಿಸ್, ದಕ್ಷಿಣ ಕೊರಿಯಾದ ಚಿಯೊಂಗ್ಜು ಕೆಬಿ ಸ್ಟಾರ್ಸ್, ಚೀನಾದ ಸಿಚುವಾನ್ ಯುವಾಂಡಾ ಮೈಲೆ, ಫಿಲಿಪೈನ್ಸ್‌ನ ಅಕಾರಿ ಸ್ಪಾರ್ಕ್ಸ್ ಹಾಗೂ ಚೈನೀಸ್ ತೈಪೆಯ ಕ್ಯಾಥೆ ಲೈಫ್ ಟೈಗರ್ಸ್ ತಂಡಗಳು ಪಾಲ್ಗೊಳ್ಳಲಿವೆ.




ಪಂದ್ಯಾವಳಿಯ ಕುರಿತು ಮಾತನಾಡಿದ ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ, ಅಂತರರಾಷ್ಟ್ರೀಯ ಮಟ್ಟದ ಸ್ಪರ್ಧೆಗೆ ಆತಿಥ್ಯ ವಹಿಸುತ್ತಿರುವುದು ಕರ್ನಾಟಕಕ್ಕೆ ಹೆಮ್ಮೆಯ ಸಂಗತಿ. ಬೆಂಗಳೂರು ಪ್ರಮುಖ ಕ್ರೀಡಾ ತಾಣವಾಗಿ ಬೆಳೆಯುತ್ತಿದ್ದು, ಈ ಪಂದ್ಯಾವಳಿಯಿಂದ ಜಾಗತಿಕ ಕ್ರೀಡಾ ನಕ್ಷೆಯಲ್ಲಿ ನಗರದ ಸ್ಥಾನ ಮತ್ತಷ್ಟು ಬಲಗೊಳ್ಳಲಿದೆ ಎಂದರು.

ಎಫ್‌ಐಬಿಎ ಏಷ್ಯಾ ಅಧ್ಯಕ್ಷ ಹಾಗೂ ಕರ್ನಾಟಕ ರಾಜ್ಯ ಬಾಸ್ಕೆಟ್‌ಬಾಲ್ ಸಂಸ್ಥೆಯ ಕಾರ್ಯದರ್ಶಿ ಡಾ. ಕೆ. ಗೋವಿಂದರಾಜ್ ಮಾತನಾಡಿ, ಏಷ್ಯಾದ ಅತ್ಯುತ್ತಮ ಮಹಿಳಾ ಕ್ಲಬ್ ತಂಡಗಳನ್ನು ಒಂದೇ ವೇದಿಕೆಯಲ್ಲಿ ಒಗ್ಗೂಡಿಸುವ ಈ ಪಂದ್ಯಾವಳಿ ಮಹಿಳಾ ಬಾಸ್ಕೆಟ್‌ಬಾಲ್ ಬೆಳವಣಿಗೆಗೆ ಮಹತ್ವದ ವೇದಿಕೆಯಾಗಲಿದೆ. ಯುವ ಆಟಗಾರ್ತಿಯರಿಗೆ ಅಂತರರಾಷ್ಟ್ರೀಯ ಪ್ರತಿಭೆಗಳಿಂದ ಸ್ಫೂರ್ತಿ ಪಡೆಯಲು ಇದು ಉತ್ತಮ ಅವಕಾಶ ಎಂದು ತಿಳಿಸಿದರು.

# ದಸರಾ ವೇಳೆ ಪರೀಕ್ಷೆ ನಡೆಸುವ ಹಠವೇಕೆ?

● ವಿಕ್ರಮ ವಾಹಿನಿ | ಮಂಗಳೂರು

ದಸರಾ ಹಬ್ಬದ ಸಂದರ್ಭದಲ್ಲಿ ಪರೀಕ್ಷೆ ನಡೆಸುವ ಮೂಲಕ ವಿದ್ಯಾರ್ಥಿಗಳ ಭಾವನೆಗಳಿಗೆ ಧಕ್ಕೆ ತರಬಾರದು. ಮಂಗಳೂರಿನ ಸೈಂಟ್ ಆಗ್ನೆಸ್ ಕಾಲೇಜಿನ ಆಡಳಿತ ಮಂಡಳಿ ಪರೀಕ್ಷೆಗಳನ್ನು ಮುಂದೂಡಬೇಕು ಎಂದು ಮಾಜಿ ಸಚಿವ ವಿ. ಸುನೀಲ್ ಕುಮಾರ್ ಆಗ್ರಹಿಸಿದ್ದಾರೆ.



ಕಾಲೇಜಿನಲ್ಲಿ ಅಕ್ಟೋಬರ್ 12ರಿಂದ 28ರವರೆಗೆ ಸೆಮಿಸ್ಟರ್ ಪರೀಕ್ಷೆಗಳನ್ನು ನಿಗದಿಪಡಿಸಿರುವುದನ್ನು ವಿರೋಧಿಸಿ ನೂರಾರು ವಿದ್ಯಾರ್ಥಿಗಳು ಪ್ರತಿಭಟನೆ ನಡೆಸಿರುವ ಹಿನ್ನೆಲೆಯಲ್ಲಿ ಅವರು ಪ್ರತಿಕ್ರಿಯಿಸಿದ್ದಾರೆ. ಕರಾವಳಿಯ ಪ್ರಮುಖ ಸಾಂಸ್ಕೃತಿಕ ಉತ್ಸವವಾದ ಮಂಗಳೂರು ದಸರಾ ಸಂದರ್ಭದಲ್ಲಿ ವಿದ್ಯಾರ್ಥಿಗಳು ಕುಟುಂಬದೊಂದಿಗೆ ಹಬ್ಬ ಆಚರಿಸಲು ಹಾಗೂ ವಿವಿಧ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳಲು ಅವಕಾಶ ನೀಡಬೇಕು ಎಂದಿದ್ದಾರೆ.

ಇತರ ಶಿಕ್ಷಣ ಸಂಸ್ಥೆಗಳಲ್ಲಿ ಪರೀಕ್ಷೆಗಳನ್ನು ಮುಂದೂಡಲಾಗಿದೆ ಎಂಬ ವಿದ್ಯಾರ್ಥಿಗಳ ಹೇಳಿಕೆಯನ್ನು ಉಲ್ಲೇಖಿಸಿದ ಅವರು, ಸೈಂಟ್ ಆಗ್ನೆಸ್ ಕಾಲೇಜು ಆಡಳಿತ ಮಂಡಳಿ ತನ್ನ ನಿರ್ಧಾರವನ್ನು ಮರುಪರಿಶೀಲಿಸಬೇಕು. ವಿದ್ಯಾರ್ಥಿಗಳ ಮನವಿಗೆ ಸ್ಪಂದಿಸದೆ ನಿಗದಿತ ವೇಳಾಪಟ್ಟಿಯಂತೆಯೇ ಪರೀಕ್ಷೆ ನಡೆಸಲು ಹಠ ಹಿಡಿಯುವುದು ಸರಿಯಲ್ಲ ಎಂದು ಟೀಕಿಸಿದ್ದಾರೆ.

ಅಲ್ಪಸಂಖ್ಯಾತ ವಿದ್ಯಾರ್ಥಿಗಳ ವಿಚಾರದಲ್ಲಿ ವಿಶೇಷ ಆದ್ಯತೆ ನೀಡುವ ಸರ್ಕಾರ, ಈಗ ಎಲ್ಲ ವಿದ್ಯಾರ್ಥಿಗಳ ಭಾವನೆಗಳಿಗೂ ಬೆಲೆ ನೀಡಬೇಕು ಎಂದು ಹೇಳಿರುವ ಅವರು, ಸಂಬಂಧಪಟ್ಟ ಅಧಿಕಾರಿಗಳು ಕೂಡಲೇ ಮಧ್ಯಪ್ರವೇಶಿಸಿ ಪರೀಕ್ಷೆ ಮುಂದೂಡುವಂತೆ ಕ್ರಮ ಕೈಗೊಳ್ಳಬೇಕು. ವಿದ್ಯಾರ್ಥಿಗಳ ಭವಿಷ್ಯಕ್ಕೆ ಧಕ್ಕೆಯಾಗದಂತೆ ಅವರ ನ್ಯಾಯಯುತ ಬೇಡಿಕೆಯನ್ನು ಪರಿಗಣಿಸಿ ದಸರಾ ಆಚರಣೆಗೆ ಅವಕಾಶ ಕಲ್ಪಿಸಬೇಕು ಎಂದು ಒತ್ತಾಯಿಸಿದ್ದಾರೆ.

# ಸ್ಟಿಂಗ್ ವಿಡಿಯೋ ಪ್ರಸಾರಕ್ಕೆ ತಡೆ ಕೋರಿ ದಾವೆ: ಇಂದು ವಿಚಾರಣೆ

● ವಿಕ್ರಮ ವಾಹಿನಿ | ಬೆಂಗಳೂರು

**ಸ್ಟಿಂಗ್ ಆಪರೇಷನ್ ವಿಡಿಯೋ ಪ್ರಸಾರಕ್ಕೆ ತಡೆಯಾಜ್ಞೆ ಕೋರಿ ಸಿದ್ದರಾಮಯ್ಯ ಎಂಬ ಹೆಸರಿನ ವ್ಯಕ್ತಿಯಿಂದ ಬೆಂಗಳೂರಿನ ನ್ಯಾಯಾಲಯದಲ್ಲಿ ಅಸಲು ದಾವೆ ದಾಖಲಾಗಿದ್ದು, 42 ಮಾಧ್ಯಮ ಸಂಸ್ಥೆಗಳನ್ನು ಪ್ರತಿವಾದಿಗಳನ್ನಾಗಿ ಮಾಡಲಾಗಿದೆ. ಅರ್ಜಿಯ ವಿಚಾರಣೆ ಅ.13ರಂದು ನಡೆಯಲಿದೆ.**

ರಾಜ್ಯ ರಾಜಕಾರಣದಲ್ಲಿ ತೀವ್ರ ಚರ್ಚೆಗೆ ಕಾರಣವಾಗಿರುವ ಸ್ಟಿಂಗ್ ಆಪರೇಷನ್ ಪ್ರಕರಣಕ್ಕೆ ಸಂಬಂಧಿಸಿದಂತೆ, ವಿಡಿಯೋ ಪ್ರಸಾರಕ್ಕೆ ತಡೆಯಾಜ್ಞೆ ನೀಡುವಂತೆ ಕೋರಿ ಸಿದ್ದರಾಮಯ್ಯ ಎಂಬ ಹೆಸರಿನ ವ್ಯಕ್ತಿಯೊಬ್ಬರು ಬೆಂಗಳೂರಿನ ಸಿವಿಲ್ ನ್ಯಾಯಾಲಯದಲ್ಲಿ ಅಸಲು ದಾವೆ ದಾಖಲಿಸಿದ್ದಾರೆ. ಈ ದಾವೆಯ ವಿಚಾರಣೆ ಅಕ್ಟೋಬರ್ 13ರಂದು ನಡೆಯಲಿದೆ.

ಸಿಸಿಎಚ್–18ರಲ್ಲಿ ಅಸಲು ದಾವೆ ಸಂಖ್ಯೆ 7655/2026ರ ಅಡಿಯಲ್ಲಿ ವಕೀಲ ಪ್ರವೀಣ್ ಕಾಮತ್ ಎಂ.ಆರ್. ಮೂಲಕ ದಾವೆ ಸಲ್ಲಿಸಲಾಗಿದೆ. ಫ್ರೀಡಂ ಟಿವಿ ಮತ್ತು 'ಕರ್ನಾಟಕ ಹನಿಟ್ರ್ಯಾಪ್' ಹೆಸರಿನ ಯೂಟ್ಯೂಬ್ ಲಿಂಕ್ ಸೇರಿದಂತೆ ಒಟ್ಟು 42 ಮಾಧ್ಯಮ ಸಂಸ್ಥೆಗಳನ್ನು ಪ್ರತಿವಾದಿಗಳನ್ನಾಗಿ ಮಾಡಲಾಗಿದೆ. ಪ್ರಜಾವಾಣಿ, ವಿಶ್ವವಾಣಿ ಸೇರಿದಂತೆ ಹಲವು ಮಾಧ್ಯಮಗಳ ಹೆಸರನ್ನೂ ದಾವೆಯಲ್ಲಿ ಉಲ್ಲೇಖಿಸಲಾಗಿದೆ ಎಂದು ತಿಳಿದುಬಂದಿದೆ.

ಸ್ಟಿಂಗ್ ಆಪರೇಷನ್‌ಗೆ ಸಂಬಂಧಿಸಿದ ವಿಡಿಯೋ ಪ್ರಸಾರವಾಗದಂತೆ ತಡೆಯಾಜ್ಞೆ ನೀಡಬೇಕೆಂಬುದು ದಾವೆಯ ಪ್ರಮುಖ ಮನವಿಯಾಗಿದೆ. ಅರ್ಜಿಯ ವಿಚಾರಣೆಯ ಬಳಿಕ ನ್ಯಾಯಾಲಯ ಯಾವ ಕ್ರಮ ಕೈಗೊಳ್ಳಲಿದೆ ಎಂಬುದು ಕುತೂಹಲ ಮೂಡಿಸಿದೆ.

**ಸ್ಟಿಂಗ್ ವಿಚಾರವಾಗಿ ಸಿದ್ದರಾಮಯ್ಯ ಮೌನ ಮುರಿದಿದ್ದರು:** ಕಳೆದ ಒಂದು ವಾರದಿಂದ ಆಡಳಿತಾರೂಢ ಕಾಂಗ್ರೆಸ್‌ನಲ್ಲಿ ಸ್ಟಿಂಗ್ ಆಪರೇಷನ್ ವಿಚಾರ ಚರ್ಚೆಯಲ್ಲಿದ್ದರೂ, ಈ ಕುರಿತು ಮೌನವಾಗಿದ್ದ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇತ್ತೀಚೆಗೆ ಪ್ರತಿಕ್ರಿಯಿಸಿದ್ದರು. "ಸ್ಟಿಂಗ್ ಮಾಡುತ್ತಿದ್ದಾರೆ ಎಂಬುದು ಗೊತ್ತಿದೆ. ಆದರೆ, ಯಾರು ಮಾಡುತ್ತಿದ್ದಾರೆ ಎಂಬುದು ಗೊತ್ತಾಗಬೇಕು" ಎಂದು ಹೇಳುವ ಮೂಲಕ ಪ್ರಕರಣದ ಹಿಂದಿರುವವರ ಬಗ್ಗೆ ತನಿಖೆಯ ಅಗತ್ಯವನ್ನು ಪ್ರಸ್ತಾಪಿಸಿದ್ದರು.

**ಕುಮಾರಸ್ವಾಮಿ ಹೇಳಿಕೆಯಿಂದ ರಾಜಕೀಯ ಚರ್ಚೆ:** ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರು ಸ್ಟಿಂಗ್ ಆಪರೇಷನ್ ವಿಚಾರವಾಗಿ ಸರಣಿ ಹೇಳಿಕೆಗಳನ್ನು ನೀಡಿದ್ದು, ರಾಜಕೀಯ ವಲಯದಲ್ಲಿ ಚರ್ಚೆ ತೀವ್ರಗೊಳ್ಳಲು ಕಾರಣವಾಗಿದೆ.

ಈ ಬೆಳವಣಿಗೆಗಳ ನಡುವೆ ವಿಡಿಯೋ ಪ್ರಸಾರಕ್ಕೆ ತಡೆಯಾಜ್ಞೆ ಕೋರಿ ದಾವೆ ಸಲ್ಲಿಕೆಯಾಗಿರುವುದು ಪ್ರಕರಣಕ್ಕೆ ಮತ್ತಷ್ಟು ಮಹತ್ವ ತಂದಿದೆ. ಅಕ್ಟೋಬರ್ 13ರಂದು ನಡೆಯಲಿರುವ ವಿಚಾರಣೆಯಲ್ಲಿ ನ್ಯಾಯಾಲಯದ ನಿಲುವು ಏನಿರಲಿದೆ ಎಂಬುದರ ಮೇಲೆ ಮುಂದಿನ ಬೆಳವಣಿಗೆಗಳು ಅವಲಂಬಿತವಾಗಿವೆ.

# ಅಗ್ನಿವೀರರಿಗೆ ಸರ್ಕಾರಿ ಉದ್ಯೋಗದಲ್ಲಿ ಮೀಸಲಾತಿ ನೀಡಿ: ಸಿ.ಟಿ. ರವಿ

● ವಿಕ್ರಮ ವಾಹಿನಿ | ಬೆಂಗಳೂರು

ಅಗ್ನಿವೀರರ ಭವಿಷ್ಯಕ್ಕೆ ಭದ್ರತೆ ಒದಗಿಸಲು ರಾಜ್ಯ ಸರ್ಕಾರಿ ಉದ್ಯೋಗಗಳಲ್ಲಿ ಮೀಸಲಾತಿ ಕಲ್ಪಿಸಬೇಕು ಹಾಗೂ ಗುತ್ತಿಗೆ ಮತ್ತು ಹೊರಗುತ್ತಿಗೆ ನೌಕರರಿಗೆ ಕನಿಷ್ಠ ವೇತನ ನಿಗದಿಪಡಿಸಿ, ಪ್ರತಿ ತಿಂಗಳ 5ರೊಳಗೆ ಸಂಬಳ ಪಾವತಿಸಬೇಕು ಎಂದು ವಿಧಾನ ಪರಿಷತ್ ಸದಸ್ಯ ಸಿ.ಟಿ. ರವಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಪತ್ರ ಬರೆದು ಒತ್ತಾಯಿಸಿದ್ದಾರೆ.

2027ರ ಆರಂಭದಲ್ಲಿ ಸೇವೆ ಪೂರ್ಣಗೊಳಿಸಿ ರಾಜ್ಯಕ್ಕೆ ಮರಳಲಿರುವ ಅಗ್ನಿವೀರರಿಗೆ ಪೊಲೀಸ್, ಅರಣ್ಯ, ಕಾರಾಗೃಹ ಮತ್ತು ಅಗ್ನಿಶಾಮಕ ಇಲಾಖೆ ಸೇರಿದಂತೆ ವಿವಿಧ ಸರ್ಕಾರಿ ಹುದ್ದೆಗಳಲ್ಲಿ ಮೀಸಲಾತಿ ಅಥವಾ ಆದ್ಯತೆ ನೀಡಲು ನೀತಿ ರೂಪಿಸಬೇಕು.

ಇತರ ರಾಜ್ಯಗಳ ಮಾದರಿಯನ್ನು ಅಧ್ಯಯನ ಮಾಡಿ, ಅಗ್ನಿವೀರರ ಕೌಶಲವನ್ನು ರಾಜ್ಯದ ಅಭಿವೃದ್ಧಿಗೆ ಬಳಸಿಕೊಳ್ಳಬೇಕು ಎಂದು ಮನವಿ ಮಾಡಿದ್ದಾರೆ.

ಇದೇ ವೇಳೆ, ಜಲ್ ಜೀವನ್ ಮಿಷನ್, ಇ–ಪಂಚಾಯಿತಿ, ಸ್ವಚ್ಛ ಭಾರತ್ ಮಿಷನ್ ಸೇರಿದಂತೆ ವಿವಿಧ ಯೋಜನೆಗಳಡಿ ಕಾರ್ಯನಿರ್ವಹಿಸುತ್ತಿರುವ ನೌಕರರಿಗೆ ಹಲವು ತಿಂಗಳಿಂದ ವೇತನ ಬಾಕಿಯಿರುವುದನ್ನು ಅವರು ಆಕ್ಷೇಪಿಸಿದ್ದಾರೆ.

ವಿಬಿ–ಜಿ ರಾಮ್‌ಜಿ ಯೋಜನೆಯಡಿ 7,157 ಸಿಬ್ಬಂದಿಗೆ ಐದು ತಿಂಗಳಿಂದ ಸಂಬಳ ಪಾವತಿಯಾಗಿಲ್ಲ ಎಂಬ ಮಾಹಿತಿಯನ್ನು ಪತ್ರದಲ್ಲಿ ಉಲ್ಲೇಖಿಸಿದ್ದಾರೆ.

ಬಾಕಿ ವೇತನವನ್ನು ತಕ್ಷಣ ಬಿಡುಗಡೆ ಮಾಡಿ, ಎಲ್ಲ ಇಲಾಖೆಗಳ ಗುತ್ತಿಗೆ ಮತ್ತು ಹೊರಗುತ್ತಿಗೆ ನೌಕರರಿಗೆ ನ್ಯಾಯಯುತ ಕನಿಷ್ಠ ವೇತನ ನಿಗದಿಪಡಿಸಬೇಕು.

ಪ್ರತಿ ತಿಂಗಳ 5ರೊಳಗೆ ವೇತನ ಪಾವತಿಯಾಗುವಂತೆ ಸ್ಪಷ್ಟ ಮಾರ್ಗಸೂಚಿ ರೂಪಿಸಿ, ವಿಳಂಬ ಮರುಕಳಿಸದಂತೆ ಕ್ರಮ ಕೈಗೊಳ್ಳಬೇಕು ಎಂದು ಸಿ.ಟಿ. ರವಿ ಆಗ್ರಹಿಸಿದ್ದಾರೆ.

# ದಸರಾ ಪುಸ್ತಕ ಮೇಳ: ಪುಸ್ತಕಗಳ ವೀಕ್ಷಿಸಿದ ಅಭಿನವ ಗವಿ ಸಿದ್ದೇಶ್ವರ ಸ್ವಾಮೀಜಿ

● ವಿಕ್ರಮ ವಾಹಿನಿ | ಮೈಸೂರು / ಬೆಂಗಳೂರು

ವಿಶ್ವವಿಖ್ಯಾತ ನಾಡಹಬ್ಬ ಮೈಸೂರು ದಸರಾ ಮಹೋತ್ಸವ 2026ರ ಉದ್ಘಾಟನೆಮಾಡಿದ ಕೊಪ್ಪಳದ ಗವಿಮಠದ ಶ್ರೀ ಅಭಿನವ ಗವಿ ಸಿದ್ದೇಶ್ವರ ಸ್ವಾಮೀಜಿ ಅವರು ದಸರಾ ಪುಸ್ತಕ ಮೇಳದಲ್ಲಿ ವಿವಿಧ ಪುಸ್ತಕಗಳನ್ನು ವೀಕ್ಷಣೆ ಮಾಡಿದರು.

ನಗರದ ಭಾರತ್ ಸೌಟ್ಸ್ ಮತ್ತು ಗೈಡ್ಸ್ ಮೈದಾನದಲ್ಲಿ ಮೈಸೂರು ದಸರಾ ಮಹೋತ್ಸವ–2026ರ ಅಂಗವಾಗಿ ಅ.11 ರಿಂದ 20ರವರೆಗೆ "ಕನ್ನಡ ಪುಸ್ತಕಗಳ ರಿಯಾಯಿತಿ ಮಾರಾಟ ಮೇಳವನ್ನು ಆಯೋಜಿಸಲಾಗಿದ್ದು, ಸೋಮವಾರ ದಸರಾ ಪುಸ್ತಕ ಮೇಳದ ಮಳಿಗೆಗಳಿಗೆ ಭೇಟಿಕೊಟ್ಟ ಅವರು, ಹಲವಾರು ಪುಸ್ತಕಗಳನ್ನು ವೀಕ್ಷಣೆ ಮಾಡಿ, ಪುಸ್ತಕದಲ್ಲಿನ ಬರವಣಿಗೆಯನ್ನು ಕಣ್ಣಾಡಿಸಿದರು.



ಸುಮಾರು ಒಂದು ಗಂಟೆಗೂ ಅಧಿಕ ಸಮಯವನ್ನು ಪುಸ್ತಕ ಮೇಳದಲ್ಲಿ ಪುಸ್ತಕಗಳ ವೀಕ್ಷಣೆಯಲ್ಲಿ ಕಳೆ ಸ್ವಾಮೀಜಿ ಅವರು, ಕೆಲವು ಪುಸ್ತಕಗಳ ಹೆಸರು ಮತ್ತು ಲೇಖಕರ ಹೆಸರನ್ನು ಸ್ವತಃ ತಮ್ಮ ನೋಟ್ ಪುಸ್ತಕದಲ್ಲಿ ಬರೆದುಕೊಂಡರು. ಸ್ವಾಮೀಜಿ ಅವರಿಗೆ ವಿವಿಧ ಪ್ರಕಾಶಕರು ತಮ್ಮ ಪ್ರಕಾಶನದಲ್ಲಿ ಮುದ್ರಣಗೊಂಡಿರುವ ಪುಸ್ತಕಗಳನ್ನು ನೀಡಿದರು.

ಈ ಸಂದರ್ಭದಲ್ಲಿ ಕನ್ನಡ ಪುಸ್ತಕ ಪ್ರಾಧಿಕಾರದ ಅಧ್ಯಕ್ಷ ಡಾ.ಮಾನಸ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಂಟಿ ನಿರ್ದೇಶಕಿ ಎಸ್.ನಿರ್ಮಲ ಮಠಾಪತಿ, ಕನ್ನಡ ಪುಸ್ತಕ ಪ್ರಾಧಿಕಾರ ಆಡಳಿತಾಧಿಕಾರಿ ಕೆ.ಬಿ.ಕಿರಣ್ ಸಿಂಗ್, ಮೈಸೂರು ಜಿಲ್ಲಾ ಸಾಹಿತ್ಯ ಪರಿಷತ್ ಮಾಜಿ ಅಧ್ಯಕ್ಷ ಚಂದ್ರಶೇಖರ್ ಸೇರಿದಂತೆ ಇತರರು ಇದ್ದರು.

# ದಾವಣಗೆರೆಯಲ್ಲಿ ಎಸ್‌ಐಆರ್ ಪೂರ್ಣ: 2 ಲಕ್ಷ ಹೆಸರು ಕೈಬಿಡಲು ಗುರುತು

● ವಿಕ್ರಮ ವಾಹಿನಿ | ದಾವಣಗೆರೆ

ಚುನಾವಣಾ ಆಯೋಗದ ಗಡುವಿಗಿಂತ 10 ದಿನ ಮೊದಲೇ ದಾವಣಗೆರೆ ಜಿಲ್ಲೆಯಲ್ಲಿ ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆ ಪೂರ್ಣಗೊಂಡಿದೆ. ಈ ಮೂಲಕ ರಾಜ್ಯದಲ್ಲೇ ಮೊದಲ ಜಿಲ್ಲೆಯಾಗುವ ಸಾಧ್ಯತೆಯಿದೆ.

ಜಿಲ್ಲೆಯ ಏಳು ವಿಧಾನಸಭಾ ಕ್ಷೇತ್ರಗಳಲ್ಲಿ 12.98 ಲಕ್ಷ ಮತದಾರರಿದ್ದು, ಪರಿಷ್ಕರಣೆ ವೇಳೆ ಮೃತಪಟ್ಟವರು ಹಾಗೂ ಒಂದಕ್ಕಿಂತ ಹೆಚ್ಚು ಕಡೆ ಹೆಸರು ಹೊಂದಿರುವವರನ್ನು ಒಳಗೊಂಡಂತೆ 2.01 ಲಕ್ಷ ಹೆಸರುಗಳನ್ನು ಪಟ್ಟಿಯಿಂದ ಕೈಬಿಡಲು ಗುರುತಿಸಲಾಗಿದೆ ಎಂದು ತಿಳಿದುಬಂದಿದೆ.

ನೇಪಾಳ ಮೂಲದ ಆರು ಮಂದಿ ಪತ್ತೆಯಾಗಿದ್ದು, ಅವರ ವಿರುದ್ಧ ಕಾನೂನು ಕ್ರಮಕ್ಕೆ ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ಸೂಚಿಸಿದ್ದಾರೆ ಎನ್ನಲಾಗಿದೆ. ರಾಜಕೀಯ ಪಕ್ಷಗಳ ಪ್ರತಿನಿಧಿಗಳ ಸಹಕಾರದೊಂದಿಗೆ ಪ್ರಕ್ರಿಯೆ ಪೂರ್ಣಗೊಂಡಿದ್ದು, ಯಾವುದೇ ದೂರು ಅಥವಾ ಎಫ್‌ಐಆರ್ ದಾಖಲಾಗಿಲ್ಲ ಎಂದು ವರದಿಯಾಗಿದೆ.

# 'ಕಾಲ ಉತ್ತರಿಸುತ್ತದೆ' ಎನ್ನುವುದು ತನಿಖೆಗೆ ಪರ್ಯಾಯವಲ್ಲ

## ಸಿದ್ದರಾಮಯ್ಯ ವಿರುದ್ಧದ ಸ್ಟಿಂಗ್ ಆರೋಪದ ಸತ್ಯಾಸತ್ಯತೆ ಬಯಲಾಗಲಿ; ತಪ್ಪಿತಸ್ಥರ ವಿರುದ್ಧ ಕ್ರಮಕ್ಕೆ ಆಗ್ರಹ

● ವಿಕ್ರಮ ವಾಹಿನಿ | ಬೆಂಗಳೂರು

ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಹೆಸರಿಗೆ ಕಳಂಕ ತರುವ ಉದ್ದೇಶದಿಂದ ಸ್ಟಿಂಗ್ ಆಪರೇಷನ್ ನಡೆಸಲಾಗಿದೆ ಎಂಬ ಆರೋಪದ ಸತ್ಯಾಸತ್ಯತೆ ಹೊರಬರಲು ರಾಜ್ಯ ಸರ್ಕಾರ ಸಮಗ್ರ ತನಿಖೆ ನಡೆಸಬೇಕು ಎಂದು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಆಗ್ರಹಿಸಿದರು. 'ಕಾಲವೇ ಉತ್ತರಿಸುತ್ತದೆ' ಎಂಬ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಹೇಳಿಕೆಗೆ ತಿರುಗೇಟು ನೀಡಿದ ಅವರು, ಕಾಲ ಉತ್ತರಿಸುತ್ತದೆ ಎನ್ನುವುದು ತನಿಖೆಗೆ ಪರ್ಯಾಯವಲ್ಲ ಎಂದು ಹೇಳಿದರು.

ಬೆಂಗಳೂರಿನಲ್ಲಿ ಸೋಮವಾರ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಸ್ಟಿಂಗ್ ಆಪರೇಷನ್ ಹಿಂದೆ ಯಾರಿದ್ದಾರೆ, ಯಾರು ಅದನ್ನು ನಡೆಸಿದ್ದಾರೆ ಮತ್ತು ಯಾರ ಪಾತ್ರವೇನು ಎಂಬುದನ್ನು ತನಿಖೆಯಿಂದ ಪತ್ತೆಹಚ್ಚಬೇಕು. ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಬೇಕು. ಸಿದ್ದರಾಮಯ್ಯ ಅವರೇ ತನಿಖೆಗೆ ಒತ್ತಾಯಿಸಿರುವಾಗ ಸರ್ಕಾರ ಹಿಂದೇಟು ಹಾಕುತ್ತಿರುವುದೇಕೆ ಎಂದು ಪ್ರಶ್ನಿಸಿದರು.

ರಾಜಕೀಯವಾಗಿ ಸಿದ್ದರಾಮಯ್ಯ ಅವರ ವಿರುದ್ಧ ಹೋರಾಟ ನಡೆಸಿದ್ದರೂ, ಮಾಜಿ ಮುಖ್ಯಮಂತ್ರಿಯ ಹೆಸರಿಗೆ ಉದ್ದೇಶಪೂರ್ವಕವಾಗಿ ಕಳಂಕ ತರುವ ಪ್ರಯತ್ನ ನಡೆದಿದ್ದರೆ ಸುಮ್ಮನಿರಲು ಸಾಧ್ಯವಿಲ್ಲ. ಇದು ಅನುಕಂಪ ಗಿಟ್ಟಿಸಿಕೊಳ್ಳುವ ಪ್ರಯತ್ನವಲ್ಲ; ಸತ್ಯ ಹೊರಬಂದು ತಪ್ಪಿತಸ್ಥರಿಗೆ ಶಿಕ್ಷೆಯಾಗಬೇಕು ಎಂಬುದಷ್ಟೇ ತಮ್ಮ ನಿಲುವು ಎಂದು ಸ್ಪಷ್ಟಪಡಿಸಿದರು.



**ಸಂಪುಟದ ಮಾಹಿತಿ ಸೋರಿಕೆ ಬಗ್ಗೆಯೂ ತನಿಖೆಯಾಗಲಿ:** ಸ್ಟಿಂಗ್ ಆಪರೇಷನ್‌ಗೆ ಸಂಬಂಧಿಸಿದ ಕಡತವನ್ನು ಮುಖ್ಯಮಂತ್ರಿ ಸಚಿವ ಸಂಪುಟದ ಸಭೆಗೆ ತೆಗೆದುಕೊಂಡು ಹೋಗಿರುವ ವಿಚಾರ ಪ್ರಸ್ತಾಪಿಸಿದ ಕುಮಾರಸ್ವಾಮಿ, ಸಂಪುಟದಲ್ಲಿ ನಡೆದ ಚರ್ಚೆಗಳ ಮಾಹಿತಿ ಹೊರಗೆ ಸೋರಿಕೆಯಾಗಿರುವುದು ಹೇಗೆ ಎಂಬುದನ್ನು ಪತ್ತೆಹಚ್ಚಬೇಕು ಎಂದರು.

ಪ್ರಕರಣದ ಕುರಿತು ಸರ್ಕಾರಕ್ಕೆ ಮಾಹಿತಿ ಇದ್ದರೂ ತನಿಖೆಗೆ ಮುಂದಾಗದಿರುವುದೇಕೆ? ಕಡತವನ್ನು ಸಂಪುಟಕ್ಕೆ ತೆಗೆದುಕೊಂಡು ಹೋಗಿ ಚರ್ಚಿಸಿದ ಬಳಿಕವೂ ಕ್ರಮ ಕೈಗೊಳ್ಳದಿರುವುದಕ್ಕೆ ಕಾರಣವೇನು? ಎಂದು ಪ್ರಶ್ನಿಸಿದರು. ತಮ್ಮ ಬಳಿ ಇರುವ ಪೆನ್‌ಡ್ರೈವ್ ಅಸಲಿಯದ್ದು ಎಂಬ ವಾದವನ್ನೂ ಉಲ್ಲೇಖಿಸಿದ ಅವರು, ಅದರ ಸತ್ಯಾಸತ್ಯತೆ ಸೇರಿದಂತೆ ಸ್ಟಿಂಗ್‌ಗೆ ಸಂಬಂಧಿಸಿದ ಎಲ್ಲ ಅಂಶಗಳನ್ನೂ ತನಿಖೆಗೊಳಪಡಿಸಬೇಕು ಎಂದು ಒತ್ತಾಯಿಸಿದರು.

ಈ ಪ್ರಕರಣದಲ್ಲಿ ಉತ್ತರ ಪ್ರದೇಶದಿಂದ ಬಂದವರು, ಕೇಂದ್ರ ಸಚಿವರು ಅಥವಾ ಬಿಜೆಪಿ ನಾಯಕರು ಭಾಗಿಯಾಗಿದ್ದಾರೆ ಎಂಬ ಆರೋಪಗಳಿದ್ದರೂ ಅವುಗಳನ್ನೂ ಪರಿಶೀಲಿಸಬೇಕು. ಸ್ಟಿಂಗ್‌ಗೆ ಸಂಬಂಧಿಸಿದ ವ್ಯಕ್ತಿಗೆ ಪೊಲೀಸ್ ರಕ್ಷಣೆ ನೀಡಿರುವುದರ ಬಗ್ಗೆಯೂ ಸ್ಪಷ್ಟನೆ ನೀಡಬೇಕು ಎಂದು ಹೇಳಿದರು.

**ಎಸ್‌ಐಆರ್ ಪ್ರಶ್ನಿಸುವ ಕಾಂಗ್ರೆಸ್‌ಗೆ ತಿರುಗೇಟು:** ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ವಿಚಾರದಲ್ಲಿ ಕಾಂಗ್ರೆಸ್‌ನ ನಿಲುವನ್ನು ಕುಮಾರಸ್ವಾಮಿ ಪ್ರಶ್ನಿಸಿದರು. ಮತದಾರರ ಪಟ್ಟಿಯ ಪರಿಷ್ಕರಣೆ ಹೊಸ ಪ್ರಕ್ರಿಯೆಯಲ್ಲ. ಮತದಾನದ ಹಕ್ಕು ಮಹತ್ವದ್ದಾದರೂ, ಈ ವಿಚಾರವನ್ನು ರಾಜಕೀಯವಾಗಿ ಬಳಸುವ ಮೊದಲು ಸರ್ಕಾರದ ಯೋಜನೆಗಳ ಅನುಷ್ಠಾನದಲ್ಲಿನ ಲೋಪಗಳ ಬಗ್ಗೆಯೂ ಕಾಂಗ್ರೆಸ್ ಗಮನಹರಿಸಬೇಕು ಎಂದರು.

ಗ್ಯಾರಂಟಿ ಯೋಜನೆಗಳ ಫಲಾನುಭವಿಗಳ ಪರಿಶೀಲನೆ ನಡೆಸುತ್ತಿರುವ ಸರ್ಕಾರ, ಎಸ್‌ಐಆರ್ ವಿಚಾರದಲ್ಲಿ ಮಾತ್ರ ಆಕ್ಷೇಪ ವ್ಯಕ್ತಪಡಿಸುತ್ತಿರುವುದೇಕೆ ಎಂದು ಪ್ರಶ್ನಿಸಿದರು. ಗೃಹಲಕ್ಷ್ಮಿ, ವಿಧವಾ ವೇತನ, ಅಂಗವಿಕಲರ ವೇತನ ಹಾಗೂ ವೃದ್ಧಾಪ್ಯ ವೇತನ ಯೋಜನೆಗಳಲ್ಲಿ 16ರಿಂದ 20 ಲಕ್ಷ ಫಲಾನುಭವಿಗಳ ಸಂಖ್ಯೆ ಕಡಿಮೆಯಾಗಿರುವುದಕ್ಕೆ ಸರ್ಕಾರ ಕಾರಣ ನೀಡಬೇಕು ಎಂದು ಆಗ್ರಹಿಸಿದರು.

ಮೃತರ ಖಾತೆಗಳಿಗೆ ಹಣ ಜಮೆಯಾಗಿರುವ ಪ್ರಕರಣಗಳನ್ನು ಉಲ್ಲೇಖಿಸಿದ ಅವರು, ಅನರ್ಹರು ಹಾಗೂ ಮೃತರ ಹೆಸರಿನಲ್ಲಿ ಹಣ ಪಡೆಯುವುದನ್ನು ತಡೆಯಲು ಫಲಾನುಭವಿಗಳ ಪರಿಶೀಲನೆ ಅಗತ್ಯ. ಅಂತಹ ಪರಿಶೀಲನೆಗೆ ಸರ್ಕಾರವೇ ಮುಂದಾಗಿರುವಾಗ ಮತದಾರರ ಪಟ್ಟಿ ಪರಿಷ್ಕರಣೆಯನ್ನು ಮಾತ್ರ ರಾಜಕೀಯ ವಿವಾದವನ್ನಾಗಿ ಮಾಡುವುದು ಸರಿಯಲ್ಲ ಎಂದು ಅಭಿಪ್ರಾಯಪಟ್ಟರು.

**ಮುಖ್ಯ ನ್ಯಾಯಮೂರ್ತಿಗಳನ್ನು ರಾಜಕೀಯಕ್ಕೆ ಎಳೆಯುವುದು ಸರಿಯಲ್ಲ:** ಸುಪ್ರೀಂ ಕೋರ್ಟ್ ಮುಖ್ಯ ನ್ಯಾಯಮೂರ್ತಿಗಳನ್ನು ರಾಜಕೀಯ ವಿವಾದಕ್ಕೆ ಎಳೆಯುವುದು ಸೂಕ್ತವಲ್ಲ ಎಂದು ಹೇಳಿದ ಕುಮಾರಸ್ವಾಮಿ, ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಸಾಂವಿಧಾನಿಕ ಸಂಸ್ಥೆಗಳು ಮತ್ತು ಸಾಂವಿಧಾನಿಕ ಹುದ್ದೆಗಳನ್ನು ಅಲಂಕರಿಸಿರುವವರ ಬಗ್ಗೆ ಗೌರವ ಹೊಂದಿರಬೇಕು ಎಂದು ಟೀಕಿಸಿದರು. ಎಸ್‌ಐಆರ್ ವಿಚಾರವಾಗಿ ಮುಖ್ಯ ನ್ಯಾಯಮೂರ್ತಿಗಳನ್ನು ಭೇಟಿಯಾಗಲು ಸಮಯ ಕೋರಿರುವ ಕ್ರಮದ ಉದ್ದೇಶವೇನು ಎಂಬುದನ್ನೂ ಪ್ರಶ್ನಿಸಿದರು.

**ಅರಮನೆ ಫೋಟೋಶೂಟ್ ಕುರಿತು ಟೀಕೆ:** ಸ್ಟಿಂಗ್ ಪ್ರಕರಣದ ಬಗ್ಗೆ ಸ್ಪಷ್ಟನೆ ನೀಡುವ ಬದಲು ಮುಖ್ಯಮಂತ್ರಿ ಮೈಸೂರು ಅರಮನೆಯಲ್ಲಿ ಫೋಟೋಶೂಟ್ ಮಾಡಿಸಿಕೊಳ್ಳುತ್ತಿದ್ದಾರೆ ಎಂದು ಕುಮಾರಸ್ವಾಮಿ ವ್ಯಂಗ್ಯವಾಡಿದರು. ಸಿಂಹಾಸನದ ಮುಂದೆ ಕುಳಿತು ಫೋಟೋ ತೆಗೆಸಿಕೊಳ್ಳುವುದನ್ನು ಹೊಸ ಸಂಸ್ಕೃತಿಯಂತೆ ಪ್ರದರ್ಶಿಸಲಾಗುತ್ತಿದೆ ಎಂದು ಟೀಕಿಸಿದರು.

ರಾಜ್ಯದಲ್ಲಿ ಇಂತಹ ಘಟನೆಗಳು ಮುಂದುವರಿದರೆ ಜನರು ಹೇಗೆ ಬದುಕಬೇಕು ಎಂಬ ಆತಂಕವಿದೆ. ಸ್ಟಿಂಗ್ ಆರೋಪದ ಸಮಗ್ರ ತನಿಖೆ ನಡೆಸಿ ಸತ್ಯವನ್ನು ಜನರ ಮುಂದಿಡಬೇಕು ಎಂದು ಅವರು ಪುನರುಚ್ಚರಿಸಿದರು.

ಜೆಡಿಎಸ್ ಕೋರ್ ಕಮಿಟಿ ಅಧ್ಯಕ್ಷ ಎಂ. ಕೃಷ್ಣಾರೆಡ್ಡಿ, ಶಾಸಕ ಮೇಲೂರು ರವಿ, ಗ್ರೇಟರ್ ಬೆಂಗಳೂರು ಜೆಡಿಎಸ್ ಅಧ್ಯಕ್ಷ ಎಚ್.ಎಂ. ರಮೇಶ್ ಗೌಡ ಸೇರಿದಂತೆ ಹಲವು ಮುಖಂಡರು ಉಪಸ್ಥಿತರಿದ್ದರು.

Vikrama Vahini Kannada Daily, #204, Forest Layout, Jnanabharathi, Bangalore-560095
PRGI NO: KARKAN/2018/78481
vikramavahini@gmail.com
93535 91145
Printed by B.N. Murali Prasad, Published by Swarna Latha B.N., and Printed at Swarna Graphics, Forest Layout, Jnanabharathi, Bangalore -560059 and Published at Bangalore, Editor: B.N. Murali Prasad., Volume:9, Issue : 187,